5	2405-00-101-0-01 ತರಬೇತಿ ಮತ್ತು ಪ್ರದರ್ಶನ	0.20	0.20	0.20	0
6	2401-00-800-1-57 (422) (423) ಆರ್.ಕೆ.ವಿ.ವೈ.ಯೋಜನೆ	2.90	2.90	2.90	0
7	ಜಲಾಶಯಗಳಲ್ಲಿ ಮೀನುಮರಿ ಬಿತ್ತನೆ 2405-00-101-0-54	21.312	21.312	21.312	0
8	2405-00-101-0-58 ನೀಲಿಕ್ರಾಂತಿ ಯೋಜನೆ		2.52	2.52	0
	ಜಿಲ್ಲಾ ಪಂಚಾಯತ್				
1	2405-00-101-0-28 ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ (090) (422) (423)	40.00	40.00	32.79964	7.20036
2	2405-00-101-0-30(100) ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	8.50	8.50	8.43249	0.06751
3	2405-00-101-0-32 (090) ಪ್ರದರ್ಶನಗಳು ಮತ್ತು ತರಬೇತಿ	5.51	5.51	5.026	0.48354

ಅನುಬಂಧ-2

ವಿಧಾನ ಸಭಾ ಸದಸ್ಯರಾದ ಶ್ರೀ. ಮಸಾಲಾ ಜಯರಾಂ, (ತುರುವೇಕೆರೆ) ರವರ ಚುಕ್ಕೆಗುರುತಿನ ಪ್ರಶ್ನೆ ಸಂ. 2771

ಜಿಲ್ಲೆಯ ಹೆಸರು: ಚಿಕ್ಕಮಗಳೂರು

(ರೂ. ಲಕ್ಷಗಳಲ್ಲಿ)

ಕ್ರ ಸಂ	ಯೋಜನೆಯ ಹೆಸರು	ಲೆಕ್ಕ ಶೀರ್ಷಿಕೆ	ಜಿಲ್ಲೆ	2019-20 (ಈವರೆಗೆ)		
				ಅನುದಾನ	ಬಳಕೆಯಾಗಿರುವ ಅನುದಾನ	ಉಳಿದ ಅನುದಾನ
1	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ	2405-00-110-0-02		7.97	7.97	0
2	ಮೀನು ಮರಿ ಖರೀದಿಸಲು ನೆರವು	2405-00-101-0-03		0.71	0.704	0.006
3	ಒಳನಾಡು ಮೀನುಗಾರಿಕೆ ಫೈಬರ್‌ಗ್ಲಾಸ್ ಹರಿಗೋಲು ವಿತರಣೆ	2405-00-101-0-56		0	0	0
4	ಮೀನುಗಾರಿಕೆ ಸಲಕರಣೆ ಕಿಟ್ಟು ಹಾಗೂ ಫೈಬರ್‌ಗ್ಲಾಸ್ ಹರಿಗೋಲು ಖರೀದಿಗೆ ಸಹಾಯ (ವಿ.ಘ.ಯೋ/ಗಿ.ಉ.ಯೋ)	2405-00-101-0-66		0	0	0
5	ನಾಲ್ಕು ಚಕ್ರ ಮೀನು ಸಾಗಾಣಿಕೆ ವಾಹನ ಖರೀದಿಗೆ ಸಹಾಯ	2405-00-101-0-66		0	0	0
6	ಜಲಾಶಯಗಳಲ್ಲಿ ಮೀನುಮರಿ ಬಿತ್ತನೆ	2405-00-101-0-54		14.04	14.04	0
7	ಆರ್.ಕೆ.ವಿ.ವೈ ಯೋಜನೆಯಡಿ ಜಲಾಶಯಗಳಿಗೆ ಮೀನುಮರಿ ಬಿತ್ತನೆ	2401-00-800-1-57	ಚಿಕ್ಕಮಗಳೂರು	0	0	0
8	ಸಂಕಷ್ಟ ಪರಿಹಾರ ನಿಧಿ	2405-00-103-0-15		0	0	0
9	ನೀಲಿಕ್ರಾಂತಿ ಯೋಜನೆ	2405-00-101-0-58		9.06	9.06	0
10	ಸಂಶೋಧನೆ, ವಿಸ್ತರಣೆ ಪ್ರದರ್ಶನ ಮತ್ತು ತರಬೇತಿ	2405-00-109-0-01		0.60	0.60	0.60
11	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್ಸ್ ವಿತರಣೆ	2401-00-800-1-57		1.70	1.70	0
12	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಫೈಬರ್‌ಗ್ಲಾಸ್ ಹರಿಗೋಲು ವಿತರಣೆ	2401-00-800-1-57		0.30	0.267	0.033
13	ಮತ್ಸ್ಯಕೃಷಿ ಆಶಾಕಿರಣ	2405-00-101-0-03		3.158	3.158	0
ಜಿಲ್ಲಾ ಪಂಚಾಯತ್ ಯೋಜನೆಗಳು						
14	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	2405-00-101-0-28		29.00	26.62	2.38
15	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	2405-00-101-0-30	ಚಿಕ್ಕಮಗಳೂರು	5.00	4.80	0.20
16	ಪ್ರದರ್ಶನಗಳು ಮತ್ತು ತರಬೇತಿ	2405-00-101-0-32		2.00	2.00	-

ಅನುಬಂಧ-2

ಮೀನುಗಾರಿಕೆ ಇಲಾಖೆಯ 2019-20ನೇ ಸಾಲಿನ ಪ್ರಗತಿ ವಿವರ (ವಿಧಾನ ಸಭೆ ಪ್ರಶ್ನೆ ಸಂಖ್ಯೆ 2771 ಕ್ಕೆ ನಮೂನೆ)

ಜಿಲ್ಲೆಯ ಹೆಸರು: ಚಿತ್ರದುರ್ಗ

(ರೂ. ಲಕ್ಷಗಳಲ್ಲಿ)

ಕ್ರ ಸಂ	ಯೋಜನೆಯ ಹೆಸರು/ಲೆಕ್ಕಶೀರ್ಷಿಕೆ	2019-20		
		ಅನುದಾನ	ಬಿಡುಗಡೆ	ವೆಚ್ಚ
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ 2405-00-101-0-03	0	0	0
2	ಮೀನು ಮರಿ ಖರೀದಿಸಲು ನೆರವು 2405-00-101-0-28(106)	0.83	0.83	0.83
3	ಒಳನಾಡು ಮೀನುಗಾರರಿಗೆ ಫೈಬರ್ ಗ್ಲಾಸ್ ಹರಿಗೋಲು ವಿತರಣೆ 2405-00-101-0-56(422)	0.00	0.00	0.00
	ಒಳನಾಡು ಮೀನುಗಾರರಿಗೆ ಫೈಬರ್ ಗ್ಲಾಸ್ ಹರಿಗೋಲು ವಿತರಣೆ 2405-00-101-0-56(423)	0	0	0
4	ನೀಲಿಕ್ರಾಂತಿ 2405-00-101-0-58	1.68	1.68	1.68
5	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ 2405-00-110-0-02(106)	8.00	8.00	8.00
	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ 2405-00-110-0-02(422)	0.00	0.00	0.00
	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ 2405-00-110-0-02 (423)	0.00	0.00	0.00
6	ವಿಶೇಷ ಅನುದಾನ ವಿಘಯೋ/ಗಿ.ಉ.ಯೋ 1) ಮೀನುಗಾರಿಕೆ ಸಲಕರಣೆ ಕಿಟ್ ಮತ್ತು ಫೈಬರ್ ಗ್ಲಾಸ್ ಹರಿಗೋಲು ಖರೀದಿಗೆ ಸಹಾಯ (422)	0.00	0.00	0.00
	ವಿಶೇಷ ಅನುದಾನ ವಿಘಯೋ/ಗಿ.ಉ.ಯೋ 1) ಮೀನುಗಾರಿಕೆ ಸಲಕರಣೆ ಕಿಟ್ ಮತ್ತು ಫೈಬರ್ ಗ್ಲಾಸ್ ಹರಿಗೋಲು ಖರೀದಿಗೆ ಸಹಾಯ (423)	0	0	0
	ವಿಶೇಷ ಅನುದಾನ ವಿಘಯೋ/ಗಿ.ಉ.ಯೋ 2) ಮೀನುಸಾಕಾಣಿಕೆ ಕೊಳ ನಿರ್ಮಾಣಕ್ಕೆ ಸಹಾಯಧನ (422)	0	0	0
	ವಿಶೇಷ ಅನುದಾನ ವಿಘಯೋ/ಗಿ.ಉ.ಯೋ 3) ಮೀನುಸಾಕಾಣಿಕೆ, ವಾಹನ ಖರೀದಿಗೆ ಸಹಾಯ(422)	0.00	0.00	0.00
	ವಿಶೇಷ ಅನುದಾನ ವಿಘಯೋ/ಗಿ.ಉ.ಯೋ 3) ಮೀನುಸಾಕಾಣಿಕೆ, ವಾಹನ ಖರೀದಿಗೆ ಸಹಾಯ(423)	0.00	0.00	0.00
7	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ : ಮೀನುಗಾರಿಕೆ ಸಲಕರಣೆ ಕಿಟ್ಟು 2401-00-800-1-57(106)	0.00	0.00	0.00
(ರಾಜ್ಯವಲಯ) ಒಟ್ಟು ಮೊತ್ತ		**12.51**	**12.51**	**12.51**
ಜಿಲ್ಲಾ ಪಂಚಾಯತ್ ಯೋಜನೆಗಳು				
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	10.19	10.19	10.19
2	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	1.00	0.90	0.90
3	ಪ್ರದರ್ಶನಗಳು ಮತ್ತು ತರಬೇತಿ	0.96	0.96	0.96

ಅನುಬಂಧ-2

ಮೀನುಗಾರಿಕೆ ಇಲಾಖೆಯ 2019-20ನೇ ಸಾಲಿನ ಪ್ರಗತಿ ವಿವರ
(ವಿಧಾನ ಸಭೆ ಪ್ರಶ್ನೆ ಸಂಖ್ಯೆ 2771 ಕ್ಕೆ ನಮೂನೆ)

ಜಿಲ್ಲೆಯ ಹೆಸರು: ದಾವಣಗೆರೆ

ಕ್ರ. ಸಂ	ಯೋಜನೆಯ ಹೆಸರು/ಲೆಕ್ಕಶೀರ್ಷಿಕೆ	2019-20		
		ಅನುದಾನ	ಬಿಡುಗಡೆ	ವೆಚ್ಚ
1	ಮೀನು ಮರಿ ಖರೀದಿಸಲು ನೆರವು 2405-00-101-0-28(106)	1.718	1.718	1.718
2	ಒಳನಾಡು ಮೀನುಗಾರರಿಗೆ ಫೈಬರ್ ಗ್ಲಾಸ್ ಹರಿಗೋಲು ವಿತರಣೆ 2405-00-101-0-56(106)	0	0	0
3	ನೀಲಿಕ್ರಾಂತಿ 2405-00-101-0-58	0	0	0
4	ಮೀನು ಮಾರುಕಟ್ಟೆ ನಿರ್ಮಾಣಕ್ಕೆ ಸಹಾಯ 2405-00-105-0-09	1.70	1.70	1.70
5	ಸಂಶೋಧನೆ, ವಿಸ್ತರಣೆ ಪ್ರದರ್ಶನ ಮತ್ತು ತರಬೇತಿ 2405-00-109-0-01	0.20	0.20	0.20
6	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ 2405-00-110-0-02(106)	8.00	8.00	8.00
7	ಮತ್ಸ್ಯಕೃಷಿ ಆಶಾ ಕಿರಣ ಯೋಜನೆ	5.93	5.93	5.93
7	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ : ಮೀನುಗಾರಿಕೆ ಸಲಕರಣೆ ಕಿಟ್ಟು 2401-00-800-1-57(422)	1.00	1.00	1.00
	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ : ಮೀನುಗಾರಿಕೆ ಸಲಕರಣೆ ಕಿಟ್ಟು 2401-00-800-1-57(423)	1.00	1.00	1.00
ಒಟ್ಟು ಮೊತ್ತ		**19.55**	**19.55**	**19.55**
	ಜಿಲ್ಲಾ ಪಂಚಾಯತ್ ಯೋಜನೆಗಳು			
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ2405-00-101-0-28 (090)	18.00	18.00	17.14
ಅ	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ (422)	5.00	5.00	5.00
ಆ	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ (423)	3.00	3.00	3.00
2	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ 2405-00-101-0-30(100)	1.70	1.70	1.70
3	ಪ್ರದರ್ಶನಗಳು ಮತ್ತು ತರಬೇತಿ 2405-00-101-0-32(090)	2.40	2.40	2.40

ಅನುಬಂಧ –2

<u>ಮೀನುಗಾರಿಕೆ ಇಲಾಖೆಯ 2019–20ನೇ ಸಾಲಿನಲ್ಲಿ ನೀಡಿರುವ ಅನುದಾನ, ವೆಚ್ಚ ಹಾಗೂ ಉಳಿಕೆ ವಿವರ (ವಿಧಾನ ಸಭೆ ಪ್ರಶ್ನೆ ಸಂಖ್ಯೆ: 2771ಕ್ಕೆ ನಮೂನೆ)</u>

ಜಿಲ್ಲೆಯ ಹೆಸರು: ಮೈಸೂರು.

ಕ್ರ. ಸಂ	ಯೋಜನೆಯ ಹೆಸರು	2019-20			
		ಅನುದಾನ	ಬಿಡುಗಡೆ	ವೆಚ್ಚ	ಉಳಿಕೆ
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಮತ್ಸ್ಯ ಕೃಷಿ ಆಧುನೀಕರಣ	13.50	13.50	13.50	0.00
2	ಮೀನು ಮರಿ ಖರೀದಿಸಲು ನೆರವು	3.86	3.86	3.86	0.00
3	ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ (ವಿಶೇಷ ಘಟಕ ಯೋಜನೆ)	0.11	0.11	0	0.11
4	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ	9.00	9.00	9.00	0.00
5	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಹರಿಗೋಲು	1.50	1.50	1.50	0.00
ಜಿಲ್ಲಾ ಪಂಚಾಯತ್ ಯೋಜನೆಗಳು					
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	30.86	30.86	29.82	1.04
2	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	3.00	3.00	3.00	0.00
3	ಪ್ರದರ್ಶನಗಳು ಮತ್ತು ತರಬೇತಿ	5.00	5.00	4.14	0.86

ಅನುಬಂಧ –2

ಮೀನುಗಾರಿಕೆ ಇಲಾಖೆಯ 2019–20ನೇ ಸಾಲಿನಲ್ಲಿ ನೀಡಿರುವ ಅನುದಾನ, ವೆಚ್ಚ ಹಾಗೂ ಉಳಿಕೆ ವಿವರ (ವಿಧಾನ ಸಭೆ ಪ್ರಶ್ನೆ ಸಂಖ್ಯೆ: 2771ಕ್ಕೆ ನಮೂನೆ)

ಜಿಲ್ಲೆಯ ಹೆಸರು: ಮಂಡ್ಯ

ಕ್ರ ಸಂ	ಸಾಮಾನ್ಯ ಯೋಜನಾ ಕಾರ್ಯಕ್ರಮ	2019–20 (ಫೆಬ್ರವರಿ–2020 ಅಂತ್ಯಕ್ಕೆ)			
		ಅನುದಾನ	ಬಿಡುಗಡೆ	ವೆಚ್ಚ	ಉಳಿಕೆ
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	15.55	15.55	15.55	0.00
2	ಮೀನುಮರಿ ಖರೀದಿಗೆ ಸಹಾಯಧನ	0.85	0.85	0.85	0.00
3	ನೀಲಿ ಕ್ರಾಂತಿ	1.52	1.52	1.52	0.00
4	ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ	0.10	0.10	0.10	0.00
5	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ	9.00	9.00	9.00	0.00
6	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ	2.50	2.50	2.50	0.00
ಜಿಲ್ಲಾ ಪಂಚಾಯತ್ ಯೋಜನೆಗಳು					
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	30.00	30.00	13.23	16.77
2	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	5.00	5.00	0.00	5.00
3	ವಸ್ತು ಪ್ರದರ್ಶನ ಮತ್ತು ತರಬೇತಿ	5.00	5.00	0.88	4.12

ಅನುಬಂಧ –2

ಮೀನುಗಾರಿಕೆ ಇಲಾಖೆಯ 2019–20ನೇ ಸಾಲಿನಲ್ಲಿ ನೀಡಿರುವ ಅನುದಾನ, ವೆಚ್ಚ ಹಾಗೂ ಉಳಿಕೆ ವಿವರ
(ವಿಧಾನ ಸಭೆ ಪ್ರಶ್ನೆ ಸಂಖ್ಯೆ: 2771ಕ್ಕೆ ನಮೂನೆ)

ಜಿಲ್ಲೆಯ ಹೆಸರು: ಚಾಮರಾಜನಗರ.

ಕ್ರ ಸಂ	ಯೋಜನೆಯ ಹೆಸರು	2019–20			
		ಅನುದಾನ	ಬಿಡುಗಡೆ	ವೆಚ್ಚ	ಉಳಿಕೆ
1	ಮೀನು ಮರಿ ಖರೀದಿಸಲು ನೆರವು	2.03	2.03	2.03	0
2	ನೀಲಿ ಕ್ರಾಂತಿ	5.92	5.92	5.92	0.00
3	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ	5.00	5.00	5.00	0
4	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ	3.00	3.00	3.00	0
ಜಿಲ್ಲಾ ಪಂಚಾಯತ್ ಯೋಜನೆಗಳು					
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	2.00	2.00	2.00	0
2	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	3.60	3.60	3.60	0
3	ಪ್ರದರ್ಶನಗಳು ಮತ್ತು ತರಬೇತಿ	1.11	1.11	1.11	0

ಅನುಬಂಧ –2

ಮೀನುಗಾರಿಕೆ ಇಲಾಖೆಯ 2019–20ನೇ ಸಾಲಿನಲ್ಲಿ ನೀಡಿರುವ ಅನುದಾನ, ವೆಚ್ಚ ಹಾಗೂ ಉಳಿಕೆ ವಿವರ

(ವಿಧಾನ ಸಭೆ ಪ್ರಶ್ನೆ ಸಂಖ್ಯೆ: 2771ಕ್ಕೆ ನಮೂನೆ)

ಜಿಲ್ಲೆಯ ಹೆಸರು: ಕೊಡಗು

ಕ್ರ ಸಂ	ಯೋಜನೆಯ ಹೆಸರು	2019–20			
		ಅನುದಾನ	ಬಿಡುಗಡೆ	ವೆಚ್ಚ	ಉಳಿಕೆ
1	ಮೀನು ಮರಿ ಖರೀದಿಸಲು ನೆರವು	0.53	0.53	0.53	0.00
2	ಒಳನಾಡು ಮೀನುಗಾರರಿಗೆ ಫೈಬರ್ ಗ್ಲಾಸ್ ಹರಿಗೋಲು ವಿತರಣೆ	0.00	0.00	0.00	0.00
3	ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ	7.00	7.00	7.00	0.00
4	ಸಂಶೋಧನೆ, ವಿಸ್ತರಣೆ ಪ್ರದರ್ಶನ ಮತ್ತು ತರಬೇತಿ	0.20	0.20	0.20	0.00
5	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ	4.00	4.00	4.00	0.00
6	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ	2.00	2.00	2.00	0.00
7	ಮತ್ಸ್ಯಕೃಷಿ ಆಶಾಕಿರಣ	0.56	0.56	0.56	0.00
ಜಿಲ್ಲಾ ಪಂಚಾಯತ್ ಯೋಜನೆಗಳು					
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	5.00	5.00	4.32	0.68
2	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	2.55	2.55	2.55	0.00
3	ಪ್ರದರ್ಶನಗಳು ಮತ್ತು ತರಬೇತಿ	1.50	1.50	1.34	0.16

ಅನುಬಂಧ -2

ಮೀನುಗಾರಿಕೆ ಇಲಾಖೆಯು 2019-20ನೇ ಸಾಲಿನಲ್ಲಿ ನೀಡಿರುವ ಅನುದಾನ, ವೆಚ್ಚ ಹಾಗೂ ಉಳಿಕೆ ವಿವರ (ವಿಧಾನ ಸಭೆ ಪ್ರಶ್ನೆ ಸಂಖ್ಯೆ: 2771ಕ್ಕೆ ನಮೂನೆ)

ಜಿಲ್ಲೆಯ ಹೆಸರು: ಹಾಸನ

ರೂ.ಲಕ್ಷ

ಕ್ರ. ಸಂ	ಯೋಜನೆಯ ಹೆಸರು	2019-20			
		ಅನುದಾನ	ಬಿಡುಗಡೆ	ವೆಚ್ಚ	ಉಳಿಕೆ
1	ಮೀನು ಮರಿ ಖರೀದಿಸಲು ನೆರವು	0.39	0.39	0.39	0.00
2	ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ	14.90	14.90	14.90	0.00
3	ನೀಲಿ ಕ್ರಾಂತಿ	0.76	0.76	0.76	0.00
4	ಮತ್ಸ್ಯಾಶ್ರಯ ಯೋಜನೆ	23.38	23.38	23.38	0.00
5	ಸಲಕರಣೆ ಕಿಟ್ಟುಗಳ ವಿತರಣೆ	9.00	9.00	9.00	0.00
6	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ	2.00	2.00	2.00	0.00
ಜಿಲ್ಲಾ ಪಂಚಾಯತ್ ಯೋಜನೆಗಳು					
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	21.00	21.00	17.52	3.48
2	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	2.70	2.70	2.70	0.00
3	ಪ್ರದರ್ಶನಗಳು ಮತ್ತು ತರಬೇತಿ	4.05	4.05	4.05	0.00

ವಿಧಾನ ಸಭೆ ಸದಸ್ಯರಾದ ಶ್ರೀ/ಶ್ರೀಮತಿ ಮಸಾಲ ಜಯರಾಮ್ (ತುರುವೇಕೆರೆ) ಅವರ ಪ್ರಶ್ನೆ ಸಂಖ್ಯೆ 2771ಕ್ಕೆ ಉತ್ತರ ಒದಗಿಸುವ ಬಗ್ಗೆ.
ದಿನಾಂಕ:19.03.2020ಕ್ಕೆ ಇದ್ದಂತೆ

ಕ್ರ ಸಂ	ಜಿಲ್ಲೆಯ ಹೆಸರು: ಯೋಜನೆಯ ಹೆಸರು	ಲೆಕ್ಕ ಶೀರ್ಷಿಕೆ	ರೂ.ಲಕ್ಷ 2019-20 ಬಿಡುಗಡೆಯಾದ ಅನುದಾನ	ವೆಚ್ಚ	ಉಳಿಕೆ	ಷರಾ
1	ನೀಲಿಕ್ರಾಂತಿ	2405-00-101-0-58	29871619.00	29871619.00	0.00	ರೂ 1392204 ರ ಮೊತ್ತದ ಬಿಲ್ಲು ಖಜಾನೆಯಲ್ಲಿ ಸಲ್ಲಿಸಲಾಗಿದೆ
2	ರಾಜ್ಯ ವಲಯ ಬಲೆಗಳ ಕಿಟ್	2405-00-101-0-007(105)	1000000.00	984528.00	15472.00	
3	ಮೀನುಗಾರಿಕೆ ದೋಣಿಗಳಿಗೆ ಡೀಸೆಲ್ - ಮಾರಾಟ ತೆರಿಗೆ ಮರುಪಾವತಿ	2405-00-103-0-23(059)	666097152.00	666097152.00	0.00	
		2405-00-103-0-23(422)	2960964.00	2960964.00	0.00	ರೂ 408391ರ ಈ ಮೊತ್ತದ ಬಿಲ್ಲು ಖಜಾನೆಯಲ್ಲಿ ಸಲ್ಲಿಸಲಾಗಿದೆ
4	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ	2401-00-800-1-57(422)	100000.00	95536.00	4464.00	
		2401-00-800-1-57(423)	20000.00	19394.00	606.00	
5	ಸಂಶೋಧನೆ, ವಿಸ್ತರಣೆ ಪ್ರವರ್ತನೆಗಳು ಮತ್ತು ತರಬೇತಿ	2401-00-800-1-57(051)	100000.00	100000.00	0.00	ಮೀನು ಕೃಷಿಕರ ದಿನಾಚರಣೆ, ಕೆವಿಕೆ ಕಾರ್ಯಕ್ರಮದಲ್ಲಿ ಸಾಧನೆಯ ಬಗ್ಗೆ ಮಾಹಿತಿ ಮಳಿಗೆ ಹಾಕಿ, ಮಾಹಿತಿ ನೀಡಿದ ಬಗ್ಗೆ ಕಾರ್ಯ ಕ್ರಮದ ಬಗ್ಗೆ ಪೋಸ್ಟರ್ ಪ್ರದರ್ಶನ ಮಾಡಿದೆ
6	ಒಳನಾಡು ಕೃಷಿಗೆ ಸಹಾಯಧನ (ಬಲೆ ಮತ್ತು ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ)	2405-00-101-0-03(059&106)	5257000.00	5256580.00	420.00	
7	ಮೀನುಗಾರರ ಸಹಕಾರ ಸಂಘಗಳಿಗೆ ಪ್ರೋತ್ಸಾಹ ಮತ್ತು ಸಹಾಯಧನ	2405-00-195-0-01	11812569.00	11812569.00	0.00	
	ಒಟ್ಟು		717219304.00	717198342.00	20962.00	

Scanned with CamScanner

ಅನುಬಂಧ-2

ಮೀನುಗಾರಿಕೆ ಇಲಾಖೆಯ 2019-20ನೇ ಸಾಲಿನ ಪ್ರಗತಿ ವಿವರ (ವಿಧಾನ ಸಭೆ ಪ್ರಶ್ನೆ ಸಂಖ್ಯೆ 277) ಕ್ಕೆ ನಮೂನೆ)

ಜಿಲ್ಲೆಯ ಹೆಸರು: ದ.ಕ ರೂ.ಲಕ್ಷಗಳಲ್ಲಿ

ಕ್ರ ಸಂ	ಯೋಜನೆಯ ಹೆಸರು	2019-20		
		ಅನುದಾನ	ಬಿಡುಗಡೆ	ವೆಚ್ಚ
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	7.5	7.5	0
2	ನೀಲಿ ಕ್ರಾಂತಿ	211.60	211.60	211.60
3	ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ	-	-	-
5	ಸಂಕಷ್ಟ ಪರಿಹಾರ ನಿಧಿ	15.50	15.50	15.50
6	ಸಾಂಪ್ರದಾಯಿಕ ದೋಣಿಗಳಿಗೆ ಸೀಮೆ ಎಣ್ಣೆ ವಿತರಣೆ (ಸೀಮೆ ಎಣ್ಣೆ ಪ್ರಮಾಣ ಲಕ್ಷ ಲೀಟರ್‌ಗಳಲ್ಲಿ)	-	-	3168
7	ಮತ್ಸ್ಯಾಶ್ರಯ ಯೋಜನೆ	-	-	-
8	ಸುಧಾರಿತ ಮಾದರಿಯ ಯಾಂತ್ರಿಕೃತ ದೋಣಿಗಳ ನಿರ್ಮಾಣ	-	-	-
9	ಮೀನುಗಾರಿಕೆ ದೋಣಿಗಳಿಗೆ ಡೀಸಲ್ - ಮಾರಾಟ ತೆರಿಗೆ ಮರುಪಾವತಿ	5743.59	5743.59	5743.59
10	ಮೀನು ಮಾರುಕಟ್ಟೆ ನಿರ್ಮಾಣಕ್ಕೆ ಸಹಾಯ	7.5	7.5	7.5
11	ಸಂಶೋಧನೆ, ವಿಸ್ತರಣೆ ಪ್ರದರ್ಶನ ಮತ್ತು ತರಬೇತಿ	0.20	0.20	0.20
12	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ	5.00	5.00	5.00
13	ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ	89.59	89.59	89.59
14	ಮೀನುಗಾರರ ಕಲ್ಯಾಣ ಯೋಜನೆಗಳು ಕೆ.ಪು.ಯೋ.			
ಅ	ಉಳಿತಾಯ ಮತ್ತು ಪರಿಹಾರ ಯೋಜನೆ	-	-	-
ಆ	ಸಾಮೂಹಿಕ ಅಪಘಾತ ವಿಮಾಯೋಜನೆ	-	-	-
15	ವಿಶೇಷ ಘಟಕ ಉಪ ಯೋಜನೆ	-	-	-
16	ಗಿರಿಜನ ಉಪಯೋಜನೆ	7.00	7.00	7.00
17	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ	-	-	-
18	ವಾಣಿಜ್ಯ ಬ್ಯಾಂಕುಗಳಿಗೆ ವ್ಯತ್ಯಾಸದ ಬಡ್ಡಿ ಮರುಪಾವತಿ	32.27	32.27	32.27
19	ಕರಾವಳಿ ಕೊಡು ರಸ್ತೆಗಳ ನಿರ್ವಹಣೆ	-	-	-
	ಜಿಲ್ಲಾ ಪಂಚಾಯತ್ ಯೋಜನೆಗಳು			
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	11.00	11.00	3.711
2	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	7.00	6.98	6.98
3	ಪ್ರದರ್ಶನಗಳು ಮತ್ತು ತರಬೇತಿ	2.00	2.00	2.00

ಅನುಬಂಧ 2

2019-20 ನೇ ಸಾಲಿನ ಅವಧಿಗೆ ಜಿಲ್ಲಾವಾರು ಬಿಡುಗಡೆಯಾದ ಅನುದಾನ, ವಿನಿಯೋಗವಾದ ಅನುದಾನ ಮತ್ತು ಬಾಕಿ ಅನುದಾನದ ವಿವರಗಳು

ಕ್ರಮ ಸಂಖ್ಯೆ	ಯೋಜನೆ ವಿಧ (ರಾಜ್ಯ, ವಲಯ/ಜಿಲ್ಲಾ ವಲಯ/ಕೇಂದ್ರ ಪುರಸ್ಕೃತ/ಎಸ್‌ಎಫ್‌ಸಿ)	2019-20		
		ನೀಡಿರುವ ಅನುದಾನ	ಬಳಕೆಯಾಗಿರುವ ಅನುದಾನ	ಉಳಿದಿರುವ ಅನುದಾನ
ಜಿಲ್ಲೆ	ಉತ್ತರ ಕನ್ನಡ			
	ರಾಜ್ಯ ವಲಯ			
1	ಮೀನುಮರಿ ಖರೀದಿಗೆ ಸಹಾಯ 2405-00-101-0-28	-	0.27	0.27
2	ಮೀನುಗಾರರ ಸುರಕ್ಷತೆಗೆ ಜೀವರಕ್ಷಕ ಸಾಧನಗಳ ಖರೀದಿಗೆ ಸಹಾಯ 2405-00-101-0-58 (105)	-	11.65	11.65
3	ಒಳನಾಡು ಮತ್ತು ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಗೆ ಪ್ರೋತ್ಸಾಹ	33.00	7.34	25.65
4	ಹಿನ್ನೀರು ಪಂಜರದಲ್ಲಿ ಮೀನು ಕೃಷಿಗೆ ಸಹಾಯ	33.00	26.50	6.50
5	ಒಳನಾಡು ಮೀನುಗಾರರಿಗೆ ಸಲಕರಣೆ ಕಿಟ್ಟುಗಳ ಸರಬರಾಜು ವಿತರಣೆ 2405-00-110-0-02	5.00	5.00	-
4	ಮತ್ಸ್ಯ ಕೃಷಿ ಜಲ ಕೆರೆ ಯೋಜನೆ 2405-00-101-0-03	-	-	-
5	ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ 2405-00-101-0-03-106	-	-	-
6	ಆರ್.ಕೆ.ವಿ.ವೈ. ಯೋಜನೆ - 1			
7	ವಿಶೇಷ ಘಟಕ ಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್ ಮತ್ತು ಫೈಬರ್ ಗ್ಲಾಸ್ ಹರಿಗೋಲು ವಿತರಣೆ 2405-00-800-1-57 (422)	1.00	1.00	1.00
8	ಗಿರಿಜನ ಉಪ ಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್ ಮತ್ತು ಫೈಬರ್ ಗ್ಲಾಸ್ ಹರಿಗೋಲು ವಿತರಣೆ 2405-00-800-1-57 (423)	0.20	0.20	0.20
9	ಆರ್.ಕೆ.ವಿ.ವೈ. ಯೋಜನೆ - 2		-	-
10	ಮೀನುಗಾರಿಕೆ ಸಲಕರಣೆ ಕಿಟ್ ಮತ್ತು ಫೈಬರ್ ಗ್ಲಾಸ್ ಹರಿಗೋಲು ವಿತರಣೆ 2405-00-800-1-57 (105)	2.00	-	-
11	ವಿಶೇಷ ಘಟಕ ಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್ ಮತ್ತು ಫೈಬರ್ ಗ್ಲಾಸ್ ಹರಿಗೋಲು ವಿತರಣೆ 2405-00-800-1-57 (422)	1.00	-	-
	ಕೇಂದ್ರ ವಲಯ			
1	ಔಟ್ ಬೋರ್ಡ್ ಇಂಜಿನ್ ಖರೀದಿಗೆ ಸಹಾಯ 2405-00-101-0-58	-	30.97	30.97
2	ಹಳೆಯ ಮರದ ದೋಣಿಯ ಬದಲಿಗೆ ಎಫ್.ಆರ್.ಪಿ ದೋಣಿ ನಿರ್ಮಾಣಕ್ಕೆ ಸಹಾಯ	-	-	-
3	ಮೀನುಗಾರರಿಗೆ ಸುಧಾರಿತ ದೋಣಿ, ಬಲೆ ಮತ್ತು ಐಸ್‌ಬಾಕ್ಸ್ ವಿತರಣೆ	-	-	-
4	ಮಾರುಕಟ್ಟೆ ಕೇಂದ್ರ ನಿರ್ಮಾಣಕ್ಕೆ ಸಹಾಯ	-	-	-
5	ಮಾರುಕಟ್ಟೆ ಕೇಂದ್ರ ನವೀಕರಣಕ್ಕೆ ಸಹಾಯ	-	-	-
6	ದ್ವಿಚಕ್ರ ವಾಹನ ಐಸ್‌ಬಾಕ್ಸ್ ಖರೀದಿಗೆ ಸಹಾಯಧನ	-	-	-

ಕ್ರಮ ಸಂಖ್ಯೆ	ಯೋಜನೆ ವಿಧ (ರಾಜ್ಯ ವಲಯ/ಜಿಲ್ಲಾ ವಲಯ/ಕೇಂದ್ರ ಪುರಸ್ಕೃತ/ಎನ್‌ಎಫ್‌ಡಿಬಿ)	2019-20		
		ನೀಡಿರುವ ಅನುದಾನ	ಬಳಕೆಯಾಗಿರುವ ಅನುದಾನ	ಉಳಿದಿರುವ ಅನುದಾನ
7	ಮೀನು ಸಾಗಾಣಿಕೆಗಾಗಿ 6 ಟನ್ ಸಾಮರ್ಥ್ಯದ ಇನ್ಸುಲೇಟೆಡ್ ಟ್ರಕ್ ಸಹಾಯಧನ	–	6.00	6.00
8	ಮೀನು ಸಾಗಾಣಿಕೆಗಾಗಿ 10 ಟನ್ ಸಾಮರ್ಥ್ಯದ ಇನ್ಸುಲೇಟೆಡ್ ಟ್ರಕ್ ಸಹಾಯಧನ	–	–	–
9	ಮೀನು ಸಾಗಾಣಿಕೆಗಾಗಿ ತ್ರಿಚಕ್ರ / ಆಟೋರಿಕ್ಷಾ ಖರೀದಿಗೆ ಸಹಾಯಧನ	–	0.76	0.76
10	ಮೀನು ಕೃಷಿ ಕೊಳ ನಿರ್ಮಾಣ	–	–	–
11	ಆಳ ಸಮುದ್ರ ಮೀನುಗಾರಿಕೆ	–	–	–
12	ಸೀ ವೀಡ್ ಕಲ್ಚರ್	–	–	–
13	ಮೊಬೈಲ್ ಕಿಯೋಸ್ಕ್/ರೀಟೇಲ್ ಔಟ್‌ಲೆಟ್ ಸ್ಥಾಪನೆ	–	–	–
	ಜಿಲ್ಲಾ ವಲಯ			
1	ಮೀನುಗಾರಿಕೆ ಕಟ್ಟಡಗಳು & ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ 2405-00-101-0-27	24.00	24.00	–
2	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ 2405-00-101-0-28	28.00	21.31	6.69
3	ವಿಶೇಷ ಘಟಕ ಯೋಜನೆ (422)	1.00	1.00	–
4	ಗಿರಿಜನ ಉಪಯೋಜನೆ (423)	1.00	1.00	–
5	ಪ್ರದರ್ಶನಗಳು ಮತ್ತು ತರಬೇತಿ 2405-00-101-0-32	3.00	2.90	0.10
6	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ 2405-00-101-0-30	10.00	9.95	0.05

ಅನುಬಂಧ–3

ಮೀನುಗಾರಿಕೆ ಚಟುವಟಿಕೆಗಳನ್ನು ಸಮರ್ಪಕವಾಗಿ ನಿರ್ವಹಿಸಲು ಮತ್ತು ಮೀನುಗಾರಿಕೆಯ ಸಮಗ್ರ ಅಭಿವೃದ್ಧಿಗೆ ರೂಪಿಸಲಾಗಿರುವ ಯೋಜನೆಗಳ ವಿವರ

1. **ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

a. "ಮತ್ಸ್ಯ ಕೃಷಿ ಆಶಾ ಕಿರಣ" ಯೋಜನೆಯಡಿ ಕೆರೆಗಳಲ್ಲಿ ಮೀನು ಉತ್ಪಾದನೆಯನ್ನು ಹೆಚ್ಚಿಸಲು ಹಾಗೂ ಮೀನು ಕೃಷಿಗೆ ಉತ್ತೇಜನ ನೀಡಲು, ಪ್ರತಿ ಹೆಕ್ಟೇರ್‌ಗೆ 4,000 ಬಲಿತ ಮೀನು ಮರಿಗಳನ್ನು ಹಾಗೂ 2 ಟನ್ ಕೃತಕ ಆಹಾರವನ್ನು ಖರೀದಿಸಲು ಘಟಕ ವೆಚ್ಚದ ಶೇ.50 ರಷ್ಟು ಹಾಗೂ ಗರಿಷ್ಠ 27,000 ರೂ.ಗಳನ್ನು ನೀಡಲಾಗುವುದು.

b. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುವುದು.

c. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/– ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/– ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

d. ಸಮಗ್ರ ಮೀನು ಕೃಷಿಗೆ ಕ್ಲಸ್ಟರ್ ಮಾದರಿಯಲ್ಲಿ ಆಯ್ದ 14 ಜಂಟಿ ತಾಲ್ಲೂಕುಗಳಲ್ಲಿ ಸಮಗ್ರವಾಗಿ ಮತ್ತು ಸುಸಂಘಟಿತ ಮಾದರಿಯಲ್ಲಿ ಮೀನು ಕೃಷಿಯ ಅಭಿವೃದ್ಧಿಯನ್ನು ಕೈಗೊಳ್ಳಲಾಗುವುದು. ಈ ಯೋಜನೆಯಡಿ ಕೃಷಿಕರಿಗೆ ಮೀನು ಸಾಕಾಣಿಕೆಗೆ ಕೊಳ ಮತ್ತು ಇತರೆ ಮೂಲಭೂತ ಸೌಕರ್ಯಗಳ ಸೃಷ್ಟಿಗೆ ಸಹಾಯಧನ ನೀಡಲಾಗುವುದು. ಕ್ಲಸ್ಟರ್ ಪ್ರದೇಶದಲ್ಲಿ ಕೃಷಿಗೆ ಅನುಪಯುಕ್ತವಾಗಿರುವ ಚೌಗು–ಚೌಳು ಪ್ರದೇಶಗಳಲ್ಲಿ ಮೀನು ಸಾಕಾಣಿಕೆಗೆ ಆದ್ಯತೆ ನೀಡಲಾಗುವುದು.

e. ಹೊಸ ಘಟಕ:ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ 400 ಘಟಕಗಳಿಗೆ ಸಹಾಯಧನ ನೀಡುವ ಉದ್ದೇಶದಿಂದ 2 ಕೋಟಿ ರೂ.ಗಳನ್ನು ನೀಡಲಾಗಿದೆ.

2. **ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ** ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ (Advanced fingerlings) ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುವುದು.

3. **ನೀಲಿ ಕ್ರಾಂತಿ – ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (ಕೇಂದ್ರ ಪುರಸ್ಕೃತ ಯೋಜನೆ)** ಕೇಂದ್ರ ಸರ್ಕಾರದ ನೀಲಿಕ್ರಾಂತಿ ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಮತ್ತು ನಿರ್ವಹಣೆ ಯೋಜನೆಯಡಿ ಕರಾವಳಿ ಮೀನುಗಾರಿಕೆ, ಮೂಲಭೂತ

ಸೌಲಭ್ಯ ಮತ್ತು ಹಿಡುವಳಿ ನಂತರದ ಕಾರ್ಯಾಚರಣೆಗಳ ಅಭಿವೃದ್ಧಿ, ಮೀನುಗಾರರ ಕಲ್ಯಾಣಕ್ಕಾಗಿ ರಾಷ್ಟ್ರೀಯ ಯೋಜನೆ, ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿ ಮತ್ತು ಅದರ ಚಟುವಟಿಕೆಗಳು ಮತ್ತು ಇತರೆ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರದ ಶೇ.24 ರಷ್ಟು ನೆರವಿನೊಂದಿಗೆ ಅನುಷ್ಠಾನಗೊಳಿಸಲು ಅವಕಾಶ ಕಲ್ಪಿಸಲಾಗಿದೆ.

4. **ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ (2405–00–101–0–67)**

ಉತ್ತರ ಕರ್ನಾಟಕದಲ್ಲಿ ಸುಮಾರು 1.64 ಲಕ್ಷ ಹೆಕ್ಟೇರ್ ವಿಸ್ತೀರ್ಣದ ಜಲಾಶಯಗಳು 42,195 ಹೆಕ್ಟೇರ್ ವಿಸ್ತೀರ್ಣದ ದೊಡ್ಡಕೆರೆಗಳು, 20667 ಹೆಕ್ಟೇರ್ ವಿಸ್ತೀರ್ಣದ ಗ್ರಾಮ ಪಂಚಾಯತ್ ಕೆರೆಗಳು, ನದಿಗಳು ಮತ್ತು ಕಾಲುವೆಗಳಿದ್ದು, ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ವಿಫುಲ ಅವಕಾಶವನ್ನು ನೀಡುತ್ತವೆ. ಈ ಹಿನ್ನೆಲೆಯಲ್ಲಿ "ನಿಜ ಶರಣ ಶ್ರೀ.ಅಂಬಿಗರ ಚೌಡಯ್ಯ ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಸಂಸ್ಥೆ" ಎಂಬ ಸಂಸ್ಥೆಯನ್ನು ಸ್ಥಾಪಿಸಲಾಗಿದೆ. ಉದ್ದೇಶಿತ ಸಂಸ್ಥೆಯ ಮುಖ್ಯ ಉದ್ದೇಶಗಳೆಂದರೆ,

- ಉತ್ತರ ಕರ್ನಾಟಕದ ಸಮಗ್ರ ಮೀನುಗಾರಿಕೆ ಅಭಿವೃದ್ಧಿಗೆ ಸ್ಥಳೀಯ ಅಗತ್ಯತೆಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ರೂಪಿಸಿ, ಅನುಷ್ಠಾನಗೊಳಿಸುವುದು.
- ಅಗತ್ಯ ಯೋಜನಾ ವರದಿ ಸಿದ್ಧಪಡಿಸಿ ವಿವಿಧ ಮೂಲಗಳಿಂದ ಮೀನುಗಾರಿಕೆ ಚಟುವಟಿಕೆಗಳಿಗೆ ಅನುದಾನವನ್ನು ಪಡೆದು ಕಾರ್ಯಕ್ರಮ ಅನುಷ್ಠಾನಗೊಳಿಸುವುದು. ಮತ್ತು
- ಮೀನುಗಾರಿಕೆ ಶಿಕ್ಷಣ, ಸಂಶೋಧನೆ, ವಿಸ್ತರಣೆ ಮತ್ತು ಅಭಿವೃದ್ಧಿಯಲ್ಲಿ ನಿರತರಾಗಿರುವ ಸಂಸ್ಥೆಗಳು ಹಾಗೂ ಮೀನುಗಾರರ ಸಂಘಟನೆಗಳ ಸಹಯೋಗದೊಂದಿಗೆ ಉತ್ತರ ಕರ್ನಾಟಕದ ಮೀನುಗಾರಿಕೆ ಮತ್ತು ಮೀನು ಕೃಷಿ ಅಭಿವೃದ್ಧಿಗೆ ಕ್ರಮವಹಿಸುವುದು.

5. **ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು** ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಆವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.3.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1.00 ಲಕ್ಷ ಪರಿಹಾರ ನೀಡಲು ಹಾಗೂ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.1.00 ಲಕ್ಷ ಮೀನುಗಾರಿಕೆ ಬಂದರು/ ಇಳಿದಾಣ ಕೇಂದ್ರದಲ್ಲಿ ಕೆಲಸದಲ್ಲಿದ್ದಾಗ ಮರಣ ಹೊಂದಿದಲ್ಲಿ ರೂ.1.00 ಲಕ್ಷ, ಸಮುದ್ರದಲ್ಲಿ ಮೀನುಗಾರಿಕೆಗೆ ಹೋದಾಗ ಅನಾರೋಗ್ಯದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷ ನೆರವು ನೀಡಲು ಅವಕಾಶವಿದೆ. ಸಮುದ್ರದಲ್ಲಿ ಮೀನುಗಾರಿಕೆ ಮಾಡುವಾಗ ಪ್ರಕೃತಿ ವಿಕೋಪದಿಂದ ದೋಣಿ ಅವಘಡದಿಂದ ಮೃತರಾದ ಮೀನುಗಾರರ ಕುಟುಂಬದವರಿಗೆ ರೂ 6.00 ಲಕ್ಷ ಪರಿಹಾರ ನೀಡಲಾಗುವುದು.

6. **ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:**

ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆ ಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

7. **ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ** ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ಬಳಸುವ ಡೀಸೆಲ್ ಮೇಲಿನ ರಾಜ್ಯ ಮಾರಾಟ ಕರಕ್ಕೆ ಸಮನಾದ ಮೊತ್ತವನ್ನು ಸಹಾಯಧನವಾಗಿ ದೋಣಿಗಳ ಮಾಲೀಕರ ಬ್ಯಾಂಕ್ ಖಾತೆಗೆ ನೇರವಾಗಿ ಬಿಡುಗಡೆ ಮಾಡುವ ಮೂಲಕ ಮರುಪಾವತಿ ಮಾಡುವುದು ಈ ಯೋಜನೆಯ ಉದ್ದೇಶ.

ವಾರ್ಷಿಕ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳಿಗೆ 1,50,000 ಕಿಲೋ ಲೀಟರ್ ಡೀಸಲ್ ಮೇಲಿನ ಮಾರಾಟ ಕರಕ್ಕೆ ಸಹಾಯಧನ ನೀಡಲಾಗುವುದು.

8. **ಮೀನು ಮಾರುಕಟ್ಟೆಗಳ ನಿರ್ಮಾಣಕ್ಕಾಗಿ ಸಹಾಯ:** ಮೀನುಗಾರರ ಸಹಕಾರ ಸಂಘಗಳಿಗೆ ತಮ್ಮ ಸ್ವಂತ ನಿವೇಶನದಲ್ಲಿ ನೀರು, ವಿದ್ಯುಚ್ಛಕ್ತಿ ಮತ್ತು ಇತರ ಸೌಲಭ್ಯಗಳೊಂದಿಗೆ ಕನಿಷ್ಠ 500 ಚದರಡಿಯ ಮೀನು ಸಂಗ್ರಹಣೆ ಹಾಗೂ ಮಾರುಕಟ್ಟೆ ಕಟ್ಟಡವನ್ನು ನಿರ್ಮಿಸಲು ಅಂದಾಜು 10 ಲಕ್ಷ ರೂ.ಗಳ ಘಟಕ ವೆಚ್ಚದಲ್ಲಿ ಶೇ.75 ರಷ್ಟು ಸಹಾಯಧನವನ್ನು ಒದಗಿಸುವ ಮೂಲಕ ನೆರವು ನೀಡಲಾಗುವುದು.

9. **ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ (2405–00–110–0–02)**

a. ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

b. ಮೀನು ಮರಿಗಳನ್ನು ಹಿಡಿಯುವುದನ್ನು ತಪ್ಪಿಸಿ ಮತ್ಸ್ಯ ಸಂಪತ್ತನ್ನು ರಕ್ಷಿಸಲು ಮೀನುಗಾರರಿಗೆ ಕಾಡ್ ಎಂಡ್‌ನಲ್ಲಿ 35 ಎಂಎಂ ಸ್ಕ್ವೇರ್ ಮೆಶ್ ಬಲೆಗಳನ್ನು ಉಚಿತವಾಗಿ ನೀಡಲು ಉದ್ದೇಶಿಸಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

c. ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/– ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾಗವುದು.

d. ಮೀನುಗಾರರ ಹಾಗೂ ಮೀನುಗಾರರ ದೋಣಿಗಳ ಸುರಕ್ಷತೆಯ ನಿಟ್ಟಿನಲ್ಲಿ ಮೀನುಗಾರಿಕೆ ದೋಣಿಗಳಿಗೆ ಇಸ್ರೋ ಅಧಿಕೃತಗೊಳಿಸಿರುವ ಡಿ.ಎ.ಟಿ. ಉಪಕರಣವನ್ನು ಶೇ.50 ರಷ್ಟು ಸಹಾಯಧನ ನೀಡಿ ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡಲಾಗುವುದು. ಈ ಉದ್ದೇಶಕ್ಕಾಗಿ 3 ಕೋಟಿ ರೂ.ಗಳನ್ನು ಒದಗಿಸಲಾಗಿದೆ.

10. **ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ**

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುವುದು.

11. **ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)**

ಅ) **ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ** ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/– ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/– ಮತ್ತು ರಾಜ್ಯ ಸರ್ಕಾರ ರೂ.1500/– ಸೇರಿಸಿ ಹೀಗೆ ಒಟ್ಟು ರೂ.4500/– ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು.

ಆ) ಸಾಮೂಹಿಕ ವಿಮಾ ಯೋಜನೆ: ರಾಜ್ಯದ 2.04 ಲಕ್ಷ ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.200,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.100,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ದೆಹಲಿಯಲ್ಲಿರುವ ಮೀನುಗಾರರ ಸಹಕಾರ ಸಂಘಗಳ ರಾಷ್ಟ್ರೀಯ ಮಂಡಳಿ, ದೆಹಲಿಗೆ ಬಿಡುಗಡೆ ಮಾಡಲಾಗುವುದು.

12. ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲು ಪ್ರಸ್ತಾವಿಸಲಾಗಿದೆ.

13. ಮೀನುಗಾರಿಕೆ ಕೂಡು ರಸ್ತೆಗಳ ನಿರ್ವಹಣೆ ರಾಜ್ಯದ ಕರಾವಳಿಯ ಮೂರು ಜಿಲ್ಲೆಗಳಲ್ಲಿ ಒಟ್ಟು 355.13 ಕಿಮೀ ಉದ್ದದ 218 ಮೀನುಗಾರಿಕೆ ಕೊಂಡಿ ರಸ್ತೆಗಳಿರುತ್ತವೆ. ಮಳೆ ಹಾಗೂ ಮೀನು ಸಾಗಾಣಿಕೆಯಿಂದ ಈ ಮೀನುಗಾರಿಕೆ ಕೊಂಡಿ ರಸ್ತೆಗಳು ಹಾಳಾಗುತ್ತದೆ. ಇವುಗಳ ದುರಸ್ತಿ ಹಾಗೂ ನಿರ್ವಹಣೆಯನ್ನು ಕೈಗೊಳ್ಳಲಾಗುವುದು.

14. ಗಿರಿ ಜನ ಉಪ ಯೋಜನೆ ಈ ಯೋಜನೆಯಡಿ ಪರಿಶಿಷ್ಟ ಪಂಗಡದ ಮೀನುಗಾರರಿಗೆ ಅನುಕೂಲವಾಗುವಂತೆ ಸಂಚಾರಿ/ ರೀಟೇಲ್ ಮೀನು ಖಾದ್ಯಗಳ ಕ್ಯಾಂಟೀನ್/ ತಾಜಾ ಮೀನು ಮಾರಾಟ ಮಳಿಗೆ ಸ್ಥಾಪಿಸಲು ಸಹಾಯ (ಘಟಕ ವೆಚ್ಚ ರೂ.10.00 ಲಕ್ಷ ; ಸಹಾಯಧನ : ಶೇ.70 ರಷ್ಟು ಗರಿಷ್ಠ ರೂ.7.00 ಲಕ್ಷ) ನೆರವು ನೀಡಲಾಗುವುದು.

<u>ಕಾಮಗಾರಿಗಳು</u>

15. ಮೀನುಗಾರಿಕೆ ಬಂದರುಗಳ ಹೂಳೆತ್ತುವಿಕೆ(ಕೇಂದ್ರ ಪುರಸ್ಕೃತ ಯೋಜನೆ) ಮೀನುಗಾರಿಕೆ ಬಂದರುಗಳು ಮತ್ತು ಇಳಿದಾಣಗಳಲ್ಲಿ ಮೀನುಗಾರಿಕೆ ದೋಣಿಗಳ ಸುಗಮ ಸಂಚಾರಕ್ಕೆ ಅನುಕೂಲವಾಗಲು ಹೂಳೆತ್ತಲು ಅವಕಾಶ ಕಲ್ಪಿಸಲಾಗಿದೆ. ಕೇಂದ್ರ ಸರ್ಕಾರವು ಪ್ರತಿಶತ 50 ರಷ್ಟನ್ನು ಯೋಜನಾ ವೆಚ್ಚವನ್ನು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50 ರಷ್ಟನ್ನು ಯೋಜನಾ ವೆಚ್ಚವನ್ನು ಭರಿಸುತ್ತದೆ. ಕೇಂದ್ರ ಸರ್ಕಾರದಿಂದ ಮಂಜೂರಾದ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗುವುದು.

16. ಮೀನುಗಾರಿಕೆ ಬಂದರುಗಳ ನಿರ್ಮಾಣ (ಕೇಂದ್ರ ಪುರಸ್ಕೃತ ಯೋಜನೆ) ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಕೇಂದ್ರ ಸರ್ಕಾರವು ಪ್ರತಿಶತ 50 ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50 ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು 75:25 ಅನುಪಾತದಲ್ಲಿಯೇ ಮುಂದುವರೆಯುತ್ತದೆ.

17. ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಲೆಕ್ಕ ಶೀರ್ಷಿಕೆಯಡಿ ಪ್ರಗತಿಯಲ್ಲಿರುವ ಕೊಡೇರಿ ಮೀನುಗಾರಿಕೆ

ಬಂದರಿನ ಹಾಗೂ ತೆಂಗಿನಗುಂಡಿ ಅಳ್ವೆಕೋಡಿ ಮೀನುಗಾರಿಕೆ ತಂಗುದಾಣದ ಕಾಮಗಾರಿಗಳನ್ನು ಮುಂದುವರಿಸಲು ಹಾಗೂ ಮರವಂತೆ, ಶಿರೂರು-ಅಳ್ವೆಗದ್ದೆ ಮತ್ತು ಕುಂದಾಪುರ ಕೋಡಿಯಲ್ಲಿ ಬಂದರು ಮತ್ತು ತಡೆಗೋಡೆಗಳ ಕಾಮಗಾರಿಗಳನ್ನು ಪ್ರಾರಂಭಿಸಲು ಹಾಗೂ ಭಟ್ಕಳ ಮತ್ತು ಕಾರವಾರ ಮೀನುಗಾರಿಕೆ ಬಂದರುಗಳಲ್ಲಿಯ ಧಕ್ಕೆಗಳನ್ನು ವಿಸ್ತರಿಸಲು ಅನುದಾನ ನೀಡಲಾಗಿದೆ. ಆಮದಲ್ಲಿ ಮೀನುಗಾರಿಕೆ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಶೇ.75 ರಷ್ಟು ನೆರವಿನೊಂದಿಗೆ ಕೈಗೊಳ್ಳಲಾಗುವುದು.

18. **ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ** ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನುಮಾರುಕಟ್ಟೆಗಳ ನಿರ್ಮಾಣ, ಮೀನು ಮರಿ ಉತ್ಪಾದನಾ ಕೇಂದ್ರಗಳ ಆಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸಲು/ ಮುಂದುವರಿಸಲು ಅನುದಾನ ಒದಗಿಸಲಾಗಿದೆ.

ಜಿಲ್ಲಾ ಪಂಚಾಯತ್ ಯೋಜನೆಗಳು

1. **ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ:** ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ.

2. **ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ:** ಈ ಯೋಜನೆಯಡಿ ಚೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಹಾಗೂ ಮೊದಲ ವರ್ಷದ ಆವರ್ತಕ ವೆಚ್ಚದ ಶೇಕಡ 25 ರಷ್ಟು ಅಂದರೆ ಗರಿಷ್ಠ ರೂ.30,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ರೂ.10,000.00 ಗಳ ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.5000 ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 250 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

3. **ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ**

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ

ಗರಿಷ್ಠ ರೂ.2000 ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.10000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.35,000 ಗಳ ಸಹಾಯಧನವನ್ನು ಮೂರು ಅಥವಾ ನಾಲ್ಕು ಫಲಾನುಭವಿಗಳ ಒಂದು ಗುಂಪಿಗೆ ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

4. ಪ್ರದರ್ಶನ ಮತ್ತು ತರಬೇತಿ ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.

ಈ ಯೋಜನೆಗಳಲ್ಲದೆ ಮೀನುಗಾರಿಕೆ ಇಲಾಖೆಯಿಂದ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:**

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮೀನು ಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣ, ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ, ಫೈಬರ್ ಗ್ಲಾಸ್ ಹರಿಗೋಲು ವಿತರಣೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

- **ಕೆರೆಗಳ ಅಭಿವೃದ್ಧಿ:**

ರಾಜ್ಯದಲ್ಲಿರುವ ಒಳನಾಡು ಜಲಸಂಪನ್ಮೂಲಗಳನ್ನು ಅಭಿವೃದ್ಧಿ ಪಡಿಸಲು ಹೊಸ ಗುತ್ತಿಗೆ ನಿಯಮಾವಳಿಗಳನ್ನು ರೂಪಿಸಿದ್ದು, ಈ ನಿಯಮಾವಳಿ ಪ್ರಕಾರ ಈ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕಿನ ಗುತ್ತಿಗೆಯನ್ನು ಪಡೆಯಲು ನೋಂದಾಯಿಸಲ್ಪಟ್ಟ ಮೀನುಗಾರರ ಸಹಕಾರ ಸಂಘಗಳಿಗೆ ಅವಕಾಶ ಕಲ್ಪಿಸಲಾಗಿದೆ. ಗುತ್ತಿಗೆಗೆ ಕೋರದ ಕೆರೆಗಳನ್ನು ಸಾರ್ವಜನಿಕವಾಗಿ ಟೆಂಡರ್ ಕಂ ಹರಾಜು ಮೂಲಕ ವಿಲೇವಾರಿ ಮಾಡಿ ಅಭಿವೃದ್ಧಿಪಡಿಸಲಾಗುವುದು. ಕೆರಗಳ ಶೇ.50ರ ಜಲ ವಿಸ್ತೀರ್ಣವನ್ನು ಗಣನೆಗೆ ತೆಗೆದುಕೊಂಡು ಪ್ರತಿ ಹೆಕ್ಟೇರ್ ಜಲ ವಿಸ್ತೀರ್ಣಕ್ಕೆ ರೂ.300/- ರಂತೆ ಹಾಗೂ ಹಿಂದಿನ 3 ವರ್ಷಗಳ ಸರಾಸರಿ ಗುತ್ತಿಗೆ ಮೊತ್ತ, ಇವುಗಳಲ್ಲಿ ಯಾವುದು ಹೆಚ್ಚೋ ಆ ಮೊತ್ತವನ್ನು ಗುತ್ತಿಗೆ ಮೊತ್ತವಾಗಿ ನಿಗದಿಪಡಿಸಿ ಗರಿಷ್ಠ 5 ವರ್ಷಗಳ ಅವಧಿಗೆ ಮೀನುಕೃಷಿಗೆ ನೀಡಲಾಗುವುದು.

ಅನುಬಂಧ –3(ಎ)

ಈ ಯೋಜನೆಗಳನ್ನು ಮೀನುಗಾರರು ಪರಿಣಾಮಕಾರಿಯಾಗಿ ಉಪಯೋಗಿಸಿಕೊಳ್ಳಬೇಕೆಂಬ ಉದ್ದೇಶದಿಂದ ಮೀನುಗಾರರಿಗೆ ಈ ಯೋಜನೆಗಳ ಮಾಹಿತಿಯನ್ನು ತಲುಪಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗುತ್ತಿದೆ.

1. ಮೀನುಗಾರಿಕೆ ಇಲಾಖೆಯ ಅಧಿಕೃತ ಜಾಲತಾಣದಲ್ಲಿ ಯೋಜನೆಯ ಮಾಹಿತಿಯನ್ನು ಪ್ರಕಟಿಸಲಾಗುತ್ತಿದೆ.

2. ದಿನಪತ್ರಿಕೆಗಳಲ್ಲಿ ಜಾಹೀರಾತು ಪ್ರಕಟಿಸುವ ಮೂಲಕ ಫಲಾನುಭವಿಗಳಿಗೆ ಯೋಜನೆಗಳ ಮಾಹಿತಿ ನೀಡಲಾಗುತ್ತಿದೆ.

3. ಪತ್ರಿಕಾ ಪ್ರಕಟಣೆಯನ್ನು ಹೊರಡಿಸಿ ಅರ್ಜಿ ಆಹ್ವಾನಿಸಲಾಗುತ್ತಿದೆ.

4. ಎಲ್ಲಾ ಗ್ರಾಮ ಸಭೆಗಳಲ್ಲಿ, ತಾಲ್ಲೂಕು ಪಂಚಾಯಿತಿ ಸಭೆ ಮತ್ತು ಜಿಲ್ಲಾ ಪಂಚಾಯಿತಿ ಸಭೆಗಳಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳು ಮತ್ತು ಚಟುವಟಿಕೆಗಳಿಗೆ ಸಂಬಂಧಿಸಿದ ಮಾಹಿಯನ್ನು ನೀಡಲಾಗುತ್ತಿದೆ.

5. ಕಾಲಕಾಲಕ್ಕೆ ತರಬೇತಿಗಳನ್ನು ಆಯೋಜಿಸಲಾಗುತ್ತಿದೆ. ಮತ್ತು ತರಬೇತಿ ಬರುವ ಅಭ್ಯರ್ಥಿಗಳಿಗೆ ಯೋಜನೆಗಳ ಮಾಹಿತಿ ನೀಡಲಾಗುತ್ತಿದೆ.

6. ಮೀನುಗಾರಿಕೆ ಇಲಾಖೆಯು ಕೃಷಿ ಮೇಳ, ಕೃಷಿ ಅಭಿಯಾನ, ಮತ್ಸ್ಯ ಮೇಳ ಹಾಗೂ ಮತ್ತಿತರ ಪ್ರದರ್ಶನಗಳಲ್ಲಿ ಭಾಗವಹಿಸುವತ್ತಿದೆ. ಹಾಗೂ ಈ ಮೇಳಗಳಲ್ಲಿ ಯೋಜನೆಗಳ ಫಲಕಗಳ ಪ್ರದರ್ಶನ ಮತ್ತು ಕರಪತ್ರಗಳನ್ನು ವಿತರಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಲಗುತ್ತಿದೆ.

7. ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿ ಮೀನುಗಾರಿಕೆ ಇಲಾಖೆಯ ಕಚೇರಿಗಳಿದ್ದು ಸಾರ್ವಜನಿಕರು ಈ ಕಚೇರಿಗಳಿಗೆ ಭೇಟಿ ನೀಡಿ ತಾಂತ್ರಿಕ ಸಲಹೆ ಪಡೆಯಬಹುದಾಗಿರುತ್ತದೆ. ಮತ್ತು ಇಲಾಖೆಯ ಯೋಜನೆ/ಚಟುವಟಿಕೆಗಳ ಮಾಹಿತಿಯನ್ನೂ ಪಡೆಯಬಹುದಾಗಿದೆ.

ಉ/ಸ. 2852

ಕರ್ನಾಟಕ ಸರ್ಕಾರ

ಸಂಖ್ಯೆ: ಲೋಇ 32 ಸಿಕ್ಯೂಎನ್ 2020(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 20.03.2020

09
ಉ/ಸ
23/03/2020

ಇವರಿಂದ,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಲೋಕೋಪಯೋಗಿ, ಬಂದರು ಮತ್ತು
ಒಳನಾಡು ಜಲಸಾರಿಗೆ ಇಲಾಖೆ,
ವಿಕಾಸಸೌಧ, ಬೆಂಗಳೂರು.

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಅಂಗಾರ ಎಸ್ (ಸುಳ್ಯ) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 2852ಕ್ಕೆ ಉತ್ತರಿಸುವ ಕುರಿತು.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/6ಅ/ಪ್ರ.ಸಂ.2852/2020 ದಿ:09.03.2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಅಂಗಾರ ಎಸ್ (ಸುಳ್ಯ) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 2852ಕ್ಕೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿದೆ ಹಾಗೂ ಸದರಿ ಉತ್ತರದ soft copy ಅನ್ನು dsqb-kla-kar@nic.in ಇ-ಮೇಲ್ ವಿಳಾಸಕ್ಕೆ ಮೇಲ್ ಕಳುಹಿಸಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಸಿದ್ದಪ್ಪ ಚಂದ್ರಶೇಖರ ಮರ್ತುರ)
ಶಾಖಾಧಿಕಾರಿ
ಲೋಕೋಪಯೋಗಿ, ಬಂದರು ಮತ್ತು ಒಳನಾಡು
ಜಲಸಾರಿಗೆ ಇಲಾಖೆ (ಸಂಪರ್ಕ-1).

20/3/2020

ಕರ್ನಾಟಕ ವಿಧಾನಸಭೆ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 2852

ಸದಸ್ಯರ ಹೆಸರು ಶ್ರೀ ಅಂಗಾರ ಎಸ್ (ಸುಳ್ಯ)

ಉತ್ತರಿಸುವ ದಿನಾಂಕ: 23.03.2020

ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ಸುಳ್ಯ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸುಳ್ಯ ಮತ್ತು ಪುತ್ತೂರು ಗ್ರಾಮೀಣ ರಸ್ತೆಗಳನ್ನು ಮೇಲ್ದರ್ಜೆಗೇರಿಸುವಂತೆ ಎಷ್ಟು ಪ್ರಸ್ತಾವನೆಗಳು ಸರ್ಕಾರಕ್ಕೆ ಸಲ್ಲಿಕೆಯಾಗಿರುತ್ತವೆ; (ಪೂರ್ತಿ ವಿವರ ನೀಡುವುದು)	ಸುಳ್ಯ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸುಳ್ಯ ಹಾಗೂ ಕಡಬ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 18 ಹಾಗೂ ಪುತ್ತೂರು ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 7 ಹೀಗೆ ಒಟ್ಟು 25 ಗ್ರಾಮೀಣ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಕುರಿತು ಪ್ರಸ್ತಾವನೆಗಳು ಸ್ವೀಕೃತವಾಗಿರುತ್ತವೆ. ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ.
ಆ)	ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಯಾಗಿ ಮೇಲ್ದರ್ಜೆಗೇರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;	ಹೌದು
ಇ)	ಹಾಗಿದ್ದಲ್ಲಿ, ಎಷ್ಟು ಸಮಯದಲ್ಲಿ ಸದರಿ ಕಾರ್ಯವನ್ನು ಪ್ರಾರಂಭ ಮಾಡಲಾಗುವುದು? (ಪೂರ್ತಿ ವಿವರ ನೀಡುವುದು)	ರಾಜ್ಯದಲ್ಲಿಯ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಹಾಗೂ ಕೆಳದರ್ಜೆಗಿಳಿಸುವ ಕುರಿತು ಪರಿಶೀಲಿಸಲು ರಾಜ್ಯ ಮಟ್ಟದಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಈ ಕುರಿತು ಸರ್ಕಾರದಲ್ಲಿ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಅರ್ಹತೆ ಹೊಂದಿರುವ ರಸ್ತೆಗಳನ್ನು ಗುರುತಿಸಿದ ನಂತರ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಕ್ರಮ ವಹಿಸಲಾಗುವುದು.

ಲೋಇ 32 ಸಿಕ್ಯೂಎನ್ 2020(ಇ)

(ಗೋವಿಂದ ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು
ಸಮಾಜ ಕಲ್ಯಾಣ ಇಲಾಖೆ

ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ವಿಧಾನಸಭಾ ವ್ಯಾಪ್ತಿಯಲ್ಲಿ ಬರುವ ಸುಳ್ಯಾ ಮತ್ತು ಕಡಬಾ ತಾಲ್ಲೂಕುಗಳಲ್ಲಿ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ

Sl No	District	Taluk	Assembly Constituency	Name of the village Road	Length of the Road
1	2	3	4	5	6
1	Dakshina Kannada	Kadaba	Sullia	Beeranthadka-Murachadavu-Enajebailu- Balya-Nelyadi	20.10
2	Dakshina Kannada	Kadaba	Sullia	Kodimbala-Aitoor-Balya- Konaje-Noojibaltila-Deraje-Ichlampady	33.60
3	Dakshina Kannada	Kadaba	Sullia	Dolpady-Edamangala-Ulipu- Hosmata-Karkala-Kutruppadi-Udane- Shibaje- Shishila	38.40
4	Dakshina Kannada	Kadaba	Sullia	Nettana Railway station junction -Bottadka-Kenjala Junction-Gundya Kulkunda Road	9.00
5	Dakshina Kannada	Sullia	Sullia	Doddathota-Kukkujadka-Pajpalla Road	15.95
6	Dakshina Kannada	Sullia	Sullia	Guttigaru-Balladka-Panja Road	10.20
7	Dakshina Kannada	Sullia	Sullia	Guttigaru-Kamila-Balpa Road	5.40
8	Dakshina Kannada	Sullia	Sullia	Sullia-Aletty-Baddadka-Kurnadka Road	11.90
9	Dakshina Kannada	Sullia	Sullia	Sullia-Kanthamangala-Ajjavara-Mandekolu-Kanyana Road	10.00
10	Dakshina Kannada	Sullia	Sullia	Sevaje-Madappady-Kandrappady-Guttigaru Road	13.30
11	Dakshina Kannada	Sullia	Sullia	Nadugallu-Harihara Pallathadka-Balugodu Road	11.00
12	Dakshina Kannada	Sullia	Sullia	Doddathota-Bommaru-Markanja Road	12.10
13	Dakshina Kannada	Sullia	Sullia	Ajjanagadde-Kukkujadka-Pailaru-Jabale Road	8.10
14	Dakshina Kannada	Sullia	Sullia	Pulikukku-Yedamangala-Alekkady Road	8.60
15	Dakshina Kannada	Sullia	Sullia	Aranthodu-Thodikana-Doddakumeri Road	8.00

Sl No	District	Taluk	Assembly Constituency	Name of the village Road	Length of the Road
1	2	3	4	5	6
16	Dakshina Kannada	Sullia	Sullia	Bobbekeri-Ayyakatte Road	7.00
17	Dakshina Kannada	Sullia	Sullia	Addabailu-Beedigudde-Bogayyankere Road	9.80
18	Dakshina Kannada	Sullia	Sullia	Malayala Harihara Kollamogru-Kalmakaru Road	18.15
				Total	**250.60**

19/3/2020
Chief Engineer
Planning and Road Asset
Management Center,
Bangalore.

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ

Sl No	District	Taluk	Assembly Constituency	Name of the village Road	Length of the Road
1	2	3	4	5	6
1	Dakshina Kannada	Puttur	Puttur	Devasya-Chelyadka-Uppalige-Darbethadka-Shekamale-Kowdichar-Elanthaje-Keyyur	18.30
2	Dakshina Kannada	Puttur	Puttur	Uppinangady-Hirebandady-Koila-Ramakunja-Alantaya-Nelyadi	24.00
3	Dakshina Kannada	Puttur	Puttur	Mudupinadka-Ishwaramangala-Panchodi-Galimukha	15.60
4	Dakshina Kannada	Puttur	Puttur	Mukrampady-Renjilady-Sarve	12.20
5	Dakshina Kannada	Puttur	Puttur	Savanoor-Madavu-Siddamoole-Pambaru-Machinadka	22.30
6	Dakshina Kannada	Puttur	Puttur	Kodimara-Darandakukku-Sediyapu-Kadambu	10.10
7	Dakshina Kannada	Puttur	Puttur	Kanchana- Periyadka Road	10.00
				Total	**112.50**

Chief Engineer
Planning and Road Asset
Management Center,
Bangalore.

ಕರ್ನಾಟಕ ಸರ್ಕಾರ

ಸಂಖ್ಯೆ: ವಇ ~~141~~ ಹೆಚ್‌ಎಎಂ 2020
141

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 21/03/2020.

ಇಂದ:

ಸರ್ಕಾರದ ಕಾರ್ಯದರ್ಶಿ,
ವಸತಿ ಇಲಾಖೆ.

ಇವರಿಗೆ:

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,

ಮಾನ್ಯರೇ.,

ವಿಷಯ: ಕರ್ನಾಟಕ ವಿಧಾನ ಸಭೆಯ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2848ಕ್ಕೆ ಉತ್ತರಿಸುವ ಬಗ್ಗೆ.
ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/6ಅ/ಪ್ರ.ಸಂ.2848/2020, ದಿನಾಂಕ: 10/03/2020.

*****

ಮಾನ್ಯ ವಿಧಾನ ಸಭಾ ಸದಸ್ಯರಾದ **ಶ್ರೀ ರೇವಣ್ಣ ಹೆಚ್.ಡಿ. (ಹೊಳೇನರಸೀಪುರ ವಿಧಾನ ಸಭಾ ಕ್ಷೇತ್ರ)**, ಇವರ **ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ: 2848ಕ್ಕೆ ಉತ್ತರದ 100 ಪ್ರತಿಗಳನ್ನು** ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಮಾಳಪ್ಪ ವೈ. ಕನ್ನೂರ)
ಶಾಖಾಧಿಕಾರಿ–2,
ವಸತಿ ಇಲಾಖೆ.

ಕರ್ನಾಟಕ ವಿಧಾನ ಸಭೆ

ಮಾನ್ಯ ವಿಧಾನಸಭೆ ಸದಸ್ಯರ ಹೆಸರು:	ಶ್ರೀ ರೇವಣ್ಣ ಹೆಚ್.ಡಿ
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	2848
ಉತ್ತರಿಸ ಬೇಕಾದ ದಿನಾಂಕ:	23.03.2020
ಉತ್ತರಿಸುವ ಸಚಿವರು	ಶ್ರೀ ವಿ.ಸೋಮಣ್ಣ, ವಸತಿ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಯಾವುದೇ ಮನೆಗಳ ಗುರಿಯನ್ನು ನೀಡದಿರುವುದರಿಂದ ಗ್ರಾಮೀಣ ಪ್ರದೇಶದ ರೈತರಿಗೆ/ಕೂಲಿ ಕಾರ್ಮಿಕರಿಗೆ ವಾಸಿಸಲು ಮನೆ ಇಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;	ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಂದರೆ 2016-17 ರಿಂದ 2018-19ನೇ ಸಾಲಿನವರೆಗೆ ವಿವಿಧ ವಸತಿ ಯೋಜನೆಗಳಡಿ ಈ ಕೆಳಕಂಡತೆ ಮನೆಗಳನ್ನು ಮಂಜೂರು ಮಾಡಲಾಗಿದೆ. (ಕೆಳಗಿನ ಕೋಷ್ಟಕ ನೋಡಿ)
ಆ)	ಬಂದಿದ್ದಲ್ಲಿ, ಯಾವುದೇ ಮನೆಗಳ ಗುರಿಯನ್ನು ನೀಡದಿರಲು ಕಾರಣಗಳೇನು ; (ವರ್ಗಾವಾರು ಸಂಪೂರ್ಣ ಮಾಹಿತಿ ನೀಡುವುದು)	
ಇ)	2020-21ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಡಿಯಲ್ಲಿ ಹೆಚ್ಚಿನ ಮನೆಗಳ ಗುರಿಯನ್ನು ನಿಗಡಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)	ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ಅಡಿಯಲ್ಲಿ 2020-21 ನೇ ಸಾಲಿಗೆ 1,51,715 ಮನೆಗಳ ಗುರಿಯನ್ನು ನಿಗದಿಪಡಿಸಲಾಗಿದೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ಸಲ್ಲಿಸುವ ಫಲಾನುಭವಿಗಳಿಗೆ ಅನುಗುಣವಾಗಿ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ಅಡಿಯಲ್ಲಿ ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸಲಾಗುವುದು.

ಶ್ರೇಣಿ	ಪ.ಜಾತಿ	ಪ.ಪಂ	ಸಾಮಾನ್ಯ	ಅಲ್ಪ ಸಂಖ್ಯಾತರು	ಒಟ್ಟು
2016-17	201057	80845	146112	38336	466350
2017-18	137325	57706	342245	25897	563173
2018-19	105	0	519	8	632
ಒಟ್ಟು	338487	**138551**	**488876**	**64241**	**1030155**

ವ ಇ 141 ಹೆಚ್‌ಎಎಂ 2020

(ವಿ. ಸೋಮಣ್ಣ)
ವಸತಿ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಸಕಇ 174 ಎಸ್‌ಡಿಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 21.02.2020

112
uls
23/03/2020

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ/~~ಪರಿಷತ್ತು~~
ವಿಧಾನಸೌಧ

ಮಾನ್ಯರೇ,

ವಿಷಯ:- ಮಾನ್ಯ ವಿಧಾನ ಸಭಾ / ~~ಪರಿಷತ್ತಿನ~~ ಸದಸ್ಯರಾದ ಶ್ರೀ/ಶ್ರೀಮತಿ ಪ್ರಿಯಾಂಕ್ ಎಂ. ಖರ್ಗೆ ಇವರ ~~ಚುಕ್ಕೆ ಗುರುತಿನ~~ / ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1283 ಗೆ ಉತ್ತರಿಸುವ ಬಗ್ಗೆ

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ / ~~ಪರಿಷತ್ತಿನ~~ ಸದಸ್ಯರಾದ ಶ್ರೀ/~~ಶ್ರೀಮತಿ~~ ಪ್ರಿಯಾಂಕ್ ಎಂ. ಖರ್ಗೆ ಇವರ ~~ಚುಕ್ಕೆ ಗುರುತಿನ~~ / ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1283 ಗೆ ಸಂಬಂಧಿಸಿದಂತೆ ತಯಾರಿಸಿದ ಉತ್ತರದ 150 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ತಮಗೆ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ವಿ. ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1283
ಸದಸ್ಯರ ಹೆಸರು : ಶ್ರೀ ಪ್ರಿಯಾಂಕ್ ಎಂ.ಖರ್ಗೆ
ಉತ್ತರಿಸುವ ದಿನಾಂಕ : 23.03.2020
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು

<table>
<tr><th>ಕ್ರ. ಸಂ</th><th>ವಿಷಯ</th><th>ಉತ್ತರ</th></tr>
<tr><td>ಅ)</td><td>2019-20ನೇ ಸಾಲಿನಲ್ಲಿ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಉದ್ಯಮಶೀಲತೆ ಯೋಜನೆಯಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹಣ ಬಿಡುಗಡೆಯಾಗದೆ ಇರುವುದಕ್ಕೆ ಕಾರಣವೇನು; (ಮಾಹಿತಿ ನೀಡುವುದು)</td><td rowspan="2">ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಈ ಹಿಂದೆ ಬಿಡುಗಡೆಯಾಗಿ ಲಭ್ಯವಿರುವ ಅನುದಾನದಿಂದ ಉದ್ಯಮಶೀಲತಾ ಯೋಜನೆ ಅಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಸಹಾಯಧನ ನೀಡಲಾಗುತ್ತಿದೆ.

2019-20ನೇ ಸಾಲಿನಲ್ಲಿ ಉದ್ಯಮಶೀಲತಾ ಯೋಜನೆ ಅಡಿ ಒದಗಿಸಲಾದ ರೂ.130.00 ಕೋಟಿಗಳಲ್ಲಿ ಭೂ ಒಡೆತನ ಯೋಜನೆಗೆ ಹೆಚ್ಚುವರಿಯಾಗಿ ರೂ.32.50 ಕೋಟಿಗಳನ್ನು ಮರುಹಂಚಿಕೆ ಮಾಡಲಾಗಿದೆ. ಉಳಿದ ಅನುದಾನವನ್ನು ಪರಿಷ್ಕೃತ ಆಯವ್ಯಯದಲ್ಲಿ ಕಡಿತಗೊಳಿಸಿರುವುದರಿಂದ, ಅನುದಾನ ಬಿಡುಗಡೆಯಾಗಿರುವುದಿಲ್ಲ.</td></tr>
<tr><td>ಆ)</td><td>ಯಾವಾಗ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡಲಾಗುವುದು?</td></tr>
</table>

ಸಕಇ 174 ಎಸ್‌ಡಿಸಿ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು

UNSTARRED Q.No. 2761

ಕರ್ನಾಟಕ ಸರ್ಕಾರ

ಸಂಖ್ಯೆ:E-AGRI-AML/69/2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 20-03-2020

60
U/S
23/03/2020

ಇವರಿಂದ

ಸರ್ಕಾರದ ಕಾರ್ಯದರ್ಶಿ,
ಕೃಷಿ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 2761 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ಪ್ರಶಾವಿಸ/15ನೇವಿಸ/6ಅ/ಪ್ರ.ಸಂ.2761/2020 ದಿ: 09.03.2020.

*****

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 2761 ಕ್ಕೆ ಉತ್ತರದ ಸಾಫ್ಟ್ ಪ್ರತಿಗಳನ್ನು ಇ-ಮೇಲ್ ಐಡಿ: questionsKlc@gmail.com ಗೆ ಕಳುಹಿಸಲಾಗಿದೆ ಹಾಗೂ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

P. Sathy 20/3

(ಪಿ. ಸತ್ಯಭಾಮ)
ಸರ್ಕಾರದ ಅಧೀನಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2761

ಸದಸ್ಯರ ಹೆಸರು : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)

ಉತ್ತರಿಸುವ ದಿನಾಂಕ : 23.03.2020

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಬೆಳಗಾವಿ ಜಿಲ್ಲೆಯಲ್ಲಿರುವ ಸಣ್ಣ ಹಿಡುವಳಿದಾರ ರೈತರ ಸಂಖ್ಯೆ ಎಷ್ಟು; (ವಿವರ ನೀಡುವುದು)	ಬೆಳಗಾವಿ ಜಿಲ್ಲೆಯಲ್ಲಿರುವ ಒಟ್ಟು ಸಣ್ಣ ಹಿಡುವಳಿದಾರ ರೈತರ ಸಂಖ್ಯೆ 1,70,006 (ಮೂಲ: 2015-16ನೇ ಸಾಲಿನ ಬೆಳಗಾವಿ ಜಿಲ್ಲೆಯ ಅಂಕಿ ಅಂಶಗಳ ನೋಟ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ, ಬೆಳಗಾವಿ).
ಆ)	ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಸಣ್ಣ ಹಿಡುವಳಿದಾರರಿಗೆ ಎಷ್ಟು ಪ್ರೋತ್ಸಾಹಧನವನ್ನು ಕೊಡಲು ನಿರ್ಧರಿಸಿದೆ; (ಯೋಜನಾವಾರು ವಿವರ ನೀಡುವುದು)	ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯಡಿ ವಾರ್ಷಿಕ ₹.6000/- ಗಳ ಆರ್ಥಿಕ ನೆರವನ್ನು ₹.2000/-ಗಳ ಮೂರು ಕಂತುಗಳಲ್ಲಿ ಪ್ರತಿ ಅರ್ಹ ರೈತ ಕುಟುಂಬಕ್ಕೆ ನೀಡಲಾಗುತ್ತಿದೆ. ಹಾಗೂ ರಾಜ್ಯ ಸರ್ಕಾರದ ಪಿ.ಎಂ.ಕಿಸಾನ್ –ಕರ್ನಾಟಕ ಯೋಜನೆಯಡಿ ವಾರ್ಷಿಕ ₹.4000/- ಗಳ ಆರ್ಥಿಕ ನೆರವನ್ನು ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯ ಅರ್ಹ ಫಲಾನುಭವಿಗಳಿಗೆ ₹.2000/-ಗಳ ಎರಡು ಕಂತುಗಳಲ್ಲಿ ಹೆಚ್ಚುವರಿಯಾಗಿ ನೀಡಲಾಗುತ್ತಿದೆ.
ಇ)	ಬೆಳಗಾವಿ ಜಿಲ್ಲೆ, ಬೈಲಹೊಂಗಲ ಮತ್ತು ಸವದತ್ತಿ ತಾಲ್ಲೂಕಿನ ಎಲ್ಲಾ ಸಣ್ಣ ಹಿಡುವಳಿದಾರ ರೈತರಿಗೆ ಪ್ರೋತ್ಸಾಹಧನ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪಿ.ಎಂ.ಕಿಸಾನ್ ಯೋಜನೆಯಡಿ ಬೆಳಗಾವಿ ಜಿಲ್ಲೆಯ 711980 ಸಾಗುವಳಿದಾರರಲ್ಲಿ, ಮಾರ್ಗಸೂಚಿ ಯನ್ವಯ ಅನರ್ಹರಿರುವ 28807 ರೈತರ ಹೊರತಾಗಿ, ಇಲ್ಲಿಯವರೆಗೆ 548290 ರೈತರು ಸ್ವಯಂ ಘೋಷಣೆಗಳನ್ನು ನೀಡಿ ಯೋಜನೆಯ fruitspmk.kar.gov.in ಪೋರ್ಟಲ್ ನಲ್ಲಿ ನೊಂದಾಯಿಸಿರುತ್ತಾರೆ. ಹೀಗೆ ನೊಂದಾಯಿತ ರೈತರನ್ನು ಯೋಜನೆಯ ಮಾರ್ಗಸೂಚಿಯನ್ವಯ ಪರಿಶೀಲಿಸಲ್ಪಟ್ಟು, ಅರ್ಹರಿರುವ 538984 ರೈತರ ಮಾಹಿತಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಹೀಗೆ ಸಲ್ಲಿಸಿದ ರೈತರ ವಿವರಗಳು ಕೇಂದ್ರ ಸರ್ಕಾರದಲ್ಲಿ ವಿವಿಧ ಪರಿಶೀಲನಾ ಪ್ರಕ್ರಿಯೆಗೊಳಪಟ್ಟು ಊರ್ಜಿತವಾದ ರೈತರಿಗೆ ಆರ್ಥಿಕ ನೆರವು ವರ್ಗಾಯಿಸಲಾಗುತ್ತಿದೆ. ಇಲ್ಲಿಯವರೆಗೆ, ಪ್ರತಿ ಕಂತಿಗೆ ₹.2000/- ಆರ್ಥಿಕ ನೆರವನ್ನು 504623 ರೈತರಿಗೆ ಮೊದಲನೇ ಕಂತು (₹100.92

		ಕೋಟಿ), 486657 ರೈತರಿಗೆ 2ನೇ ಕಂತು (₹97.33 ಕೋಟಿ), 378407 ರೈತರಿಗೆ ಮೂರನೇ ಕಂತು (₹75.68 ಕೋಟಿ) ಬೆಳಗಾವಿ ಜಿಲ್ಲೆಯ ರೈತರಿಗೆ ಪಾವತಿಸಲಾಗಿರುತ್ತದೆ. ರಾಜ್ಯ ಸರ್ಕಾರದ ಪಿ.ಎಂ.ಕಿಸಾನ್ –ಕರ್ನಾಟಕ ಯೋಜನೆಯಡಿ ಬೆಳಗಾವಿ ಜಿಲ್ಲೆಯ 424434 ರೈತರಿಗೆ ₹.2000 ಗಳ ಒಂದು ಕಂತಿನ ಹೆಚ್ಚುವರಿ ಆರ್ಥಿಕ ನೆರವು ನೀಡಲಾಗಿದೆ (₹84.88 ಕೋಟಿ). ಪಿ.ಎಂ.ಕಿಸಾನ್ ಯೋಜನೆಯಡಿ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ರೈತರಿಗೆ ಇಲ್ಲಿಯವರೆಗೆ, ಪ್ರತಿ ಕಂತಿಗೆ ₹.2000/- ಆರ್ಥಿಕ ನೆರವು 43591 ರೈತರಿಗೆ ಮೊದಲನೇ ಕಂತು (₹.8.71 ಕೋಟಿ), 42149 ರೈತರಿಗೆ 2ನೇ ಕಂತು (₹.8.42 ಕೋಟಿ), 34274 ರೈತರಿಗೆ ಮೂರನೇ ಕಂತು (₹.6.85 ಕೋಟಿ) ಪಾವತಿಸಲಾಗಿರುತ್ತದೆ. ರಾಜ್ಯ ಸರ್ಕಾರದ ಪಿ.ಎಂ.ಕಿಸಾನ್–ಕರ್ನಾಟಕ ಯೋಜನೆಯಡಿ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ 24889 ರೈತರಿಗೆ ₹.2000 ಗಳ ಒಂದು ಕಂತಿನ ಹೆಚ್ಚುವರಿ ಆರ್ಥಿಕ ನೆರವು ನೀಡಲಾಗಿದೆ (₹4.97 ಕೋಟಿ). ಪಿ.ಎಂ.ಕಿಸಾನ್ ಯೋಜನೆಯಡಿ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ರೈತರಿಗೆ ಇಲ್ಲಿಯವರೆಗೆ, ಪ್ರತಿ ಕಂತಿಗೆ ₹.2000/- ಆರ್ಥಿಕ ನೆರವು 45827 ರೈತರಿಗೆ ಮೊದಲನೇ ಕಂತು (₹.9.16 ಕೋಟಿ ರೂ), 43853 ರೈತರಿಗೆ 2ನೇ ಕಂತು (₹.8.77 ಕೋಟಿ), 32177 ರೈತರಿಗೆ ಮೂರನೇ ಕಂತು (₹.6.43 ಕೋಟಿ) ಪಾವತಿಸಲಾಗಿರುತ್ತದೆ. ರಾಜ್ಯ ಸರ್ಕಾರದ ಪಿ.ಎಂ.ಕಿಸಾನ್–ಕರ್ನಾಟಕ ಯೊಜನೆಯಡಿ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ 38421 ರೈತರಿಗೆ ₹.2000 ಗಳ ಒಂದು ಕಂತಿನ ಹೆಚ್ಚುವರಿ ಆರ್ಥಿಕ ನೆರವು ನೀಡಲಾಗಿದೆ (₹.7.68 ಕೋಟಿ). ಬೆಳಗಾವಿ ಜಿಲ್ಲೆ, ಬೈಲಹೊಂಗಲ ಮತ್ತು ಸವದತ್ತಿ ತಾಲ್ಲೂಕಿನ ಎಲ್ಲಾ ಸಣ್ಣ ಹಿಡುವಳಿದಾರ ರೈತರಿಗೆ

		ಪಿ.ಎಂ.ಕಿಸಾನ್ ಮತ್ತು ಪಿ.ಎಂ.ಕಿಸಾನ್-ಕರ್ನಾಟಕ ಯೋಜನೆಯಡಿ ಮಾರ್ಗಸೂಚಿಯನ್ವಯ ಅರ್ಹ ರೈತರಿಗೆ ಆರ್ಥಿಕ ನೆರವು ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಲ್ಲಿದೆ.
ಈ)	ಬಂದಿದ್ದಲ್ಲಿ, ಎಲ್ಲಾ ಸಣ್ಣ ಹಿಡುವಳಿದಾರ ರೈತರಿಗೆ ಕೂಡಲೇ ಪ್ರೋತ್ಸಾಹಧನ ಕೊಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)	ಪಿ.ಎಂ.ಕಿಸಾನ್ ಯೋಜನೆಯಡಿ ರೈತರು ಸ್ವಯಂಘೋಷಣೆಗಳನ್ನು ನೀಡಿ ನೊಂದಾಯಿಸಿರುವ ಕಾರಣ ರೈತರ ವಿವರಗಳು ಮಾರ್ಗಸೂಚಿಯನ್ವಯ ವಿವಿಧ ಪರಿಶೀಲನಾ ಪ್ರಕ್ರಿಯೆಗಳಲ್ಲಿ ಊರ್ಜಿತಗೊಂಡ ನಂತರ ಆರ್ಥಿಕ ನೆರವು ವರ್ಗಾವಣೆ ಪ್ರಕ್ರಿಯೆ ಜಾರಿಯಾಗುತ್ತದೆ. ರೈತರ ನೊಂದಣಿ, ತಂತ್ರಾಂಶದಲ್ಲಿ ಪರಿಶೀಲನೆ, ಕೇಂದ್ರ ಸರ್ಕಾರಕ್ಕೆ ಅರ್ಹ ರೈತರ ಮಾಹಿತಿಗಳ ಸಲ್ಲಿಕೆ ಪ್ರಕ್ರಿಯೆಗಳನ್ನು ಸರಳೀಕರಣಗೊಳಿಸಲಾಗಿದ್ದು, ಆರ್ಥಿಕ ನೆರವು ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಸಂಖ್ಯೆ: AGRI-AML-69/2020

(ಬಿ.ಸಿ.ಪಾಟೀಲ್) 18/3/2020

ಕೃಷಿ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಸಕಇ 72 ಎಸ್ಎಡಿ 2020

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ:20.03.2020

171
LS
23/3/2020

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ,

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶ್ರೀನಿವಾಸ್ ಎಂ. ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2587 ಕ್ಕೆ ಉತ್ತರ ಒದಗಿಸುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶ್ರೀನಿವಾಸ್ ಎಂ. ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2587 ಕ್ಕೆ ಉತ್ತರದ 110 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ರಾಜಶ್ರೀ ಹೆಚ್. ಕುಲಕರ್ಣಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2587
ಸದಸ್ಯರ ಹೆಸರು	:	ಶ್ರೀ ಶ್ರೀನಿವಾಸ್ ಎಂ
ಉತ್ತರಿಸಬೇಕಾದ ದಿನಾಂಕ	:	23.03.2020
ಉತ್ತರಿಸಬೇಕಾದ ಸಚಿವರು	:	ಸಮಾಜ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದ ಪರಿಶಿಷ್ಟ ಜಾತಿಯ ಸಮುದಾಯಗಳನ್ನು ಸಬಲೀಕರಣಗೊಳಿಸಲು ಜಾರಿಗೊಳಿಸಲಾಗಿರುವ ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸುವ ಸಲುವಾಗಿ 2005 ರಲ್ಲಿ ರಚನೆಗೊಂಡ ನ್ಯಾ. ಎ.ಜೆ ಸದಾಶಿವ ಆಯೋಗ ನೀಡಿರುವ ವರದಿಯನ್ನು ಈವರೆಗೂ ಅಂಗೀಕರಿಸದಿರುವುದು ಅಥವಾ ತಿರಸ್ಕರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ನ್ಯಾಯಮೂರ್ತಿ ಸದಾಶಿವ ವಿಚಾರಣಾ ಆಯೋಗವು ಪರಿಶಿಷ್ಟ ಜಾತಿಗಳ ವರ್ಗೀಕರಣದ ಬಗ್ಗೆ ಸಲ್ಲಿಸಿರುವ ವರದಿಯನ್ನು ರಾಜ್ಯ ಸರ್ಕಾರವು ಯಥಾವತ್ತಾಗಿ ಅಥವಾ ಭಾಗಶಃವಾಗಿ ಒಪ್ಪಿಕೊಳ್ಳಬಹುದೇ ಅಥವಾ ಕೆಲವೊಂದು ಮಾರ್ಪಾಡುಗಳೊಂದಿಗೆ ಒಪ್ಪಿಕೊಳ್ಳಬಹುದೇ ಎಂಬುದರ ಬಗ್ಗೆ ಪರಿಶೀಲಿಸಿ ವರದಿ ನೀಡಲು ಸಚಿವ ಸಂಪುಟ ಉಪ ಸಮಿತಿಯನ್ನು ಈ ಹಿಂದೆ ರಚಿಸಲಾಗಿದ್ದು, ತದನಂತರ ಹೊಸ ಸರ್ಕಾರವು ಅಸ್ತಿತ್ವಕ್ಕೆ ಬಂದಿರುವುದರಿಂದ ಸಚಿವ ಸಂಪುಟ ಉಪ ಸಮಿತಿ ಹೊಸದಾಗಿ ರಚಿಸಲು ಕ್ರಮ ಜರುಗಿಸಲಾಗುತ್ತಿದೆ ಮತ್ತು ಸಚಿವ ಸಂಪುಟದ ಉಪ ಸಮಿತಿಯ ಶಿಫಾರಸ್ಸಿನ ಮೇರೆಗೆ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.
ಆ	ಬಂದಿದ್ದಲ್ಲಿ, ಸರ್ಕಾರದ ಮುಂದಿನ ಕ್ರಮವೇನು;	
ಇ	ಸದರಿ ಆಯೋಗದ ವರದಿಯನ್ನು ಯಾವಾಗ ಅಂಗೀಕಾರ ಮಾಡಲಾಗುತ್ತದೆ (ವಿವರ ನೀಡುವುದು)?	

ಸಕಇ 72 ಎಸ್‌ಎಡಿ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯ ಮಂತ್ರಿಗಳು ಹಾಗೂ
ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು.

UNSTARRED QUESTION-1267

ಕರ್ನಾಟಕ ಸರ್ಕಾರ

ಸಂಖ್ಯೆ:AGRI-AML-55/2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 20-03-2020

163
U/S
23/03/2020

ಇವರಿಂದ

ಸರ್ಕಾರದ ಕಾರ್ಯದರ್ಶಿ,
ಕೃಷಿ ಇಲಾಖೆ, ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಶಿವಶಂಕರ ರೆಡ್ಡಿ.ಎನ್. ಹೆಚ್. (ಗೌರಿಬಿದನೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1267 ಗೆ ಉತ್ತರಿಸುವ ಬಗ್ಗೆ.

ಉಲ್ಲೇಖ: ಸಂಖ್ಯೆ:ಪ್ರಶಾವಿಸ/15ನೇವಿಸ/6ಅ/218:ಪ್ರ.ಸಂ1267/2020, ದಿನಾಂಕ: 06-03-2020

******

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಶಿವಶಂಕರ ರೆಡ್ಡಿ.ಎನ್. ಹೆಚ್. (ಗೌರಿಬಿದನೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1267 ಗೆ ಉತ್ತರದ ಸಾಫ್ಟ್ ಪ್ರತಿಗಳನ್ನು ಇ-ಮೇಲ್ ಐಡಿ: questionsKlc@gmail.com ಗೆ ಕಳುಹಿಸಲಾಗಿದೆ ಹಾಗೂ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

P. Sathya

(ಪಿ.ಸತ್ಯಭಾಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1267
ಸದಸ್ಯರ ಹೆಸರು	ಶ್ರೀ ಶಿವಶಂಕರರೆಡ್ಡಿ ಎನ್. ಹೆಚ್ (ಗೌರಿಬಿದನೂರು)
ಉತ್ತರಿಸುವ ದಿನಾಂಕ	23.03.2020
ಉತ್ತರಿಸುವ ಸಚಿವರು	ಕೃಷಿ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
1	ರಾಜ್ಯದಲ್ಲಿ ಈ ಹಿಂದೆ ಸಿರಿಧಾನ್ಯಗಳನ್ನು ಪ್ರೋತ್ಸಾಹಿಸಲು ಪ್ರಾರಂಭಿಸಲಾಗಿದ್ದ "ರೈತಸಿರಿ" ಕಾರ್ಯಕ್ರಮವನ್ನು ಮುಂದುವರೆಸಲಾಗುವುದೆ;	ರಾಜ್ಯದಲ್ಲಿ ಈ ಹಿಂದೆ ಸಿರಿಧಾನ್ಯಗಳನ್ನು ಪ್ರೋತ್ಸಾಹಿಸಲು ಪ್ರಾರಂಭಿಸಲಾಗಿದ್ದ "ರೈತಸಿರಿ" ಕಾರ್ಯಕ್ರಮವನ್ನು 2020-21 ನೇ ಸಾಲಿನಲ್ಲಿಯೂ ಮುಂದುವರೆಸಲಾಗುತ್ತಿದೆ.
2	ಹಾಗಿದ್ದಲ್ಲಿ, ಹೆಬ್ಬಾಳದಲ್ಲಿ ಸಿರಿಧಾನ್ಯಗಳ" ಸೆಂಟರ್ ಆಫ್ ಎಕ್ಸಲೆನ್ಸ್" ತೆರೆಯಲು ಸರ್ಕಾರ ಉದ್ದೇಶಿಸಿದೆಯೇ;	ಹೆಬ್ಬಾಳದಲ್ಲಿ ಸಿರಿಧಾನ್ಯಗಳ "ಸೆಂಟರ್ ಆಫ್ ಎಕ್ಸಲೆನ್ಸ್" ತೆರೆಯುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.
3	ಹಾಗಿದ್ದಲ್ಲಿ, ಈ ಕೇಂದ್ರವನ್ನು ಯಾವಾಗ ಪ್ರಾರಂಭಿಸಲಾಗುವುದು ಮತ್ತು ಇದಕ್ಕೆ ಅಗತ್ಯವಿರುವ ಹಣಕಾಸು ಲಭ್ಯ ಇದೆಯೇ? (ವಿವರ ನೀಡುವುದು);	

ಸಂಖ್ಯೆ: ಕೃಇ/ಕೃಇಕ/55/2020

(ಬಿ.ಸಿ. ಪಾಟೀಲ್)
ಕೃಷಿ ಸಚಿವರು 18/3/2020

UNSTARRED Q.No. 2814

ಕರ್ನಾಟಕ ಸರ್ಕಾರ

ಸಂಖ್ಯೆ:E-AGRI- AML/71/2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 20-03-2020

19
U/S
23/03/2020

ಇವರಿಂದ

ಸರ್ಕಾರದ ಕಾರ್ಯದರ್ಶಿ,
ಕೃಷಿ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು,

ಇವರಿಗೆ

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಬಂಡೆಪ್ಪ ಖಾಶೆಂಪೂರ್ (ಬೀದರ್ ದಕ್ಷಿಣ) ರವರ ಚುಕ್ಕೆ ಗುರುತಿಲ್ಲದ ಪ್ರ.ಸಂ: 2814 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ಪ್ರಶಾವಿಸ/15ನೇವಿಸ/6ಅ/ಪ್ರ.ಸಂ.2814/2020 ದಿ: 09.03.2020.

*****

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಬಂಡೆಪ್ಪ ಖಾಶೆಂಪೂರ್ (ಬೀದರ್ ದಕ್ಷಿಣ) ರವರ ಚುಕ್ಕೆ ಗುರುತಿಲ್ಲದ ಪ್ರ.ಸಂ: 2814 ಕ್ಕೆ ಕೃಷಿ ಇಲಾಖೆಯ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಪಿ. ಸತ್ಯಭಾಮ)
ಸರ್ಕಾರದ ಅಧೀನಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2814

ಸದಸ್ಯರ ಹೆಸರು : ಶ್ರೀ ಬಂಡೆಪ್ಪ ಖಾಶೆಂಪೂರ್ (ಬೀದರ್ ದಕ್ಷಿಣ)

ಉತ್ತರಿಸುವ ದಿನಾಂಕ : 23.03.2020

ಉತ್ತರಿಸುವ ಸಚಿವರು : ಕೃಷಿ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿನ ಕೃಷಿ ಭೂಮಿಯ ವಿಸ್ತೀರ್ಣವೆಷ್ಟು; ಎಷ್ಟು ವಿಸ್ತೀರ್ಣದಲ್ಲಿ ಯಾವ ರೀತಿಯ ಬೇಸಾಯವನ್ನು ಮಾಡಲಾಗುತ್ತಿದೆ; (ಮಾಹಿತಿ ಒದಗಿಸುವುದು)</td><td>2015-16ನೇ ಸಾಲಿನ ಕೃಷಿ ಗಣತಿ ವರದಿಯ ಆಧಾರದ ಮೇರೆಗೆ ರಾಜ್ಯದಲ್ಲಿ ಒಟ್ಟು 118.05 ಲಕ್ಷ ಹೆಕ್ಟೇರ್ ಕೃಷಿ ಭೂಮಿ ಇರುತ್ತದೆ.

2018-19ನೇ ಸಾಲಿನ ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದ ವರದಿಯಂತೆ ರಾಜ್ಯದಲ್ಲಿ ವಿವಿಧ ಬೆಳೆಗಳನ್ನು ಈ ಕೆಳಗೆ ಸಮೂದಿಸಿದ ವಿಸ್ತೀರ್ಣದಲ್ಲಿ ಸಾಗುವಳಿ ಮಾಡಲಾಗುತ್ತಿದೆ.
(ಲಕ್ಷ ಹೆಕ್ಟೇರ್ ಗಳಲ್ಲಿ)
<table>
<tr><th>ಕ್ರ.ಸಂ</th><th>ವಿವಿಧ ಬೆಳೆಗಳು</th><th>ವಿಸ್ತೀರ್ಣ</th></tr>
<tr><td>1</td><td>ಏಕದಳ ಧಾನ್ಯಗಳು</td><td>45.99</td></tr>
<tr><td>2</td><td>ದ್ವಿದಳ ಧಾನ್ಯಗಳು</td><td>29.46</td></tr>
<tr><td>3</td><td>ಎಣ್ಣೆ ಕಾಳುಗಳು</td><td>10.97</td></tr>
<tr><td>4</td><td>ವಾಣಿಜ್ಯ ಬೆಳೆಗಳು</td><td>12.23</td></tr>
<tr><td>5</td><td>ಹಣ್ಣಿನ ಬೆಳೆಗಳು</td><td>4.15</td></tr>
<tr><td>6</td><td>ತರಕಾರಿ ಬೆಳೆಗಳು</td><td>4.83</td></tr>
<tr><td>7</td><td>ಸಾಂಬಾರು ಜಿನಿಸು ಬೆಳೆಗಳು</td><td>2.21</td></tr>
<tr><td>8</td><td>ತೋಟದ ಬೆಳೆಗಳು</td><td>7.878</td></tr>
<tr><td>9</td><td>ವಾಣಿಜ್ಯ ಪುಷ್ಪ ಬೆಳೆಗಳು</td><td>0.31</td></tr>
<tr><td>10</td><td>ಔಷದಿಯ ಹಾಗೂ ಸುಗಂಧ ದ್ರವ್ಯ ಬೆಳೆಗಳು</td><td>0.022</td></tr>
</table></td></tr>
<tr><td>ಆ)</td><td>ಸರ್ಕಾರ ಒಂದು ವರ್ಷಕ್ಕೆ ಎಷ್ಟು ವಿಸ್ತೀರ್ಣದ ಕೃಷಿ ಭೂಮಿಗೆ ಹನಿ ನೀರಾವರಿ ಸೌಲಭ್ಯವನ್ನು ಒದಗಿಸುತ್ತಿದೆ;</td><td>ಕೃಷಿ ಇಲಾಖೆ ವತಿಯಿಂದ ಒಂದು ವರ್ಷಕ್ಕೆ ಸರಾಸರಿ 12000 ರಿಂದ 15000 ಹೆಕ್ಟೇರ್-ಗಳಷ್ಟು ಕೃಷಿ ಬೆಳೆಗಳಿಗೆ ಹಾಗೂ ತೋಟಗಾರಿಕೆ ಇಲಾಖೆಯಿಂದ 35000 ರಿಂದ 40000 ಹೆಕ್ಟೇರ್-ಗಳಷ್ಟು ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಸೌಲಭ್ಯವನ್ನು ಒದಗಿಸಲಾಗುತ್ತಿದೆ.</td></tr>
</table>

ಇ)	ರೈತರು ಹನಿ ನೀರಾವರಿಯನ್ನು ಅಳವಡಿಸಿಕೊಳ್ಳುವಂತೆ ಉತ್ತೇಜಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)	ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳು ರೈತರು ಹನಿ ನೀರಾವರಿಯನ್ನು ಅಳವಡಿಸಿಕೊಳ್ಳುವಂತೆ ಉತ್ತೇಜಿಸಲು ಸರ್ಕಾರವು ರಾಜ್ಯದ ಎಲ್ಲಾ ವರ್ಗದ ರೈತರಿಗೆ 2.00 ಹೆಕ್ಟೇರ್ ಪ್ರದೇಶದವರೆಗೆ ಶೇ.90ರ ಸಹಾಯಧನ ಮತ್ತು 2.00 ರಿಂದ 5.00 ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನ ಒದಗಿಸಲಾಗುತ್ತಿದೆ. ಅಲ್ಲದೆ, ರೈತರು ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಳ್ಳಲು ಇಲಾಖೆಯ ಕಾರ್ಯಕ್ರಮಗಳಾದ ಕೃಷಿ ಅಭಿಯಾನ, ಕೃಷಿ ವಸ್ತು ಪ್ರದರ್ಶನ ಮತ್ತು ಇತರೆ ಕಾರ್ಯಕ್ರಮಗಳಲ್ಲಿ ಹನಿ ನೀರಾವರಿ ಪದ್ಧತಿ ಅಳವಡಿಸುವ ಕುರಿತು ಅರಿವು ಮೂಡಿಸಲಾಗುತ್ತಿದೆ ಹಾಗೂ ಮುದ್ರಣ ಮತ್ತು ವಿದ್ಯುನ್ಮಾನ ಮಾಧ್ಯಮಗಳ ಮುಖಾಂತರ ವ್ಯಾಪಕ ಪ್ರಚಾರಗಳನ್ನು ನೀಡಲಾಗುತ್ತಿದೆ. ರಾಜ್ಯದ ಎಲ್ಲಾ ತಾಲ್ಲೂಕು/ ಜಿಲ್ಲೆಗಳಲ್ಲಿ ಹನಿ ನೀರಾವರಿ ಅಳವಡಿಕೆ ಬಗ್ಗೆ ರೈತರ ತರಬೇತಿಗಳು, ಕಾರ್ಯಾಗಾರಗಳನ್ನು ಏರ್ಪಡಿಸುವುದಲ್ಲದೇ, ಕೃಷಿ ಮೇಳಗಳಲ್ಲಿ ಹನಿ ನೀರಾವರಿ ಪದ್ಧತಿಯ ಮಾದರಿಗಳನ್ನು/ ಪ್ರಾತ್ಯಕ್ಷತೆಗಳನ್ನು ಪ್ರದರ್ಶಿಸಿ ರೈತರಿಗೆ ಈ ಪದ್ಧತಿಯ ಬಗ್ಗೆ ಆಗುತ್ತಿರುವ ಪ್ರಯೋಜನಗಳ ಕುರಿತು ಅರಿವು ಮೂಡಿಸಲಾಗುತ್ತಿದೆ.
ಈ)	ಹನಿ ನೀರಾವರಿಯನ್ನು ಅಳವಡಿಸಿಕೊಂಡ ರೈತರಿಗೆ ಸರ್ಕಾರ ನೀಡುತ್ತಿರುವ ರಿಯಾಯಿತಿಗಳೇನು (ವಿವರ ನೀಡುವುದು)?	ಕೃಷಿ ಹಾಗೂ ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಪದ್ಧತಿ ಅಳವಡಿಕೆಗಾಗಿ ಎಲ್ಲಾ ವರ್ಗದ ರೈತ ಕುಟುಂಬಗಳಿಗೆ ಮೊದಲ 2.00 ಹೆಕ್ಟೇರ್ ವರೆಗೆ ಶೇ.90 ರಂತೆ ಮತ್ತು ಉಳಿದ 3.00 ಹೆಕ್ಟೇರ್ ಪ್ರದೇಶಕ್ಕೆ ಭಾರತ ಸರ್ಕಾರದ ಮಾರ್ಗಸೂಚಿಯನ್ವಯ ಶೇಕಡಾವಾರು ಮಿತಿಯೊಳಗೆ (ಶೇ.45ರಷ್ಟು) ಸಹಾಯಧನ ನೀಡಲಾಗುತ್ತಿದೆ. ತರಕಾರಿ ಹಾಗೂ ವಾಣಿಜ್ಯ ಹೂ ಬೆಳೆಗಳಿಗೆ ಗರಿಷ್ಟ 2.00 ಹೆಕ್ಟೇರ್ ವರೆಗೆ ಮಾತ್ರ ಸಹಾಯಧನ ನೀಡಲಾಗುತ್ತಿದೆ.

ಸಂಖ್ಯೆ: AGRI-AML-71/2020

(ಬಿ.ಸಿ.ಪಾಟೀಲ್)
ಕೃಷಿ ಸಚಿವರು 18/3/20

UNSTARRED Q.No. 2788

ಕರ್ನಾಟಕ ಸರ್ಕಾರ

ಸಂಖ್ಯೆ:E-AGRI-ACT/54/2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 20-03-2020

155
U/S
23/03/2020

ಇವರಿಂದ

ಸರ್ಕಾರದ ಕಾರ್ಯದರ್ಶಿ,
ಕೃಷಿ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು,

ಇವರಿಗೆ

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಶಿವಾನಂದ ಪಾಟೀಲ್ (ಬಸವನಬಾಗೇವಾಡಿ) ರವರ ಚುಕ್ಕೆ ಗುರುತಿಲ್ಲದ ಪ್ರ.ಸಂ: 2788 ಕ್ಕೆ ಉತ್ತರಿಸುವ ಬಗ್ಗೆ.

ಉಲ್ಲೇಖ: ಪ್ರಶಾವಿಸ/15ನೇವಿಸ/6ಅ/ಪ್ರ.ಸಂ.2788/2020 ದಿ: 09.03.2020.

******

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಶಿವಾನಂದ ಪಾಟೀಲ್ (ಬಸವನಬಾಗೇವಾಡಿ) ರವರ ಚುಕ್ಕೆ ಗುರುತಿಲ್ಲದ ಪ್ರ.ಸಂ: 2788 ಕ್ಕೆ ಉತ್ತರದ ಸಾಫ್ಟ್ ಪ್ರತಿಗಳನ್ನು ಇ-ಮೇಲ್ ಐಡಿ: questionsKlc@gmail.com ಗೆ ಕಳುಹಿಸಲಾಗಿದೆ ಹಾಗೂ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(P. S'al) 20/3

(ಪಿ. ಸತ್ಯಭಾಮ)
ಸರ್ಕಾರದ ಅಧೀನಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2788
ಸದಸ್ಯರ ಹೆಸರು	ಶ್ರೀ ಶಿವಾನಂದ ಪಾಟೀಲ್ (ಬಸವನಬಾಗೇವಾಡಿ)
ಉತ್ತರಿಸುವ ದಿನಾಂಕ	23.03.2020
ಉತ್ತರಿಸುವ ಸಚಿವರು	ಕೃಷಿ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ವಿಜಯಪುರ ಜಿಲ್ಲೆಯ ಮನಗೂಳಿ ರೈತ ಸಂಪರ್ಕ ಕೇಂದ್ರಕ್ಕೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
- *ಶ್ರೀ. ಕೂಡಲಕಟ್ಟಿ, ಕಾರ್ಯಪಾಲಕ ಅಭಿಯಂತರರು, ಲೋ.ಬಂ ಮತ್ತು ಒ.ಜ.ಸಾ ಇಲಾಖೆ,ಗುಣಭರವಸೆ ವಿಭಾಗ, ಕಾರವಾರ.*
- *ಶ್ರೀ ಅಶೋಕ ಬರಗುಂಡಿ,ಕಾರ್ಯಪಾಲಕ ಅಭಿಯಂತರರು, ಲೋ.ಇ ವಿಭಾಗ ಕಾರವಾರ.*
- *ಶ್ರೀ ಆರ್.ಕೆ.ವೇರ್ಣೇಕರ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋ.ಇ.ಗುಣಭರವಸೆ ಉಪವಿಭಾಗ, ಕಾರವಾರ.*
- *ಶ್ರೀ ರಾಜೀವ್ ನಾಯ್ಕ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋ.ಬಂ ಮತ್ತು ಒ.ಜ.ಸಾ ಇಲಾಖೆ,ಉಪವಿಭಾಗ, ಕಾರವಾರ.*
- *ಶ್ರೀ ಲಕ್ಷ್ಮೀನರಸಿಂಹ, ಸಹಾಯಕ ಅಭಿಯಂತರರು, ಲೋ.ಬಂ ಮತ್ತುಒ.ಜ.ಸಾ ಇ ಗುಣಭರವಸೆ ಉಪವಿಭಾಗ, ರಾಯಚೂರು.*
- *ಶ್ರೀ ಸಂತೋಷ ಡಿಸೋಜಾ,ಕಿರಿಯ ಅಭಿಯಂತರರು, ಲೋ.ಬಂ ಮತ್ತು ಒ.ಜ.ಸಾ ಇಲಾಖೆ, ಉಪವಿಭಾಗ, ಕಾರವಾರ.*
- *ಶ್ರೀಮತಿ ಕಲ್ಪನಾ ವಾಗ್ಮೋರೆ, ಸಹಾಯಕ ಅಭಿಯಂತರರು, ಲೋ.ಬಂ ಮತ್ತು ಒ.ಜ.ಸಾ ಇಲಾಖೆ ಉಪವಿಭಾಗ, ಕಾರವಾರ.*
- *ಶ್ರೀ ಅಚಲ್ ಭಟ್, ಸಹಾಯಕ ಅಭಿಯಂತರರು–2, ಲೋ.ಬಂ ಮತ್ತು ಒ.ಜ.ಸಾ ಇಲಾಖೆ ಉಪವಿಭಾಗ, ಕಾರವಾರ.*
- *ಶ್ರೀ ಇಸಾಕ್ ಮಹ್ಮದ್ ಸಯ್ಯದ್,ಕಿರಿಯ ಅಭಿಯಂತರರು, ಲೋ.ಬಂ ಮತ್ತು ಒ.ಜ.ಸಾ ಇಲಾಖೆ ಉಪವಿಭಾಗ, ಕಾರವಾರ.*
- *ಶ್ರೀ.ರಾಜೇಶ್ ರಾಮನಾಥ್, ಲೆಕ್ಕಾಧೀಕ್ಷಕರು, ಲೋ.ಇ ವಿಭಾಗ, ಕಾರವಾರ.*

ವಿಷಯ: ಕಾರವಾರ ಲೋಕೋಪಯೋಗಿ ಉಪವಿಭಾಗದ ವ್ಯಾಪ್ತಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕೆಲವು ಕಾಮಗಾರಿಗಳನ್ನು ಕಳಪೆಯಾಗಿ ನಿರ್ವಹಿಸಿರುವುದಾಗಿ ಆರೋಪಿಸಿರುವ ಹಿನ್ನೆಲೆಯಲ್ಲಿ ನಡೆಸಲಾದ ತನಿಖೆಯ ಕುರಿತು.

ಉಲ್ಲೇಖ: ಶ್ರೀಮತಿ ರೂಪಾಲಿ ನಾಯ್ಕ, ಮಾನ್ಯ ಶಾಸಕರು, ಕಾರವಾರ ವಿಧಾನಸಭಾಕ್ಷೇತ್ರ–ಇವರು ಇಲಾಖೆಯಲ್ಲಿ ದಾಖಲಿಸಿರುವ ದೂರು ದಿನಾಂಕ:13.02.2020.ಕಡತ ಸಂ:ಕಾಇಂ:ಕಾಉಕೋ:05:2020

ಮೊದಲಿಗೆ ಹಾಜರಿದ್ದ ಎಲ್ಲರಿಗೂ ದೂರು ಪ್ರಕರಣದಲ್ಲಿ ಹೆಸರಿಸಲಾಗಿರುವ ಕಾಮಗಾರಿಗಳ ಕುರಿತು ಮಾನ್ಯ ಶಾಸಕರು, ಸದರಿ ಕಾಮಗಾರಿಗಳನ್ನು ಕಳಪೆಯಾಗಿ ನಿರ್ವಹಿಸಿರುವುದರಿಂದ ಅವುಗಳನ್ನು ಸ್ಥಗಿತಗೊಳಿಸಿ, ತನಿಖೆ ಕೈಗೊಂಡ ನಂತರ ಕಾಮಗಾರಿಗಳನ್ನು ಮುಂದುವರಿಸುವಂತೆ ಕೋರಿರುವುದರ ಬಗ್ಗೆ ಹಾಜರಿದ್ದ ಎಲ್ಲರ ಗಮನಸೆಳೆಯಲಾಯಿತು. ಈ ಸಂದರ್ಭದಲ್ಲಿ ಕಾರ್ಯಪಾಲಕ ಇಂಜಿನಿಯರ್ ಶ್ರೀ.ಅಶೋಕ್ ಬರಗುಂಡಿ ಹಾಗೂ ಲೆಕ್ಕಾಧೀಕ್ಷಕರಾದ ಶ್ರೀ.ರಾಜೇಶ್ ರಾಮನಾಥ್–ರವರು ದೂರು ಪ್ರಕರಣದಲ್ಲಿ ಉಲ್ಲೇಖಿಸಿರುವ ಒಟ್ಟು 09 ಕಾಮಗಾರಿಗಳ ಪೈಕಿ ಎಂಟು ಕಾಮಗಾರಿಗಳನ್ನು ಈಗಾಗಲೇ ಆರಂಭಗೊಂಡು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುವುದಾಗಿ ಮತ್ತು ಮೇಲಿನ ಪಟ್ಟಿಯ ಕ್ರಮ ಸಂ:6ರಲ್ಲಿನ ಒಂದು ಕಾಮಗಾರಿಯನ್ನು ಮಾತ್ರ ಆರಂಭಿಸಬೇಕಾಗಿರುವುದಾಗಿ ತಿಳಿಸಿರುತ್ತಾರೆ. ತದನಂತರ, ಸಂಬಂಧಪಟ್ಟ ಶಾಖಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಕಾಮಗಾರಿಗಳ ಪೈಕಿ, ಆರು ಕಾಮಗಾರಿಗಳು ಬಹುತೇಕ ಮುಕ್ತಾಯದ ಹಂತದಲ್ಲಿರುತ್ತವೆ, ಎರಡು ಕಾಮಗಾರಿಗಳಿಗೆ ಕಾಂಕ್ರೀಟ್ ಹಾಕಿ ಕ್ಯೂರಿಂಗ್ ಮಾಡುತ್ತಿರುವುದಾಗಿ ತಿಳಿಸಿರುತ್ತಾರೆ. ನಂತರ, ಕಾರ್ಯಪಾಲಕ ಇಂಜಿನಿಯರ್, ಗುಣಭರವಸೆ ಉಪವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಲೆಕ್ಕಾಧೀಕ್ಷಕರನ್ನು ಉದ್ದೇಶಿಸಿ "*ಮಾನ್ಯ ಶಾಸಕರು ಸದರಿ ಕಾಮಗಾರಿಗಳನ್ನು ಕಳಪೆಯಾಗಿರುವುದೆಂದು ಆರೋಪಿಸಿರುವ ಹಿನ್ನೆಲೆಯಲ್ಲಿ ಇವುಗಳ ನಿರ್ಮಾಣಕ್ಕೆ ಬಳಸಲಾಗಿರುವ ಸಾಮಗ್ರಿಗಳ ಗುಣಮಟ್ಟ ಪರೀಕ್ಷೆಗಳನ್ನು ಮಾಡಲಾಗಿದೆಯೇ? ವರದಿಗಳನ್ನು ನೀಡಲಾಗಿದೆಯೇ? ಕಾಮಗಾರಿಗಳ ಬಿಲ್ ಪಾವತಿಸಲಾಗಿದೆಯೇ?*"ಎಂದು ಪ್ರಶ್ನಿಸಲಾಯಿತು. ಇದಕ್ಕೆ ಗುಣಭರವಸೆ ಉಪವಿಭಾಗದ ಅಧಿಕಾರಿಯವರು ಕೆಲವು ಕಾಮಗಾರಿಗಳಿಗೆ ಅಗತ್ಯ ಪ್ರಮಾಣಪತ್ರಗಳನ್ನು ನೀಡಲಾಗಿದ್ದು, ಇನ್ನು ಕೆಲವನ್ನು ಪರಿಶೀಲಿಸಿರುವುದಾಗಿಯೂ ತಿಳಿಸಿರುತ್ತಾರೆ. ಕೊನೆಯದಾಗಿ, ***ವಿಭಾಗದ ಅಧಿಕಾರಿಗಳು ಕಾಮಗಾರಿಗಳಿಗೆ ಹಣಪಾವತಿ ಮಾಡಿರುವ ಕುರಿತು, ಮಾನ್ಯ ಶಾಸಕರು ದೂರು ದಾಖಲಿಸಿದ ದಿನಾಂಕದಿಂದ ಇದುವರೆಗೂ(02.03.2020ರವರೆಗೆ) ಯಾವುದೇ ಬಿಲ್ ಪಾವತಿಸಲಾಗಿರುವುದಿಲ್ಲ*** ಎಂದು ಸ್ಪಷ್ಟವಾಗಿ ತಿಳಿಸಿರುತ್ತಾರೆ.

ತದನಂತರ, ಹಾಜರಿದ್ದ ಅಧಿಕಾರಿಗಳೊಂದಿಗೆ ನಡೆಸಿದ ಆಪಾದಿತ ಕಾಮಗಾರಿಗಳ ಪರಿಶೀಲನೆಯ ಸಂದರ್ಭದಲ್ಲಿ ಕಂಡುಬಂದ ಅಂಶಗಳು, ಛಾಯಾಚಿತ್ರಗಳು, ಗುಣಮಟ್ಟದ ಬಗ್ಗೆ ಉದಯಿಸಿದ ಫಲಿತಾಂಶಗಳು, ಗುಣಭರವಸೆ ಉಪವಿಭಾಗ ಮತ್ತು ವಿಭಾಗಗಳ ಅಧಿಕಾರಿಗಳಿಂದ ದೃಢೀಕರಿಸಿರುವ ಗುಣಮಟ್ಟಗಳ ಪರೀಕ್ಷಾ ವರದಿ ಇತ್ಯಾದಿಗಳನ್ನು ಕಡತದಲ್ಲಿ ಮಂಡಿಸಲಾಗಿರುತ್ತದೆ. <u>ಪರಿಶೀಲನೆಯ ಸಂದರ್ಭದಲ್ಲಿ, ಯಾವುದೇ ಕಾಮಗಾರಿಗಳ ಬಗ್ಗೆ ಆಕ್ಷೇಪಣಾರ್ಹ</u>

ವಿಷಯ: ಕಾರವಾರ ಲೋಕೋಪಯೋಗಿ ಉಪವಿಭಾಗದ ವ್ಯಾಪ್ತಿಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕೆಲವು ಕಾಮಗಾರಿಗಳನ್ನು ಕಳಪೆಯಾಗಿ ನಿರ್ವಹಿಸಿರುವುದಾಗಿ ಆರೋಪಿಸಿರುವ ಹಿನ್ನೆಲೆಯಲ್ಲಿ ನಡೆಸಲಾದತನಿಖೆಯಕುರಿತು.

ಉಲ್ಲೇಖ: ಶ್ರೀಮತಿ ರೂಪಾಲಿ ನಾಯ್ಕ, ಮಾನ್ಯ ಶಾಸಕರು, ಕಾರವಾರ ವಿಧಾನಸಭಾಕ್ಷೇತ್ರ–ಇವರು ಇಲಾಖೆಯಲ್ಲಿ ದಾಖಲಿಸಿರುವ ದೂರು ದಿನಾಂಕ:**13.02.2020**.ಕಡತ ಸಂ:ಕಾಇಂ:ಕಾಉಕೋ:05:2020

ಮತ್ತು ನ್ಯೂನತಾತ್ಮಕವೆನಿಸುವ ಅಂಶಗಳು ಕಂಡುಬಂದಿರುವುದಿಲ್ಲ ಎಂಬ ಅಂಶವನ್ನು ಫಲಿತಾಂಶ ವರದಿಗಳಿಂದ ಖಚಿತ ಪಡಿಸಿಕೊಳ್ಳಲಾಗಿದ್ದು, ಸದರಿ ಕಾಮಗಾರಿಗಳ ಬಗ್ಗೆ ಮಾನ್ಯ ಶಾಸಕರು ದೂರು ದಾಖಲಿಸಿದ ನಂತರ ಆಪಾದಿತ ಕಾಮಗಾರಿಗಳಿಗೆ ಸಂಬಂಧಿಸಿದ ಯಾವುದೇ ಬಿಲ್ ಪಾವತಿಸಲಾಗಿರುವುದಿಲ್ಲವೆಂದು ವಿಭಾಗ ಕಚೇರಿ ಅಧಿಕಾರಿಗಳು ಪರಿಶೀಲನೆಯ ಸಂದರ್ಭದಲ್ಲಿ ಸ್ಪಷ್ಟಪಡಿಸಿರುತ್ತಾರೆ.

ಕೊನೆಯದಾಗಿ, ಆಪಾದಿತ ಕಾಮಗಾರಿಗಳ ಪಟ್ಟಿಯ ಕ್ರಮಸಂ:6ರಲ್ಲಿನ:*ಕಾರವಾರ ತಾಲೂಕಿನ ಮಲ್ಲಾಪೂರ ಗ್ರಾಮಪಂಚಾಯತಿ ವ್ಯಾಪ್ತಿಯ ಕುಚೇಗಾರ ಮುಖ್ಯರಸ್ತೆಯಿಂದ ಮುದುಕಪ್ಪ ಓಲೇಕರ್ ಮನೆಯವರೆಗೆ ರಸ್ತೆ ಸುಧಾರಣೆ.* ಕಾಮಗಾರಿಯನ್ನು ರೂ.12.00 ಲಕ್ಷಗಳ ವೆಚ್ಚದಲ್ಲಿ ಆರಂಭಿಸಬೇಕಾಗಿದ್ದು, ಇದರ ಟೆಂಡರ್ ಪ್ರಕ್ರಿಯೆಗಳು ಪೂರ್ಣಗೊಂಡಿಲ್ಲದ ಕಾರಣ, ಇನ್ನೂ ಆರಂಭಿಸಿರುವುದಿಲ್ಲವೆಂದು ಸಂಬಂಧಪಟ್ಟ ಅಧಿಕಾರಿಗಳು ತಿಳಿಸಿದ್ದು, ಸದರಿ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ಸಂದರ್ಭದ ಛಾಯಾಚಿತ್ರಗಳನ್ನು ವರದಿಯೊಂದಿಗೆ ಮಂಡಿಸಲಾಗಿದೆ. ಪರಿಶೀಲನೆಯ ಸಂದರ್ಭದಲ್ಲಿ ತೆಗೆಯಲಾದ ಸಾಂದರ್ಭಿಕ ಛಾಯಾಚಿತ್ರಗಳು, ಫಲಿತಾಂಶ ವರದಿಗಳೊಂದಿಗೆ ಗುಣಭರವಸೆ ಉಪವಿಭಾಗ ಮತ್ತು ವಿಭಾಗದ ಅಧಿಕಾರಿಗಳು ಸಲ್ಲಿಸಿರುವ ಪರಿಶೀಲನಾ ವರದಿ ಇನ್ನಿತರ ವಿವರಗಳನ್ನೊಳಗೊಂಡಿರುವ ಸದರಿ ಕಡತವನ್ನು ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

20/3

ಕಾರ್ಯಪಾಲಕ ಇಂಜಿನಿಯರ್
ಕಾಮಗಾರಿ ಉಸ್ತುವಾರಿ ಕೋಶ
ಲೋ.ಬಂ.ಒ.ಜ.ಸಾ. ಇಲಾಖೆ
ವಿಕಾಸಸೌಧ, ಬೆಂಗಳೂರು

ULS.1266

ಕರ್ನಾಟಕ ಸರ್ಕಾರ

ಸಂಖ್ಯೆ: ಲೋಇ 35 ಸಿಕ್ಯೂಎನ್ 2020(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 20.03.2020

162
ULS
23/03/2020

ಇವರಿಂದ,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಲೋಕೋಪಯೋಗಿ, ಬಂದರು ಮತ್ತು
ಒಳನಾಡು ಜಲಸಾರಿಗೆ ಇಲಾಖೆ,
ವಿಕಾಸಸೌಧ, ಬೆಂಗಳೂರು.

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರೀಬಿದನೂರು) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1266ಕ್ಕೆ ಉತ್ತರಿಸುವ ಕುರಿತು.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/6ಅ/ಪ್ರ.ಸಂ.1266/2020 ದಿ:09.03.2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರೀಬಿದನೂರು) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1266ಕ್ಕೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿದೆ ಹಾಗೂ ಸದರಿ ಉತ್ತರದ soft copy ಅನ್ನು dsqb-kla-kar@nic.in ಇ-ಮೇಲ್ ವಿಳಾಸಕ್ಕೆ ಮೇಲ್ ಕಳುಹಿಸಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಸಿದ್ದಪ್ಪ ಚಂದ್ರಶೇಖರ ಮರ್ತೂರ)
ಶಾಖಾಧಿಕಾರಿ
ಲೋಕೋಪಯೋಗಿ, ಬಂದರು ಮತ್ತು ಒಳನಾಡು
ಜಲಸಾರಿಗೆ ಇಲಾಖೆ (ಸಂಪರ್ಕ-1).

20/3/2020

ಕರ್ನಾಟಕ ವಿಧಾನ ಸಭೆ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1266
ಸದಸ್ಯರ ಹೆಸರು: ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರೀಬಿದನೂರು)
ಉತ್ತರಿಸುವ ದಿನಾಂಕ: 23.03.2020
ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ರಾಜ್ಯದಲ್ಲಿ ಜಿಲ್ಲಾ ಪಂಚಾಯಿತಿಗಳ ರಸ್ತೆಗಳನ್ನು ಪಿ.ಡಬ್ಲ್ಯೂಡಿ. ರಸ್ತೆಗಳನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;</td><td>ಹೌದು</td></tr>
<tr><td>ಆ)</td><td>ಇದ್ದಲ್ಲಿ ಗೌರಿಬಿದನೂರು ತಾಲ್ಲೂಕಿನಲ್ಲಿ ಯಾವ ಯಾವ ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗುವುದು ಮತ್ತು ಈ ರಸ್ತೆಗಳ ಉದ್ದ ಎಷ್ಟು;</td><td>ಗೌರಿಬಿದನೂರು ತಾಲ್ಲೂಕಿನಲ್ಲಿಯ ಈ ಕೆಳಕಂಡ ಗ್ರಾಮೀಣ ರಸ್ತೆಗಳನ್ನು ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾಪಿಸಲಾಗಿದೆ.
<table>
<tr><th>ಕ್ರ.ಸಂ.</th><th>ರಸ್ತೆಯ ಹೆಸರು</th><th>ಉದ್ದ (ಕಿ.ಮೀ. ಗಳಲ್ಲಿ</th></tr>
<tr><td>1</td><td>ಗೌರಿಬಿದನೂರು ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ-234 ರಿಂದ ಹಕ್ಕಿಪಿಕ್ಕಿ ಕಾಲೋನಿ, ಹೊಸೂರು, ಸೊನಗಾನಹಳ್ಳಿ, ಮಾಚೇನಹಳ್ಳಿ ಮಾರ್ಗವಾಗಿ ರಾಜ್ಯ ಹೆದ್ದಾರಿ-94 ನ್ನು ಸಂಪರ್ಕಿಸುವ ರಸ್ತೆ</td><td>19.00</td></tr>
<tr><td>2</td><td>ಗೌರಿಬಿದನೂರು ತಾಲ್ಲೂಕಿನ ರಾಜ್ಯ ಹೆದ್ದಾರಿ-9 ದೊಡ್ಡ ಹನುಮೇನಹಳ್ಳಿ ಕ್ರಾಸ್‌ನಿಂದ ಚಿಕ್ಕಹುಸೇನಪುರ, ತೊಂಡೆಭಾವಿ, ಚಿಕ್ಕಹೊಸಹಳ್ಳಿ ಮಾರ್ಗವಾಗಿ ಘಾಟಿ ಸುಬ್ರಹ್ಮಣ್ಯಕ್ಕೆ ಹೋಗುವ ರಸ್ತೆ</td><td>16.50</td></tr>
<tr><td>3</td><td>ಗೌರಿಬಿದನೂರು ತಾಲ್ಲೂಕಿನ ರಾಜ್ಯ ಹೆದ್ದಾರಿ-9 ಬೈಪಾಸ್‌ನಿಂದ ಡಿ.ಪಾಳ್ಯ, ನರಸಾಪುರ, ದೇವಗಾನಹಳ್ಳಿ, ಜಗರೆಡ್ಡಿಹಳ್ಳಿ, ಮಾರ್ಗವಾಗಿ ಹುಣಸೇನಹಳ್ಳಿಗೆ ಹೋಗುವ ರಸ್ತೆ</td><td>29.00</td></tr>
<tr><td>4</td><td>ಗೌರಿಬಿದನೂರು ತಾಲ್ಲೂಕಿನ ರಾಜ್ಯ ಹೆದ್ದಾರಿ-94 ರಿಂದ ಕೃಷ್ಣರಾಜಪುರ, ಕೋಡಿಹಳ್ಳಿ, ಚೋಳಶೆಟ್ಟಿಹಳ್ಳಿ, ಯಲ್ಲೋಡು, ಬುಳ್ಳಸಂದ್ರ ಮಾರ್ಗವಾಗಿ ಆಂಧ್ರಪ್ರದೇಶ ಗಡಿಗೆ ಹೋಗುವ ರಸ್ತೆ</td><td>12.50</td></tr>
<tr><td></td><td>ಒಟ್ಟು</td><td>77.00</td></tr>
</table>
</td></tr>
</table>

ಕ್ರಸಂ	ಪ್ರಶ್ನೆಗಳು	ಉತ್ತರಗಳು
ಇ)	ಈ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಯಾವಾಗ ಕ್ರಮ ಕೈಗೊಳ್ಳಲಾಗುತ್ತದೆ ಮತ್ತು ಈ ರಸ್ತೆಗಳ ಅಭಿವೃದ್ಧಿಗೆ ಯೋಜನೆ ರೂಪಿಸಲಾಗಿದೆಯೇ? (ವಿವರ ನೀಡುವುದು)	ರಾಜ್ಯದಲ್ಲಿಯ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಹಾಗೂ ಕೆಳದರ್ಜೆಗಿಳಿಸುವ ಕುರಿತು ಪರಿಶೀಲಿಸಲು ರಾಜ್ಯ ಮಟ್ಟದಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಈ ಕುರಿತು ಸರ್ಕಾರದಲ್ಲಿ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಅರ್ಹತೆ ಹೊಂದಿರುವ ರಸ್ತೆಗಳನ್ನು ಗುರುತಿಸಿದ ನಂತರ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಕ್ರಮ ವಹಿಸಲಾಗುವುದು.

ಲೋಇ 35 ಸಿಕ್ಯೂಎನ್ 2020(ಇ)

(ಗೋವಿಂದ ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು
ಸಮಾಜ ಕಲ್ಯಾಣ ಇಲಾಖೆ

UIS .2752

ಕರ್ನಾಟಕ ಸರ್ಕಾರ

ಸಂಖ್ಯೆ: ಲೋಇ 34 ಸಿಕ್ಯೂಎನ್ 2020(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 20.03.2020

145
UIS
23/03/2020

ಇವರಿಂದ,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಲೋಕೋಪಯೋಗಿ, ಬಂದರು ಮತ್ತು
ಒಳನಾಡು ಜಲಸಾರಿಗೆ ಇಲಾಖೆ,
ವಿಕಾಸಸೌಧ, ಬೆಂಗಳೂರು.

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಸಂಜೀವ ಮಠಂದೂರ್ (ಪುತ್ತೂರು) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 2752ಕ್ಕೆ ಉತ್ತರಿಸುವ ಕುರಿತು.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/6ಅ/ಪ್ರ.ಸಂ.2752/2020 ದಿ:09.03.2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಸಂಜೀವ ಮಠಂದೂರ್ (ಪುತ್ತೂರು) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 2752ಕ್ಕೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿದೆ ಹಾಗೂ ಸದರಿ ಉತ್ತರದ soft copy ಅನ್ನು dsqb-kla-kar@nic.in ಇ-ಮೇಲ್ ವಿಳಾಸಕ್ಕೆ ಮೇಲ್ ಕಳುಹಿಸಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಸಿದ್ದಪ್ಪ ಚಂದ್ರಶೇಖರ ಮರ್ತೂರ)
ಶಾಖಾಧಿಕಾರಿ
ಲೋಕೋಪಯೋಗಿ, ಬಂದರು ಮತ್ತು ಒಳನಾಡು
ಜಲಸಾರಿಗೆ ಇಲಾಖೆ (ಸಂಪರ್ಕ-1).

20/3/2020

ಕರ್ನಾಟಕ ವಿಧಾನಸಭೆ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 2752
ಸದಸ್ಯರ ಹೆಸರು ಶ್ರೀ ಸಂಜೀವ ಮಠಂದೂರ್ (ಪುತ್ತೂರು)
ಉತ್ತರಿಸುವ ದಿನಾಂಕ: 23.03.2020
ಉತ್ತರಿಸುವ ಸಚಿವರು: ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ

ಕ್ರಸಂ	ಪ್ರಶ್ನೆಗಳು	ಉತ್ತರಗಳು
ಅ)	ಪುತ್ತೂರು ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು ಎಷ್ಟು ಕಿ.ಮೀ. ಲೋಕೋಪಯೋಗಿ ರಸ್ತೆಗಳಿರುತ್ತದೆ; (ವಿವರ ನೀಡುವುದು)	ಪುತ್ತೂರು ವಿಧಾನಸಭಾ ಕ್ಷೇತ್ರದ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 64.93 ಕಿ.ಮೀ ಉದ್ದದ ರಾಜ್ಯಹೆದ್ದಾರಿ ಮತ್ತು 78.60 ಕಿ.ಮೀ ಉದ್ದದ ಜಿಲ್ಲಾ ಮುಖ್ಯ ರಸ್ತೆ ಹಾಗೂ ಪುತ್ತೂರು ವಿಧಾನಸಭಾ ಕ್ಷೇತ್ರದಲ್ಲಿ ರಾಷ್ಟ್ರೀಯ ಹೆದ್ದಾರಿ–48 ಮತ್ತು 275 ಹಾದುಹೋಗುತ್ತಿದ್ದು, ಅವುಗಳ ಉದ್ದ 82.4 ಕಿ.ಮೀ ಉದ್ದವಿರುತ್ತದೆ. ಜಿಲ್ಲಾ ಮುಖ್ಯ ರಸ್ತೆ ಮತ್ತು ರಾಜ್ಯ ಹೆದ್ದಾರಿಯ ವಿವರಗಳು ಅನುಬಂಧ–1ರಲ್ಲಿ ನೀಡಲಾಗಿದೆ.
ಆ)	ಪುತ್ತೂರು ತಾಲ್ಲೂಕಿನಲ್ಲಿ ಎಷ್ಟು ವರ್ಷಗಳಿಂದ ಯಾವ ಯಾವ ಗ್ರಾಮೀಣ ರಸ್ತೆಗಳನ್ನು ಲೋಕೋಪಯೋಗಿ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿರುವುದಿಲ್ಲ; (ವಿವರ ನೀಡುವುದು)	ಹಿಂದಿನ ಸಾಲಿನಲ್ಲಿ ಪುತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಗ್ರಾಮೀಣ ರಸ್ತೆಗಳನ್ನು ಮೇಲ್ದರ್ಜೆಗೇರಿಸಿರುವುದಿಲ್ಲ. ಪ್ರಸಕ್ತ ಸಾಲಿನಲ್ಲಿ ಸದರಿ ವಿಧಾನಸಭಾ ಕ್ಷೇತ್ರದ ಪುತ್ತೂರು ಮತ್ತು ಬಂಟ್ವಾಳ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 11 ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತಗೊಂಡಿರುತ್ತದೆ. ವಿವರಗಳನ್ನು ಅನುಬಂಧ–2 ರಲ್ಲಿ ನೀಡಲಾಗಿದೆ.
ಇ)	ಹಾಗಿದ್ದಲ್ಲಿ, ಸದರಿ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ರಾಜ್ಯದಲ್ಲಿಯ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಹಾಗೂ ಕೆಳದರ್ಜೆಗಿಳಿಸುವ ಕುರಿತು ಪರಿಶೀಲಿಸಲು ರಾಜ್ಯ ಮಟ್ಟದಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಈ ಕುರಿತು ಸರ್ಕಾರದಲ್ಲಿ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಅರ್ಹತೆ ಹೊಂದಿರುವ ರಸ್ತೆಗಳನ್ನು ಗುರುತಿಸಿದ ನಂತರ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಕ್ರಮ ವಹಿಸಲಾಗುವುದು.

ಲೋಇ 34 ಸಿಕ್ಯೂಎನ್ 2020(ಇ)

(ಗೋವಿಂದ ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು
ಸಮಾಜ ಕಲ್ಯಾಣ ಇಲಾಖೆ

ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ

<u>ರಸ್ತೆವಾರು ವಿವರ 31.3.2019 ರಲ್ಲಿ ಇದ್ದಂತೆ</u> ಅನುಬಂಧ —1

ರಾಜ್ಯ ಹೆದ್ದಾರಿಗಳ ವಿವರಗಳು

ಉದ್ದ :

ಕ್ರ. ಸಂ.	ವಿಧಾನಸಭಾ ಕ್ಷೇತ್ರದ ಹೆಸರು	ರಸ್ತೆಯ ಹೆಸರು ಮತ್ತು ಸಂಖ್ಯೆ	ರಸ್ತೆಯ ಉದ್ದ (ಕಿ.ಮೀ)	ಪ್ರಾರಂಭದ ಸರಪಳಿ(ಕಿ.ಮೀ)	ಮುಕ್ತಾಯದ ಸರಪಳಿ(ಕಿ.ಮೀ)
1	2	3	4	5	6
1	ಪುತ್ತೂರು	ಸುರತ್ಕಲ್–ಕಬಕ ರಾಜ್ಯ ಹೆದ್ದಾರಿ (ಸಂಖ್ಯೆ 101)	9.60	67.00	76.60
2	ಪುತ್ತೂರು	ಕಡೂರು–ಕಾಂಞಂಗಾಡ್ ರಾಜ್ಯ ಹೆದ್ದಾರಿ (ಸಂಖ್ಯೆ 64)	14.40	181.20	195.60
3	ಪುತ್ತೂರು	ಸುಬ್ರಹ್ಮಣ್ಯ–ಮಂಜೇಶ್ವರ ರಾಜ್ಯ ಹೆದ್ದಾರಿ (ಸಂಖ್ಯೆ 100)	20.20	43.80 56.00	54.80 65.20
	ಪುತ್ತೂರು		9.30	65.20	74.50
			5.43	75.57	81.00
4	ಪುತ್ತೂರು	ಬಿಸ್ಲೇಘಾಟ್ ರಾಜ್ಯ ಹೆದ್ದಾರಿ (ಸಂಖ್ಯೆ 113)	6.00	0.00	6.00
		ಒಟ್ಟು	64.93		

ಮುಖ್ಯ ಇಂಜಿನಿಯರ್‌ರವರ ಪರವಾಗಿ,
ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ)
ಬೆಂಗಳೂರು

ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಅನುಬಂಧ

ಜಿಲ್ಲಾ ಮುಖ್ಯ ರಸ್ತೆಗಳ ವಿವರಗಳು ಅನುಬಂಧ –

(ಉದ್ದ ಕಿ.ಮೀ.ಗಳಲ್ಲಿ)

ಕ್ರ. ಸಂ.	ವಿಧಾನಸಭಾ ಕ್ಷೇತ್ರದ ಹೆಸರು	ರಸ್ತೆಯ ಹೆಸರು	ರಸ್ತೆ ಉದ್ದ (ಕಿ.ಮೀ)	ಪ್ರಾರಂಭದ ಸರಪಳಿ (ಕಿ.ಮೀ)	ಮುಕ್ತಾಯದ ಸರಪಳಿ (ಕಿ.ಮೀ)
1	2	3	4	5	6
1	ಪುತ್ತೂರು	ಸಾರಡ್ಕ ಪೆರಿಯಾಲ್‌ತಡ್ಕ ರಸ್ತೆ	9.00	0.00	9.00
2	ಪುತ್ತೂರು	ಪುತ್ತೂರು –ಉಪ್ಪಿನಂಗಡಿ ರಸ್ತೆ	10.20	1.40	11.60
3	ಪುತ್ತೂರು	ಅರಿಯಡ್ಕ ನಿಂತಿಕಲ್‌ಕಟ್ಟೆ ರಸ್ತೆ	13.40	0.00	13.40
4	ಪುತ್ತೂರು	ಕಾವು ಈಶ್ವರಮಂಗಲ ಅಡೂರು ರಸ್ತೆ	10.60	0.00	10.60
5	ಪುತ್ತೂರು	ನಿಡ್ಪಳ್ಳಿ–ಪಾಣಾಜೆ ರಸ್ತೆ	10.60	0.00	10.60
6	ಪುತ್ತೂರು	ಹಂಟ್ಯಾರ್ ಬೆಟ್ಟಂಪಾಡಿ ರಸ್ತೆ	16.80	0.00	16.80
7	ಪುತ್ತೂರು	ಅಂಚಿನಡ್ಕ–ನೆಟ್ಟಾರು ರಸ್ತೆ	8.00	0.00	8.00
		ಒಟ್ಟು	78.60		

ಮುಖ್ಯ ಇಂಜನಿಯರ್‌ರವರ ಪರವಾಗಿ,
ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ)
ಬೆಂಗಳೂರು

ಅನುಬಂಧ-2

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ವಿಧಾನಸಭಾ ವ್ಯಾಪ್ತಿಯಲ್ಲಿ ಬರುವ ಪುತ್ತೂರು ಮತ್ತು ಬಂಟ್ವಾಳ ತಾಲ್ಲೂಕುಗಳಲ್ಲಿ ಗ್ರಾಮೀಣ ರಸ್ತೆಗಳನ್ನು, ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ

Sl No	District	Taluk	Assembly Constituency	Name of the village Road	Length of the Road
1	2	3	4	5	6
1	Dakshina Kannada	Puttur	Puttur	Devasya-Chelyadka-Uppalige-Darbethadka-Shekamale-Kowdichar-Elanthaje-Keyyur	18.30
2	Dakshina Kannada	Puttur	Puttur	Uppinangady-Hirebandady-Koila-Ramakunja-Alantaya-Nelyadi	24.00
3	Dakshina Kannada	Puttur	Puttur	Mudupinadka-Ishwaramangala-Panchodi-Galimukha	15.60
4	Dakshina Kannada	Puttur	Puttur	Mukrampady-Renjilady-Sarve	12.20
5	Dakshina Kannada	Puttur	Puttur	Savanoor-Madavu-Siddamoole-Pambaru-Machinadka	22.30
6	Dakshina Kannada	Puttur	Puttur	Kodimara-Darandakukku-Sediyapu-Kadambu	10.10
7	Dakshina Kannada	Puttur	Puttur	Kanchana- Periyadka Road	10.00
8	Dakshina Kannada	Bantwal	Puttur	Kuddupadavu-Pakalakunja Road	15.00
9	Dakshina Kannada	Bantwal	Puttur	Periyalthadka-Kundadka-Badanaje Road	10.50
10	Dakshina Kannada	Bantwal	Puttur	Peramogaru-Kedila-Mura Road	8.00
11	Dakshina Kannada	Bantwal	Puttur	Ajjinadka- Kundadka Road	5.30
				Total	**151.30**

Chief Engineer
Planning and Road Asset
Management Centre
Bengaluru

ಕರ್ನಾಟಕ ಸರ್ಕಾರ

ಸಂಖ್ಯೆ: ಲೋಇ 22 ~~ಸಿಕ್ಯೂಪಿಎಸ್~~ CRF 2020(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 23/03/2020

01
Stard
23/03/2020

ಇವರಿಂದ,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಲೋಕೋಪಯೋಗಿ, ಬಂದರು ಮತ್ತು
ಒಳನಾಡು ಜಲಸಾರಿಗೆ ಇಲಾಖೆ,
ವಿಕಾಸಸೌಧ, ಬೆಂಗಳೂರು.

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ, ಬೆಂಗಳೂರು.

ಮಾನ್ಯರೇ,

ವಿಷಯ:	ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಪುಟ್ಟರಂಗಶೆಟ್ಟಿ.ಸಿ(ಚಾಮರಾಜನಗರ), ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 2835 ಕ್ಕೆ ಉತ್ತರಿಸುವ ಕುರಿತು.
ಉಲ್ಲೇಖ:	ಪತ್ರ ಸಂಖ್ಯೆ: ಪ್ರಶಾವಿಸ/15ನೇವಿಸ/6ಅ/ಪ್ರ.ಸಂ.2835/2020, ದಿನಾಂಕ 11/03/2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಪುಟ್ಟರಂಗಶೆಟ್ಟಿ.ಸಿ(ಚಾಮರಾಜನಗರ), ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 2835ಕ್ಕೆ ಉತ್ತರದ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿದೆ ಹಾಗೂ ಸದರಿ ಉತ್ತರದ soft copy ಅನ್ನು dsqb-kla-kar@nic.in ಇ-ಮೇಲ್ ವಿಳಾಸಕ್ಕೆ ಮೇಲ್ ಕಳುಹಿಸಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಸಿದ್ದಪ್ಪ ಚಂದ್ರಶೇಖರ ಮತ್ತೂರ)
ಶಾಖಾಧಿಕಾರಿ
ಲೋಕೋಪಯೋಗಿ, ಬಂದರು ಮತ್ತು ಒಳನಾಡು
ಜಲಸಾರಿಗೆ ಇಲಾಖೆ (ಸಂಪರ್ಕ-1).

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	2835
ಸದಸ್ಯರ ಹೆಸರು	:	ಶ್ರೀ ಪುಟ್ಟರಂಗಶೆಟ್ಟಿಸಿ. (ಚಾಮರಾಜನಗರ)
ಉತ್ತರಿಸುವ ದಿನಾಂಕ	:	23.03.2020.
ಉತ್ತರಿಸುವ ಸಚಿವರು	:	ಉಪಮುಖ್ಯಮಂತ್ರಿ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ

ಕ್ರಸಂ	ಪ್ರಶ್ನೆ	ಉತ್ತರ
ಅ)	ಚಾಮರಾಜನಗರ ಪಟ್ಟಣ ದಲ್ಲಿರುವ ಬಿ.ರಾಚಯ್ಯ ಜೋಡಿ ರಸ್ತೆ ಕಾಮಗಾರಿ ಯನ್ನು ರೂ.37.00 ಕೋಟಿ ವೆಚ್ಚದಲ್ಲಿ ಸಿ.ಆರ್.ಎಫ್ ಯೋಜನೆಯಡಿ ಮೂರು ವರ್ಷಗಳ ಹಿಂದೆ ಪ್ರಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ರಾಷ್ಟ್ರೀಯ ಹೆದ್ದಾರಿ ವಲಯದಿಂದ ಕೇಂದ್ರ ರಸ್ತೆ ನಿಧಿ ಯೋಜನೆಯಡಿ "ರಾಜ್ಯ ಹೆದ್ದಾರಿ-57 ನಂಜನಗೂಡು-ಬಿ.ಆರ್ ಹಿಲ್ಸ್ ಕಿ.ಮೀ.38.00 ರಿಂದ 41.10 ರವರೆಗೆ ಚಾಮರಾಜನಗರ ಪಟ್ಟಣ ಪರಿಮಿತಿಯಲ್ಲಿ ಚತುಷ್ಪಥ ರಸ್ತೆಯನ್ನಾಗಿ ಅಗಲೀಕರಣಗೊಳಿಸುವ (ಚಾಮರಾಜನಗರ ಬಿ.ರಾಚಯ್ಯ ಜೋಡಿ ರಸ್ತೆಯ ಬಗ್ಗೆ)" ಕಾಮಗಾರಿಯನ್ನು ದಿನಾಂಕ:27-10-2017 ರಂದು ಪ್ರಾರಂಭಿಸಲಾಗಿರುತ್ತದೆ ಹಾಗೂ ಕಾಮಗಾರಿಯ ಮುಕ್ತಾಯದ ದಿನಾಂಕ: 31-03-2019 ಆಗಿರುತ್ತದೆ. ಅಂದಾಜು ಮೊತ್ತ ರೂ.35.00 ಕೋಟಿಗಳಾಗಿದ್ದು, ಅನುಮೋದಿತ ಗುತ್ತಿಗೆ ಮೊತ್ತ ರೂ34.38 ಕೋಟಿಗಳಾಗಿರುತ್ತದೆ.
ಆ)	ಬಂದಿದ್ದಲ್ಲಿ, ಈವರೆಗೆ ಶೇ 40% ರಷ್ಟು ಕಾಮಗಾರಿ ಸಹ ಪೂರ್ಣಗೊಳ್ಳದಿರಲು ಕಾರಣವೇನು; (ವಿವರ ನೀಡುವುದು)	ಸದರಿ ಕಾಮಗಾರಿಯ ಸ್ಥಳದ ವಾಸ್ತವಿಕ ಪರಿಸ್ಥಿತಿ ಹಾಗೂ ಸ್ಥಳೀಯ ಚುನಾಯಿತ ಪ್ರತಿನಿಧಿಗಳ ಕೋರಿಕೆ ಮೇರೆಗೆ ಮೂಲ ಅಂದಾಜಿನಲ್ಲಿ ಅಳವಡಿಸಲಾದ ಕಾಮಗಾರಿಗಳ ಅಭಿವೃದ್ಧಿಯಲ್ಲಿ ಕೆಲವು ಬದಲಾವಣೆಗಳನ್ನು ಕೈಗೊಳ್ಳಬೇಕಾಗಿರುವುದರಿಂದ ಪರಿಷ್ಕೃತ ಅಂದಾಜನ್ನು ತಯಾರಿಸಿ ಅದರಂತೆ ಪರಿಷ್ಕೃತ ಅಂದಾಜು ಅನುಮೋದನೆ ಪಡೆಯುವಲ್ಲಿ ಕಾಲ ವಿಳಂಬವಾಗಿರುತ್ತದೆ. ಮುಂದುವರಿದು, ಸದರಿ ಕಾಮಗಾರಿಯಲ್ಲಿ 345ಮೀ. ಉದ್ದ (3.5ಮೀ.ಅಗಲ) ರಸ್ತೆ ನಿರ್ಮಾಣದ ಬಗ್ಗೆ ನ್ಯಾಯಾಲಯದಲ್ಲಿದ್ದ ದಾವೆಗಳ ಕಾರಣದಿಂದಾಗಿ ಕಾಮಗಾರಿಯು ವಿಳಂಬವಾಗಿರುತ್ತದೆ. ವಿವರಗಳು ಕೆಳಕಂಡಂತಿರುತ್ತದೆ. • ಪರಿಷ್ಕೃತ ಅಂದಾಜುಪಟ್ಟಿಯನ್ವಯ 3.10 ಕಿಮೀ. (ಸರಪಳಿ 38.00 ಕಿ.ಮೀ. ನಿಂದ 41.10 ಕಿ.ಮೀ. ವರೆಗೆ) ಉದ್ದದ ಕಾಂಕ್ರೀಟ್ ರಸ್ತೆಯನ್ನು ಅಭಿವೃದ್ಧಿಪಡಿಸಬೇಕಾಗಿರುತ್ತದೆ. ಇದರಲ್ಲಿ 0.90 ಕಿ.ಮೀ. (ಸರಪಳಿ 38.00 ಕಿ.ಮೀ. ನಿಂದ 38.900 ಕಿ.ಮೀ. ವರೆಗೆ) 4 ಪಥದ ಸಿಸಿ ರಸ್ತೆಯನ್ನು ಮತ್ತು 2.20 ಕಿಮೀ. (ಸರಪಳಿ 38.900 ಕಿ.ಮೀ. ನಿಂದ 41.10 ಕಿ.ಮೀ. ವರೆಗೆ) 6 ಪಥದ ಸಿಸಿ ರಸ್ತೆಯನ್ನು ಅಭಿವೃದ್ಧಿ ಪಡಿಸಬೇಕಾಗಿರುತ್ತದೆ. • ಹಾಗೂ ಕಾಮಗಾರಿಯ ಅನುಮೋದಿತ ಪರಿಷ್ಕೃತ ಅಂದಾಜುಪಟ್ಟಿ ಯನ್ವಯ ಎರಡು ಬದಿಗಳಲ್ಲಿ ಮತ್ತು ಅಡ್ಡ ರಸ್ತೆಯ ಸಿಸಿ ಚರಂಡಿಗಳ ಜೋಡಣೆಯನ್ನು ಸೇರಿದಂತೆ ಒಟ್ಟು ಉದ್ದ 6380.00 ಮೀ. ಉದ್ದದ ಸಿಸಿ ಚರಂಡಿಯನ್ನು ನಿರ್ಮಿಸಬೇಕಾಗಿರುತ್ತದೆ. • ಸದರಿ ಕಾಮಗಾರಿಯ 345.00 ಮೀ. ಉದ್ದದ (3.50ಮೀ. ಅಗಲ) ರಸ್ತೆಯನ್ನು ಹೊರತುಪಡಿಸಿ ಉಳಿದ ಭಾಗಗಳ ಅಭಿವೃದ್ಧಿ ಕಾಮಗಾರಿ ಅಂದರೆ ಶೇ.96 ಕಾಮಗಾರಿಯು ಸಂಪೂರ್ಣವಾಗಿ ಪೂರ್ಣಗೊಂಡಿರುತ್ತದೆ ಹಾಗೂ 4693.00 ಮೀ ಉದ್ದದ ಸಿಸಿ ಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿರುತ್ತದೆ. ಸಿ.ಸಿ. ಚರಂಡಿ ಕಾಮಗಾರಿಯು ಶೇ.74.00 ರಷ್ಟು ಪೂರ್ಣಗೊಂಡಿರುತ್ತದೆ

		• ಬಾಕಿಯಿರುವ 345.00 ಮೀ. ಉದ್ದಕ್ಕೆ ಮತ್ತು 3.50 ಮೀ ಅಗಲಕ್ಕೆ ರಸ್ತೆ ವಿಸ್ತರಿಸಲು ಮತ್ತು 1687.30 ಮೀ ಚರಂಡಿ ನಿರ್ಮಿಸಲು ಅಡಚಣೆಗಳಿರುತ್ತವೆ. ಇದಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾವೆಗಳಿರುವ ಕಾರಣ ಜಿಲ್ಲಾಡಳಿತವು ಅಡಚಣೆಗಳನ್ನು ತೆರವುಗೊಳಿಸಿರುವುದಿಲ್ಲ. • ಕಾಮಗಾರಿಗೆ ಅವಶ್ಯವಿರುವ ಜಾಗವನ್ನು ತೆರವುಗೊಳಿಸಿಕೊಡಲು ಜಿಲ್ಲಾಡಳಿತಕ್ಕೆ ಮತ್ತು ನಗರಸಭೆ ಚಾಮರಾಜನಗರದವರಿಗೆ ಹಲವು ಬಾರಿ ಪತ್ರ ಮುಖೇನ ಮತ್ತು ಸಭೆಗಳಲ್ಲಿ ಕೋರಿದ್ದರು ಸಹ ಜಾಗವನ್ನು ತೆರವುಗೊಳಿಸಿಕೊಟ್ಟಿರುವುದಿಲ್ಲ. ಜಾಗಕ್ಕೆ ಸಂಬಂಧಿಸಿದಂತೆ ಕೆಲವರು ನ್ಯಾಯಾಲಯದಲ್ಲಿ ಮತ್ತು ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ದಾವೆ ಹೂಡಿರುತ್ತಾರೆ. • ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಕಾಮಗಾರಿಯನ್ನು ಶೇ.96ರಷ್ಟು ಪೂರ್ಣಗೊಳಿಸಲಾಗಿರುತ್ತದೆ.
ಇ)	ಈ ಕಾಮಗಾರಿ ಪೂರ್ಣಗೊಳ್ಳದಿರುವುದರಿಂದ ಇತ್ತೀಚೆಗೆ ಸುರಿದ ಭಾರಿ ಮಳೆಯಿಂದಾಗಿ ತಗ್ಗು ಪ್ರದೇಶದ ಮನೆಗಳು ಮತ್ತು ಅಂಗಡಿಗಳಿಗೆ ನೀರು ನುಗ್ಗಿ ಸಾರ್ವಜನಿಕರಿಗೆ ತೀವ್ರ ಅನಾನುಕೂಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸದರಿ ರಸ್ತೆ ಕಾಮಗಾರಿಯ ಸಂಬಂಧ ನ್ಯಾಯಾಲಯದಲ್ಲಿ ದಾವೆಗಳು ಬಾಕಿ ಇರುವ ರಸ್ತೆಯ ಭಾಗದ ಸರಪಳಿಗಳಲ್ಲಿ ಕಾಂಕ್ರೀಟ್ ಚರಂಡಿ ನಿರ್ಮಿಸಲು ಸಾಧ್ಯವಾಗಿರುವುದಿಲ್ಲ. ಉಳಿದಂತೆ ಲಭ್ಯವಿರುವ ಸ್ಥಳಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿರುತ್ತದೆ.
(ಈ)	ಹಾಗಿದ್ದಲ್ಲಿ, ಸದರಿ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು)	ಒಟ್ಟಾರೆ 3100ಮೀ. ಉದ್ದದಲ್ಲಿ , 345ಮೀ. (3.5ಮೀ.ಅಗಲ) ಉದ್ದವನ್ನು ಹೊರತುಪಡಿಸಿ ಎಲ್ಲಾ ಕಾಮಗಾರಿಯನ್ನು ಎಲ್ಲಾ ರೀತಿಯಲ್ಲಿ ದಿನಾಂಕ:31.3.2019ಕ್ಕೆ ಪೂರ್ಣಗೊಳಿಸಲಾಗಿರುತ್ತದೆ. ಗುತ್ತಿಗೆದಾರರ ಗುತ್ತಿಗೆ ಕಾಲಾವಧಿಯನ್ನು ದಿನಾಂಕ: 26.09.2018 ರಿಂದ 31.03.2019 ರವರೆಗೆ ವಿಸ್ತರಿಸಲಾಗಿರುತ್ತದೆ. ವಿಸ್ತರಿತ ಅವಧಿಯಲ್ಲಿಯೂ ಜಿಲ್ಲಾಡಳಿತ ಹಾಗೂ ನಗರಸಭೆಯಿಂದ ಜಾಗವನ್ನು ತೆರವುಗೊಳಿಸಿ ಕೊಟ್ಟಿಲ್ಲದೇ ಇರುವುದರಿಂದ ಉಳಿಕೆ ಕಾಮಗಾರಿಯನ್ನು ನಿರ್ವಹಿಸಲು ಸಾಧ್ಯವಾಗಿರುವುದಿಲ್ಲ.
(ಉ)	ಇಲ್ಲಿಯವರೆಗೂ ಕಾಮಗಾರಿ ಪೂರ್ಣಗೊಳಿಸದ ಗುತ್ತಿಗೆದಾರರ ವಿರುದ್ಧ ಕೈಗೊಳ್ಳುವ ಕ್ರಮಗಳೇನು? (ವಿವರ ನೀಡುವುದು)	ಗುತ್ತಿಗೆದಾರರು ಕರಾರಿನ ನಿಬಂಧನೆಯಂತೆ ನೀಡಲಾದ ಕಾಲಾವಧಿಯಲ್ಲಿ ಇಲಾಖೆಯಿಂದ ಸೂಚಿಸಲಾದ ಅಡೆತಡೆಗಳಿಲ್ಲದ ಜಾಗಗಳಲ್ಲಿ ಕಾಂಕ್ರೀಟ್ ರಸ್ತೆಯ ಶೇ.96.00ರಷ್ಟು ಮತ್ತು ಕಾಂಕ್ರೀಟ್ ಚರಂಡಿಯ ಕಾಮಗಾರಿಯ ಶೇ.74.00ರಷ್ಟನ್ನು ವಿಶಿಷ್ಟ ವಿವರಣೆಗಳಿಗೆ (specification) ಅನುಗುಣವಾಗಿ ಪೂರ್ಣಗೊಳಿಸಿರುತ್ತಾರೆ. ಆದ್ದರಿಂದ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಂಡಿರುವುದಿಲ್ಲ.

ಕಡತ ಸಂಖ್ಯೆ:ಲೋಇ 22 ಸಿಆರ್‌ಎಫ್ 2020 (ಇ)

(ಗೋವಿಂದ.ಎಂ.ಕಾರಜೋಳ)
ಉಪ ಮುಖ್ಯಮಂತ್ರಿ
ಲೋಕೋಪಯೋಗಿ ಮತ್ತು
ಸಮಾಜ ಕಲ್ಯಾಣ ಇಲಾಖೆ.

ಕರ್ನಾಟಕ ಸರ್ಕಾರ

ಸಂಖ್ಯೆ.ಲೋಇ 298 ಐಎಫ್ಎ 2020

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ, 3ನೇ ಮಹಡಿ
ಡಾ:ಅಂಬೇಡ್ಕರ್ ವೀಧಿ, ಬೆಂಗಳೂರು
ಫೋನ್ ನಂ. 2203 4862/5113/4857
ದಿನಾಂಕ : 23-03-2020

ಇಂದ,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಲೋಕೋಪಯೋಗಿ, ಬಂದರು ಹಾಗೂ
ಒಳನಾಡು ಜಲಸಾರಿಗೆ ಇಲಾಖೆ,
ಬೆಂಗಳೂರು.

ಇವರಿಗೆ,
ಸರ್ಕಾರದ ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ,
ಬೆಂಗಳೂರು.

@ Stand
Time 11-00 23/3/2020

ಮಾನ್ಯರೇ,

ವಿಷಯ:-ವಿಧಾನ ಸಭೆಯ ಸದಸ್ಯರಾದ **ಶ್ರೀ ನಾಗನಗೌಡ ಕಂದ್‌ಕೂಲ್ (ಗುರ್‌ಮಿಠ್ ಕಲ್)** ರವರು ಮಂಡಿಸಿರುವ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 2449ಗೆ ಉತ್ತರ ಸಲ್ಲಿಸುವ ಕುರಿತು.

15ನೇ ವಿಧಾನಸಭೆ 6ನೇ ಅಧಿವೇಶನದಲ್ಲಿ ಸೂಚಿಸಿರುವ, ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ. 2449 ಕ್ಕೆ ಉತ್ತರಗಳನ್ನು 350 ಪ್ರತಿಗಳಲ್ಲಿ ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಡಾ|| ಸೋಮನಾಥ್)
ಆಂತರಿಕ ಆರ್ಥಿಕ ಸಲಹೆಗಾರರು,
ಲೋಕೋಪಯೋಗಿ, ಬಂ ಹಾಗೂ ಒಜಸಾಇ.

ಕರ್ನಾಟಕ ವಿಧಾನಸಭೆ

15ನೇ ವಿಧಾನಸಭೆ

6ನೇ ಅಧಿವೇಶನ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	2449
ಸದಸ್ಯರ ಹೆಸರು	:	ಶ್ರೀ ನಾಗನಗೌಡ ಕಂದಕೂರ್ (ಗುರ್‌ಮಿಟ್ ಕಲ್)
ಉತ್ತರಿಸುವ ದಿನಾಂಕ	:	23-03-2020
ಉತ್ತರಿಸುವ ಸಚಿವರು	:	ಮಾನ್ಯ ಉಪಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ)	ಗುರುಮಿಠಕಲ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಲೋಕೋಪಯೋಗಿ ಇಲಾಖೆಯ ರಸ್ತೆಗಳು ತುಂಬಾ ದುಸ್ಥಿತಿಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿದೆ.
ಆ)	ಹಾಗಿದ್ದಲ್ಲಿ, ಈ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)	2018-19 ಹಾಗೂ 2019-20ನೇ ಸಾಲಿನಲ್ಲಿ ಗುರುಮಿಠಕಲ್ ವಿಧಾನಸಭಾ ಕ್ಷೇತ್ರಕ್ಕೆ ವಿವಿಧ ಯೋಜನೆಗಳಡಿ ಒದಗಿಸಿರುವ ಅನುದಾನ ಹಾಗೂ ಕೈಗೆತ್ತಿಕೊಂಡಿರುವ ರಸ್ತೆ ಕಾಮಗಾರಿಗಳ ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಿದೆ.
ಇ)	2018-19 ಮತ್ತು 2019-20ನೇ ಸಾಲಿನಲ್ಲಿ ಕ್ಷೇತ್ರಕ್ಕೆ ವಿವಿಧ ಯೋಜನೆಯಡಿಯಲ್ಲಿ ಮಂಜೂರಾದ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)	
ಈ)	ಮಂಜೂರಾಗಿರುವ ಅನುದಾನದಲ್ಲಿ ಬಿಡುಗಡೆ ಮಾಡಿರುವ ಹಾಗೂ ತಡೆಹಿಡಿದಿರುವ ಅನುದಾನವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)	2019-20ನೇ ಸಾಲಿಗೆ ಅಪೆಂಡಿಕ್ಸ್-ಇ ರಸ್ತೆ ಮತ್ತು ಸೇತುವೆಗಳು ಇದರಡಿ ರೂ.8800.00 ಕೋಟಿ ಮೊತ್ತದ ಕಾಮಗಾರಿಗಳ ಕಾರ್ಯಭಾರವಿದ್ದು, ಸದರಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ರೂ.1800.00 ಕೋಟಿ ಮೊತ್ತದ ಬಿಲ್ಲುಗಳು ಬಾಕಿಯಿರುತ್ತವೆ. ಆದರೆ 2019-20ನೇ ಸಾಲಿನ ಆಯವ್ಯಯದಲ್ಲಿ ರಸ್ತೆ ಮತ್ತು ಸೇತುವೆ ಅಪೆಂಡಿಕ್ಸ್-ಇ ಕಾಮಗಾರಿಗಳಿಗೆ ರೂ.1479.20 ಕೋಟಿ ಮಾತ್ರ ಅನುದಾನ ಒದಗಿಸಲಾಗಿರುತ್ತದೆ. ಅಲ್ಲದೇ, ಆಗಸ್ಟ್ ಹಾಗೂ ಸೆಪ್ಟೆಂಬರ್ 2019ರ ಮಾಹೆಯಲ್ಲಿ ಉಂಟಾದ ಅತಿವೃಷ್ಟಿ ಹಾಗೂ ನೆರೆಹಾವಳಿಯಿಂದ ಇಲಾಖೆಯಿಂದ ರೂ.7900.00 ಕೋಟಿ ಮೊತ್ತದ ಆಸ್ತಿಗಳಿಗೆ ಹಾನಿಯಾಗಿದ್ದು, ಇವುಗಳ ತುರ್ತು ದುರಸ್ಥಿಗೆ ಅನುದಾನ ಹೊಂದಿಸಬೇಕಾದ ಅನಿವಾರ್ಯತೆ ಉಂಟಾಗಿತ್ತು. ಈ ಹಿನ್ನೆಲೆಯಲ್ಲಿ ಅನುಮೋದನೆ ನೀಡಲಾಗಿರುವ ಕಾಮಗಾರಿಗಳ ಪೈಕಿ ಟೆಂಡರ್ ಹಂತದಲ್ಲಿರುವ, ಟೆಂಡರ್ ಆಹ್ವಾನಿಸಬೇಕಾಗಿರುವ ಹಾಗೂ ಕಾರ್ಯಾದೇಶ ನೀಡಲು ಬಾಕಿ ಇರುವ ಒಟ್ಟಾರೆ ರೂ.4475.05 ಕೋಟಿ ಮೊತ್ತದ ಕಾಮಗಾರಿಗಳನ್ನು ಮಾತ್ರ ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ. ಈ ಪೈಕಿ ಗುರುಮಿಠಕಲ್ ವಿಧಾನಸಭಾ ಕ್ಷೇತ್ರದ ರೂ.35.00 ಕೋಟಿ ಅಂದಾಜು ಮೊತ್ತ 8 ಕಾಮಗಾರಿಗಳು ಪ್ರಾರಂಭವಾಗದೇ ಇದ್ದುದರಿಂದ ಇವುಗಳನ್ನು ಸಹ ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ ಹಾಗೂ ಅನುದಾನದ ಲಭ್ಯತೆಯನ್ನಾಧರಿಸಿ ಕಾಮಗಾರಿ ಕೈಗೆತ್ತಿಕೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು.
ಉ)	ಅನುದಾನವನ್ನು ತಡೆಹಿಡಿದಿರುವುದರಿಂದ ಕ್ಷೇತ್ರದ ಅಭಿವೃದ್ಧಿ ಕುಂಠಿತವಾಗುವುದಲ್ಲವೇ; ತಡೆಹಿಡಿದಿರುವ ಅನುದಾನವನ್ನು ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುವುದು (ಪೂರ್ಣ ಮಾಹಿತಿ ನೀಡುವುದು)?	

ಲೋಇ/298/ಐಎಫ್‌ಎ/2020

(ಗೋವಿಂದ ಎಂ. ಕಾರಜೋಳ)
ಉಪಮುಖ್ಯಮಂತ್ರಿಗಳು ಹಾಗೂ
ಲೋಕೋಪಯೋಗಿ ಸಚಿವರು

KARNATAKA LEGISLATIVE ASSEMBLY

15th Assembly, 6th Session

Starred Question No. : 2499

Name of the Member : Sri Nagana Gowda Kandkur (Gurumithkal)

To be replied on : 23-03-2020

To be replied by : Hon'ble Deputy Chief Minister and Minister for Public Works

Sl. No	Question	Replies
A	Whether it has come to the notice of the Government that the PWD roads in Gurumithkal Legislative Assembly Constituency are in very bad condition?	Yes, it has come to the notice of the Govt.
B	If so, what are the actions taken by the Govt. for Development of these roads? (Details to be furnished)	The complete details of grants released under various schemes and the road works taken up in Gurumitkal Constituency for the year 2018-19 and 2019-20 have been furnished in Annexure-I.
C	What is the total amount of grants sanctioned to this Constituency under various schemes for the year 2018-19 and 2019-20? (Complete details to be furnished)	
D	How much amount of grant allotted is released and how much of grant allotted is with held? (Give Complete Information)	For the year 2019-20, In Appendix-E, the workload under Roads and Bridges were Rs.8800.00 crores. Rs.1800.00 crores of bills were pending as of now for the above workload. But, in the budget for the year 2019-20 in Appendix-E under Roads and Bridges only Rs.1479.20 crores of grants were released. Also, due to the floods and natural calamity occurred during August and September -2019, assets worth Rs.7900.00 crores belonging to the department were damaged and required immediate action to bring it to normalcy. In view of this, the approved works which were in the process of tendering and also which were about to release the work orders, works estimating to Rs.4475.00 crores were temporarily put to hold. Out of these, 8 works which were yet to commence, estimating to Rs.35.00 crores belonging to Gurumitkal vidhana sabha constituency were also among the works which were put to hold. Further, taking up of these works will be checked based on the availability of grants.
E	Will the development of the constituency be not logging behind? In what span of time the held up grant will be released. (Give Complete Details).	

PWD/298/IFA/2020.

(Govinda M Karajola)
Deputy Chief Minister and
Minister for Public Works

ಅನುಬಂಧ-1 (ಪ್ರಶ್ನೆ ಸಂಖ್ಯೆ 2449)

2018-19 ಹಾಗೂ 2019-20ನೇ ಸಾಲಿನಲ್ಲಿ ಗುರುಮಿಠಕಲ್ ಕ್ಷೇತ್ರಕ್ಕೆ ವಿವಿಧ ಯೋಜನೆಗಳಡಿ ಒದಗಿಸಿರುವ ಅನುದಾನ ಹಾಗೂ ಕೈಗೆತ್ತಿಕೊಂಡಿರುವ ರಸ್ತೆ ಕಾಮಗಾರಿಗಳ ವಿವರ

(ರೂ.ಲಕ್ಷಗಳಲ್ಲಿ)

ಕ್ರ.ಸಂ.	ಕಾಮಗಾರಿಯ ವಿವರ	ಅಂದಾಜು ಮೊತ್ತ	ಅಭಿವೃದ್ಧಿ ಪಡಿಸಬೇಕಾದ ಉದ್ದ ಕಿ.ಮೀಗಳಲ್ಲಿ
1	2	3	5
I	**2018-19**		
1	ಅಭಿವೃದ್ಧಿ ಯೋಜನೆ (ಎಸ್.ಡಿ.ಪಿ) ಜಿಲ್ಲಾ ಮುಖ್ಯ ಇತರ ರಸ್ತೆಗಳು		
1	ಯಾದಗಿರಿ ತಾಲೂಕಿನ ಕಣೇಕಲ್-ಕಡೇಚೂರ ರಸ್ತೆ ಕಿ.ಮೀ. 11.00 ರಿಂದ 13.00 ರವರೆಗೆ ನಿರ್ಮಾಣ.(ಇ.ನಂ.87063)	106.00	2.00
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	**106.00**	**2.00**
2	ವಿಶೇಷ ಅಭಿವೃದ್ಧಿ ಯೋಜನೆ-ವಿಶೇಷ ಘಟಕ ಯೋಜನೆ		
1	ಯಾದಗಿರಿ ತಾಲೂಕಿನ ಬುರ್ಜ ತಾಂಡಾ ದಿಂದ ನಲಬಂಡಾ ತಾಂಡಾದವರೆಗೆ ರಸ್ತೆ ಕಿ.ಮೀ. 0.00 ರಿಂದ 2.00 ರವರೆಗೆ ನಿರ್ಮಾಣ.(ಇ.ನಂ.85236)	123.00	2.00
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	**123.00**	**2.00**
3	ವಿಶೇಷ ಅಭಿವೃದ್ಧಿ ಯೋಜನೆ-ಗಿರಿಜನ ಉಪ-ಯೋಜನೆ		
1	ಯಾದಗಿರಿ ತಾಲೂಕಿನ ಮಲ್ಹಾರ ದಿಂದ ಸಾವೂರ ವರೆಗೆ ರಸ್ತೆ ಕಿ.ಮೀ. 18.00 ರಿಂದ 20.00 ರವರೆಗೆ ಸುಧಾರಣೆ.(ಇ.ನಂ.84331)	65.00	2.00
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	**65.00**	**2.00**
4	3054 ಮು.ಮಂ.ಗ್ರಾ.ರ.ಅಭಿವೃದ್ಧಿ ನಿಧಿ "ಜಿಲ್ಲಾ ಮುಖ್ಯ ರಸ್ತೆಗಳ ನವೀಕರಣ"		
1	ಯಾದಗಿರಿ ತಾಲೂಕಿನ ಅರಕೇರಾ ದಿಂದ ಮೊಟ್ನಳ್ಳಿ ರಸ್ತೆ (ಟಿಮುರ) ಕಿ.ಮೀ.5.00 ರಿಂದ 10.00 ರವರೆಗೆ ಸುಧಾರಣೆ, (ಇ.ನಂ.86898)	248.00	5.00

ಕ್ರ.ಸಂ.	ಕಾಮಗಾರಿಯ ವಿವರ	ಅಂದಾಜು ಮೊತ್ತ	ಅಭಿವೃದ್ಧಿ ಪಡಿಸಬೇಕಾದ ಉದ್ದ ಕಿ.ಮೀಗಳಲ್ಲಿ
1	2	3	5
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	248.00	5.00
1	ರಾಜ್ಯ ಹೆದ್ದಾರಿ ಅಭಿವೃದ್ಧಿ ರಸ್ತೆ (ಸುಧಾರಣೆ)		
1	ಯಾದಗಿರಿ ತಾಲೂಕಿನ ಮುಧೋಳ-ಯಲಗೇರಾ ರಸ್ತೆ (ರಾಹೆ-127) ರಸ್ತೆ ಕಿ.ಮೀ.69.75 ರಿಂದ 73.00 ರವರೆಗೆ ಸುಧಾರಣೆ. (ಇ.ನಂ.97144)	400.00	3.25
2	ಯಾದಗಿರಿ ತಾಲೂಕಿನ ಮುಧೋಳ-ಯಲಗೇರಾ ರಸ್ತೆ (ರಾಹೆ-127) ರಸ್ತೆ ಕಿ.ಮೀ.76.00 ರಿಂದ 80.00 ರವರೆಗೆ ಸುಧಾರಣೆ. (ಇ.ನಂ.97730)	475.00	4.00
3	ಯಾದಗಿರಿ ತಾಲೂಕಿನ ಮುಧೋಳ-ಯಲಗೇರಾ ರಸ್ತೆ (ರಾಹೆ-127) ರಸ್ತೆ ಕಿ.ಮೀ.80.00 ರಿಂದ 83.64 ರವರೆಗೆ ಸುಧಾರಣೆ. (ಇ.ನಂ.97731)	425.00	3.64
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	1300.00	10.89
		1842.00	
2	ಜಿಲ್ಲಾ ಮುಖ್ಯ ರಸ್ತೆಗಳ ಅಭಿವೃದ್ಧಿ (ಸುಧಾರಣೆ)		
1	ಯಾದಗಿರಿ ತಾಲೂಕಿನ ಮುಷ್ಟೂರು-ಕಿಲ್ಲನಕೇರಾ ರಸ್ತೆ ಕಿ.ಮೀ. 2.00 ರಿಂದ 7.00 ರವರೆಗೆ ಅಭಿವೃದ್ಧಿಪಡಿಸುವುದು. (ಇ.ನಂ.98203)	400.00	4.00
2	ಯಾದಗಿರಿ ತಾಲೂಕಿನ ಬೆಳಗುಂದಾ ದಿಂದ ರಾಜ್ಯ ಗಡಿಯವರೆಗೆ ರಸ್ತೆ ಕಿ.ಮೀ. 9.00 ರಿಂದ 14.00 ರವರೆಗೆ ಅಭಿವೃದ್ಧಿಪಡಿಸುವುದು. (ಇ.ನಂ.97145)	400.00	4.00
3	ಯಾದಗಿರಿ ತಾಲೂಕಿನ ಕಣೇಕಲ್ ದಿಂದ ತೋರಣತಿಪ್ಪ ಜೆಮುರ ರಸ್ತೆ ಕಿ.ಮೀ. 0.00 ರಿಂದ 5.00 ರವರೆಗೆ ಸುಧಾರಣೆ.(ಇ.ನಂ.106548)	500.00	5.00
4	ಯಾದಗಿರಿ ತಾಲೂಕಿನ ಹಂದರಕಿ-ಬಂದಳ್ಳಿ ರಸ್ತೆ ಕಿ.ಮೀ. 0.00 ರಿಂದ 4.00 ರವರೆಗೆ ಅಭಿವೃದ್ಧಿಪಡಿಸುವುದು. (ಇ.ನಂ.101255)	400.00	4.00
5	ಯಾದಗಿರಿ ತಾಲೂಕಿನ ಅರಕೇರಾ-ಮೊಟ್ನಳ್ಳಿ ರಸ್ತೆ ಕಿ.ಮೀ. 6.50 ರಿಂದ 11.70 ರವರೆಗೆ ಸುಧಾರಣೆ. (ಇ.ನಂ.101608)	500.00	4.80
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	2200.00	21.80
	ಒಟ್ಟು	4042.00	43.69

-3-

ಕ್ರ.ಸಂ.	ಕಾಮಗಾರಿಯ ವಿವರ	ಅಂದಾಜು ಮೊತ್ತ	ಅಭಿವೃದ್ಧಿ ಪಡಿಸಬೇಕಾದ ಉದ್ದ ಕಿ.ಮೀಗಳಲ್ಲಿ
1	2	3	5
II	**2019-20**		
3	ಅಭಿವೃದ್ಧಿ ಯೋಜನೆ (ಎಸ್.ಡಿ.ಪಿ) ಜಿಲ್ಲಾ ಮುಖ್ಯ ನಗರ ರಸ್ತೆಗಳು		
1	ಯಾದಗಿರಿ ತಾಲೂಕಿನ ಅರಕೇರಾ ದಿಂದ ಮೋಟ್ನಳ್ಳಿ ರಸ್ತೆ ಕಿ.ಮೀ 30.70 ರಿಂದ 32.70 ವರೆಗೆ ರಸ್ತೆ ಸುಧಾರಣೆ.(ಇ.ನಂ.105301)	314.40	2.40
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	**314.40**	**2.40**
4	ವಿಶೇಷ ಅಭಿವೃದ್ಧಿ ಯೋಜನೆ-ವಿಶೇಷ ಘಟಕ ಯೋಜನೆ		
1	ಯಾದಗಿರ ತಾಲ್ಲೂಕಿನ ಅಚೋಲಾ ದಿಂದ ಅಚೋಲಾ ತಾಂಡಾವರೆಗೆ ಕಿ.ಮೀ 0.00 ದಿಂದ 2.00 ರವರೆಗೆ ರಸ್ತೆ ಸುಧಾರಣೆ (ಇ.ನಂ.104459)	213.48	2.00
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	**213.48**	**2.00**
5	ವಿಶೇಷ ಅಭಿವೃದ್ಧಿ ಯೋಜನೆ-ಗಿರಿಜನ ಉಪ-ಯೋಜನೆ		
1	ಯಾದಗಿರ ತಾಲೂಕಿನ ವೆಂಕಟೇಶ ನಗರ ದಿಂದ ವಡ್ನಳ್ಳಿ ಗ್ರಾಮದವರೆಗೆ ರಸ್ತೆ ಕಿ.ಮೀ 1.50 ದಿಂದ 2.50 ರವರೆಗೆ ಸುಧಾರಣೆ. (ಇ.ನಂ.104464)	110.19	1.50
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	**110.19**	**1.50**
6	3054 ಮು.ಮಂ.ಗ್ರಾ.ರ.ಅಭಿವೃದ್ಧಿ ನಿಧಿ "ಜಿಲ್ಲಾ ಮುಖ್ಯ ರಸ್ತೆಗಳ ನವೀಕರಣ"		
1	ಯಾದಗಿರಿ ತಾಲೂಕಿನ ಬಳಿಚಕ್ರ-ಅಜಲಾಪೂರ (ಜಿಲ್ಲಾ ಮುಖ್ಯ ರಸ್ತೆ) ಕಿ.ಮೀ. 8.20 ರಿಂದ 11.50 ರವರೆಗೆ ನವೀಕರಣ. (ಇ.ನಂ.105340)	92.00	3.30
2	ಯಾದಗಿರಿ ತಾಲೂಕಿನ ಗುರುಮಿಟಕಲ್ ದಿಂದ ಬುರಗಾಪಲ್ಲಿ ರಸ್ತೆ ಕಿ.ಮೀ. 7.00 ರಿಂದ 8.20 ರವರೆಗೆ ಸುಧಾರಣೆ. (ಇ.ನಂ.105365)	109.25	1.20
	ಒಟ್ಟು (ಗುರುಮಿಟಕಲ್ ವಿಧಾನಸಭಾಕ್ಷೇತ್ರ) :-	**201.25**	**4.50**
	ಒಟ್ಟು	**839.32**	**10.40**

ಪ್ರಶ್ನೆ ಸಂಖ್ಯೆ 2449

-4-

ರಾಷ್ಟ್ರೀಯ ಹೆದ್ದಾರಿ ವಲಯ

ಕ್ರ ಸಂ	ಕಾಮಗಾರಿಯ ಹೆಸರು	ರಸ್ತೆ ಉದ್ದ (ಕಿ.ಮೀ)	ಮಂಜೂರಾದ ಮೊತ್ತ (ರೂ.ಕೋಟಿ)	ಬಿಡುಗಡೆಯಾದ ಮೊತ್ತ (ರೂ.ಕೋಟಿ)
1	Improvements to road from Yergol to Bachwar from Km. 0.00 to 12.00 In Yadgir Taluka Yadgir District.CRF-KNT-2016-17-1818	4.765	5	1
2	Reconstruction of road from Handarki cross to Bandalli (via K.Hosa halli Kotegera-S.Hosa halli-Honagera)0.00 Km to 15.00KmCRF-KNT-2017-18-2408	10.3	22	-
3	Reconstruction of road from Kanekal to Kadechur (via Baal ched-Souras trahalli-Kadechur join NH-150) 0.00Km to 12.00Km	11.15	18	-
4	Reconstruction of road from Saidapur to Narayanpet (Telangana State Border) of Yadgiri District. CRF-KNT-2017-18-2410	21.83	50	-
5	Improvement to Yadgiri-Saidapur of Yadgiri CRF-KNT-2017-18-2411	25.12	40	-
	ಒಟ್ಟು	73.16	135	1

Stand 21/3km

ಕರ್ನಾಟಕ ಸರ್ಕಾರ

ಸಂಖ್ಯೆ:ಪಸಂಮೀ ಇ-85 ಮೀಇಯೋ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 21-03-2020

(3)

ಇವರಿಂದ,
ಸರ್ಕಾರದ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ವಿಕಾಸಸೌಧ,
ಬೆಂಗಳೂರು.

ಇವರಿಗೆ
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ ಸಚಿವಾಲಯ,
ವಿಧಾನಸೌಧ,
ಬೆಂಗಳೂರು-1.

ಮಾನ್ಯರೆ,

ವಿಷಯ:- ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಉಮಾನಾಥ ಎ. ಕೋಟ್ಯಾನ್ (ಮೂಡಬಿದ್ರೆ) ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 2839 ಕ್ಕೆ ಉತ್ತರ ಒದಗಿಸುವ ಬಗ್ಗೆ.

******

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಉಮಾನಾಥ ಎ.ಕೋಟ್ಯಾನ್ (ಮೂಡಬಿದ್ರೆ) ರವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 2839 ಕ್ಕೆ ಸಂಬಂಧಿಸಿದ ಕನ್ನಡ ಭಾಷೆಯ ಉತ್ತರದ 350 ಹಾಗೂ ಆಂಗ್ಲ ಭಾಷೆಯ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ತಮಗೆ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

Kamakshi U.A 21/3/2020
(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

ಕರ್ನಾಟಕ ವಿಧಾನಸಭೆ

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2839
2) ಸದಸ್ಯರ ಹೆಸರು : ಶ್ರೀ ಉಮಾನಾಥ ಎ.ಕೋಟ್ಯಾನ್ (ಮೂಡಬಿದ್ರೆ)
3) ಉತ್ತರಿಸುವ ದಿನಾಂಕ : 23-03-2020
4) ಉತ್ತರಿಸಬೇಕಾದ ಸಚಿವರು : ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಮೀನುಗಾರಿಕೆ ಸಮಗ್ರ ಅಭಿವೃದ್ಧಿಗಾಗಿ ಪರಿಣಾಮಕಾರಿ ಹಾಗೂ ಮೀನುಗಾರರ ಹಿತರಕ್ಷಣೆಗೆ ರೂಪಿಸಿರುವ ಯೋಜನೆಗಳಾವುವು; (ವಿವರ ನೀಡುವುದು)	ರಾಜ್ಯದಲ್ಲಿ ಮೀನುಗಾರಿಕೆ ಸಮಗ್ರ ಅಭಿವೃದ್ಧಿಗಾಗಿ ಹಾಗೂ ಮೀನುಗಾರರ ಹಿತರಕ್ಷಣೆಗೆ ರೂಪಿಸಿರುವ ಯೋಜನೆಗಳ ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಲಾಗಿದೆ.
ಆ)	ಒಳನಾಡು ಮೀನುಗಾರಿಕೆ ಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಾಧಿಸಿದ ಗುರಿ ಸಾಧನೆಯ ಪ್ರಗತಿಯೇನು;	ಒಳನಾಡು ಮೀನುಗಾರಿಕೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಾಧಿಸಿದ ಗುರಿ ಸಾಧನೆಯ ಪ್ರಗತಿಯ ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ.
ಇ)	ಮೀನುಗಾರಿಕೆಯಲ್ಲಿ ತೊಡಗಿಸಿಕೊಂಡವರಿಗೆ ಕಲ್ಪಿಸಿರುವ ವೈಜ್ಞಾನಿಕ ಮತ್ತು ವಿಸ್ತರಣಾ ಸೇವೆಗಳಾವುವು; (ವಿವರಗಳೊಂದಿಗೆ)	ಮೀನುಗಾರಿಕೆ ಇಲಾಖೆಯಲ್ಲಿ ಒಟ್ಟು 04 ಮೀನುಗಾರಿಕೆ ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ತರಬೇತಿ ಕೇಂದ್ರಗಳಲ್ಲಿ ಆಸಕ್ತ ಕೃಷಿಕರಿಗೆ ಹಾಗೂ ಮೀನುಗಾರರಿಗೆ ವಿವಿಧ ಆಧುನಿಕ ಮೀನುಗಾರಿಕಾ ತಂತ್ರಜ್ಞಾನ ಮತ್ತು ಮೀನುಗಾರಿಕೆ ಕೌಶಲ್ಯಾಭಿವೃದ್ಧಿಗಾಗಿ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಹಾಗೆಯೇ, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಏರ್ಪಡಿಸಲಾಗುವ ಮತ್ಸ್ಯಮೇಳ ಹಾಗೂ ಕೃಷಿ ಮೇಳ ಕಾರ್ಯಕ್ರಮಗಳಲ್ಲಿ ಪ್ರದರ್ಶನಗಳನ್ನು ಏರ್ಪಡಿಸಿ ಮೀನುಗಾರಿಕೆ ಕುರಿತ ನೂತನ ತಂತ್ರಜ್ಞಾನದ ಮಾಹಿತಿಗಳನ್ನು ನೀಡಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಮೈಸೂರು, ಬಳ್ಳಾರಿ, ವಿಜಯಪುರ, ಚಿಕ್ಕಬಳ್ಳಾಪುರ, ದಾವಣಗೆರೆ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಮತ್ಸ್ಯಮೇಳ ಕಾರ್ಯಕ್ರಮವನ್ನು ಏರ್ಪಡಿಸಿ ಈ ಭಾಗದ ಕೃಷಿಕರಿಗೆ ಮೀನುಗಾರಿಕೆ ಕುರಿತ ನೂತನ ಪದ್ಧತಿಗಳ ಮಾಹಿತಿಗಳನ್ನು ಪ್ರಚಾರ ಪಡಿಸಲಾಗಿರುತ್ತದೆ.

		ಮುಂದುವರೆದು, ಮೀನು ಕೃಷಿಕರ ದಿನಾಚರಣೆ ಅಂಗವಾಗಿ ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿ ಮೀನು ಕೃಷಿ ತಾಂತ್ರಿಕತೆ ಕುರಿತು ಕಾರ್ಯಕ್ರಮಗಳಲ್ಲಿ ಹಾಗೂ ಕೃಷಿ ಇಲಾಖೆಯಿಂದ ಆಯೋಜಿಸುವ ಕೃಷಿ ಅಭಿಯಾನ ಕಾರ್ಯಕ್ರಮಗಳನ್ನು ಹೋಬಳಿ ಮಟ್ಟದಲ್ಲಿ ಹಮ್ಮಿಕೊಂಡು ಮೀನುಗಾರರಿಗೆ / ಕೃಷಿಕರಿಗೆ ಆಧುನಿಕ ಪದ್ಧತಿಗಳ ಅರಿವು ಮೂಡಿಸಲಾಗುತ್ತಿದೆ.
ಈ)	ಮೀನು ಮಾರಾಟ ಮತ್ತು ಮೀನು ಉತ್ಪಾದನೆಗೆ ಕೈಗೊಂಡ ಸುಧಾರಣಾ ಕ್ರಮಗಳು ಯಾವುವು; (ವಿವರ ನೀಡುವುದು)	ಮೀನು ಮಾರಾಟ ಮತ್ತು ಮೀನು ಉತ್ಪಾದನೆಗೆ ಕೈಗೊಂಡ ಸುಧಾರಣಾ ಕ್ರಮಗಳು ವಿವರಗಳನ್ನು **ಅನುಬಂಧ-3**ರಲ್ಲಿ ಒದಗಿಸಲಾಗಿದೆ.
ಉ)	ಮೀನುಗಾರಿಕೆಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಪ್ರೋತ್ಸಾಹಕ ಕ್ರಮಗಳಾವುವು? (ವಿವರ ನೀಡುವುದು)	ಮೀನುಗಾರಿಕೆಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಪ್ರೋತ್ಸಾಹಕ ಕ್ರಮಗಳ ವಿವರಗಳನ್ನು **ಅನುಬಂಧ-4** ರಲ್ಲಿ ಒದಗಿಸಲಾಗಿದೆ.

ಸಂಖ್ಯೆ: ಪಸಂಮೀ ಇ-85 ಮೀಇಯೋ 2020

(ಕೋಟ ಶ್ರೀನಿವಾಸ ಪೂಜಾರಿ)
ಮುಜರಾಯಿ, ಮೀನುಗಾರಿಕೆ ಹಾಗೂ
ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

KARNATAKA LEGISLATIVE ASSEMBLY

1) Starred LA Question No : 2839
2) Name of the Member : Sri Umanath A. Kotian (Moodbidri)
3) Date of Reply : 23-03-2020
4) To be replied by : Muzrai, Fisheries, Ports and Inland Water Transport Minister

	Question	Answer
A	What are the schemes formulated for the effective and holistic development of fisheries in the State and welfare of the fishermen; (Furnish details)	The details of the schemes formulated for the effective and holistic development of fisheries in the state and welfare of the fishermen are furnished in **Annexure-1**.
B	What are the achievements in Inland Fisheries in the previous three years;	Progress achieved in inland fisheries in the previous three years (targets and achievements) are furnished in **Annexure-2**.
C	What are the technical and extension facilities provided for the fishermen; (Furnish details)	There are 4 fisheries training centres in the State. These centres impart training on modern fisheries technologies and skill development to fishermen and farmers who were interested in fisheries. Further, information stalls about fisheries were set up during the matsyamelas, krishi melas and krishi abhiyans. These stalls give information about the new technologies to the fishers. In the current year matsyamelas were organised in Mysore, Bellary, Vijayapura, Chikkamagaluru, Davengere and Mandya districts. In these matsyamelas the awareness is brought for the fishers regarding the new methods of fisheries.

		In addition, fisheries field day is organised in all taluks, where the awareness is brought regarding the new methods, facilities and programmes implemented by the Fisheries Department and also the Department is actively participating in the Krishi Abhiyans which were organised at the Hobli levels.
D	What are the Steps taken for the improvement of fish marketing and fish production; (Furnish details)	The steps taken to improve fish marketing and fish production were furnished in **Annexure-3**.
E	What are the steps taken by the Government for providing necessary infrastructure for fisheries? (Furnish details)	The steps taken by the Government for providing necessary infrastructure for fisheries are furnished in **Annexure- 4**.

No. AHF E-85 SFS 2020

(KOTA SRINIVASA POOJARY)
Minister for Muzrai, Fisheries,
Ports and Inland Water Transport

ಅನುಬಂಧ-1

ರಾಜ್ಯದಲ್ಲಿ ಮೀನುಗಾರಿಕೆ ಸಮಗ್ರ ಅಭಿವೃದ್ಧಿಗಾಗಿ ಪರಿಣಾಮಕಾರಿ ಹಾಗೂ ಮೀನುಗಾರರ ಹಿತರಕ್ಷಣೆಗೆ ರೂಪಿಸಿರುವ ಯೋಜನೆಗಳು.

1. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ

a. "ಮತ್ಸ್ಯ ಕೃಷಿ ಆಶಾ ಕಿರಣ" ಯೋಜನೆಯಡಿ ಕೆರೆಗಳಲ್ಲಿ ಮೀನು ಉತ್ಪಾದನೆಯನ್ನು ಹೆಚ್ಚಿಸಲು ಹಾಗೂ ಮೀನು ಕೃಷಿಗೆ ಉತ್ತೇಜನ ನೀಡಲು, ಪ್ರತಿ ಹೆಕ್ಟೇರ್‌ಗೆ 4,000 ಬಲಿತ ಮೀನು ಮರಿಗಳನ್ನು ಹಾಗೂ 2 ಟನ್ ಕೃತಕ ಆಹಾರವನ್ನು ಖರೀದಿಸಲು ಘಟಕ ವೆಚ್ಚದ ಶೇ.50 ರಷ್ಟು ಹಾಗೂ ಗರಿಷ್ಠ 27,000 ರೂ.ಗಳನ್ನು ನೀಡಲಾಗುತ್ತಿದೆ..

b. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

c. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/- ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000 ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

d. ಸಮಗ್ರ ಮೀನು ಕೃಷಿಗೆ ಕ್ಲಸ್ಟರ್ ಮಾದರಿಯಲ್ಲಿ ಆಯ್ದ 14 ಜಂಟಿ ತಾಲ್ಲೂಕುಗಳಲ್ಲಿ ಸಮಗ್ರವಾಗಿ ಮತ್ತು ಸುಸಂಘಟಿತ ಮಾದರಿಯಲ್ಲಿ ಮೀನು ಕೃಷಿಯ ಅಭಿವೃದ್ಧಿಯನ್ನು ಕೈಗೊಳ್ಳಲಾಗುವುದು. ಈ ಯೋಜನೆಯಡಿ ಕೃಷಿಕರಿಗೆ ಮೀನು ಸಾಕಾಣಿಕೆಗೆ ಕೊಳ ಮತ್ತು ಇತರೆ ಮೂಲಭೂತ ಸೌಕರ್ಯಗಳ ಸೃಷ್ಟಿಗೆ ಸಹಾಯಧನ ನೀಡಲಾಗುವುದು. ಕ್ಲಸ್ಟರ್ ಪ್ರದೇಶದಲ್ಲಿ ಕೃಷಿಗೆ ಅನುಪಯುಕ್ತವಾಗಿರುವ ಜೌಗು-ಚೌಳು ಪ್ರದೇಶಗಳಲ್ಲಿ ಮೀನು ಸಾಕಾಣಿಕೆಗೆ ಆದ್ಯತೆ ನೀಡಲಾಗುವುದು.

2. ಹೊಸ ಘಟಕ:ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ 400 ಘಟಕಗಳಿಗೆ ಸಹಾಯಧನ ನೀಡುವ ಉದ್ದೇಶಿಸಲಾಗಿದೆ.

3. ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ (Advanced fingerlings) ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು. ಅಗತ್ಯವಾದ ಬೆರಳುದ್ದದ ಮೀನುಮರಿಗಳನ್ನು ನೊಂದಾಯಿತ ಮೀನುಮರಿ ಸಾಕಾಣಿಕೆದಾರರಿಂದ ಸರ್ಕಾರವು ನಿಗದಿಪಡಿಸಿದ ದರದಲ್ಲಿ ಖರೀದಿಸಲಾಗುವುದು.

4. ನೀಲಿ ಕ್ರಾಂತಿ - ಮೀನುಗಾರಿಕೆ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ (ಕೇಂದ್ರ ಪುರಸ್ಕೃತ ಯೋಜನೆ) ಕೇಂದ್ರ ಸರ್ಕಾರದ ನೀಲಿಕ್ರಾಂತಿ ಸಮಗ್ರ ಮೀನುಗಾರಿಕೆ ಅಭಿವೃದ್ಧಿ ಮತ್ತು ನಿರ್ವಹಣೆ ಯೋಜನೆಯಡಿ ಕರಾವಳಿ

ಮೀನುಗಾರಿಕೆ, ಮೂಲಭೂತ ಸೌಲಭ್ಯ ಮತ್ತು ಹಿಡುವಳಿ ನಂತರದ ಕಾರ್ಯಾಚರಣೆಗಳ ಅಭಿವೃದ್ಧಿ, ಮೀನುಗಾರರ ಕಲ್ಯಾಣಕ್ಕಾಗಿ ರಾಷ್ಟ್ರೀಯ ಯೋಜನೆ, ಒಳನಾಡು ಮೀನುಗಾರಿಕೆ ಮತ್ತು ಜಲಕೃಷಿ ಅಭಿವೃದ್ಧಿ, ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿ ಮತ್ತು ಅದರ ಚಟುವಟಿಕೆಗಳು ಮತ್ತು ಇತರೆ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರದ ಶೇ.24 ರಷ್ಟು ನೆರವಿನೊಂದಿಗೆ ಅನುಷ್ಠಾನಗೊಳಿಸಲು ಅವಕಾಶ ಕಲ್ಪಿಸಲಾಗಿದೆ.

5.ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ

ಉತ್ತರ ಕರ್ನಾಟಕದಲ್ಲಿ ಸುಮಾರು 1.64 ಲಕ್ಷ ಹೆಕ್ಟೇರ್ ವಿಸ್ತೀರ್ಣದ ಜಲಾಶಯಗಳು 42,195 ಹೆಕ್ಟೇರ್ ವಿಸ್ತೀರ್ಣದ ದೊಡ್ಡಕೆರೆಗಳು, 20667 ಹೆಕ್ಟೇರ್ ವಿಸ್ತೀರ್ಣದ ಗ್ರಾಮ ಪಂಚಾಯತ್ ಕೆರೆಗಳು, ನದಿಗಳು ಮತ್ತು ಕಾಲುವೆಗಳಿದ್ದು, ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ವಿಫುಲ ಅವಕಾಶವನ್ನು ನೀಡುತ್ತವೆ. ಈ ಹಿನ್ನೆಲೆಯಲ್ಲಿ "ನಿಜ ಶರಣ ಶ್ರೀ.ಅಂಬಿಗರ ಚೌಡಯ್ಯ ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಸಂಸ್ಥೆ" ಎಂಬ ಸಂಸ್ಥೆಯನ್ನ ಸ್ಥಾಪಿಸಲಾಗಿದೆ. ಉದ್ದೇಶಿತ ಸಂಸ್ಥೆಯ ಮುಖ್ಯ ಉದ್ದೇಶಗಳೆಂದರೆ,

- ಉತ್ತರ ಕರ್ನಾಟಕದ ಸಮಗ್ರ ಮೀನುಗಾರಿಕೆ ಅಭಿವೃದ್ಧಿಗೆ ಸ್ಥಳೀಯ ಅಗತ್ಯತೆಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ರೂಪಿಸಿ, ಅನುಷ್ಠಾನಗೊಳಿಸುವುದು.
- ಅಗತ್ಯ ಯೋಜನಾ ವರದಿ ಸಿದ್ಧಪಡಿಸಿ ವಿವಿಧ ಮೂಲಗಳಿಂದ ಮೀನುಗಾರಿಕೆ ಚಟುವಟಿಕೆಗಳಿಗೆ ಅನುದಾನವನ್ನು ಪಡೆದು ಕಾರ್ಯಕ್ರಮ ಅನುಷ್ಠಾನಗೊಳಿಸುವುದು. ಮತ್ತು
- ಮೀನುಗಾರಿಕೆ ಶಿಕ್ಷಣ, ಸಂಶೋಧನೆ, ವಿಸ್ತರಣೆ ಮತ್ತು ಅಭಿವೃದ್ಧಿಯಲ್ಲಿ ನಿರತರಾಗಿರುವ ಸಂಸ್ಥೆಗಳು ಹಾಗೂ ಮೀನುಗಾರರ ಸಂಘಟನೆಗಳ ಸಹಯೋಗದೊಂದಿಗೆ ಉತ್ತರ ಕರ್ನಾಟಕದ ಮೀನುಗಾರಿಕೆ ಮತ್ತು ಮೀನು ಕೃಷಿ ಅಭಿವೃದ್ಧಿಗೆ ಕ್ರಮವಹಿಸುವುದು.

6. ಸಂಕಷ್ಟ ಪರಿಹಾರ ನಿಧಿಗೆ ಅಂಶದಾನಗಳು

ಸಂಕಷ್ಟ ಪರಿಹಾರ ನಿಧಿಗೆ ಸರ್ಕಾರದಿಂದ ಮೂಲ ಬಂಡವಾಳ ನೀಡುವ ಸಲುವಾಗಿ ಆಯವ್ಯಯದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ನಿಧಿಯಿಂದ ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.3.00 ಲಕ್ಷ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1.00 ಲಕ್ಷ ಪರಿಹಾರ ನೀಡಲು ಹಾಗೂ ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.1.00 ಲಕ್ಷ ಮೀನುಗಾರಿಕೆ ಬಂದರು/ ಇಳಿದಾಣ ಕೇಂದ್ರದಲ್ಲಿ ಕೆಲಸದಲ್ಲಿದ್ದಾಗ ಮರಣ ಹೊಂದಿದಲ್ಲಿ ರೂ.1.00 ಲಕ್ಷ, ಸಮುದ್ರದಲ್ಲಿ ಮೀನುಗಾರಿಕೆಗೆ ಹೋದಾಗ ಅನಾರೋಗ್ಯದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷ ನೆರವು ನೀಡಲು ಅವಕಾಶವಿದೆ. ಸಮುದ್ರದಲ್ಲಿ ಮೀನುಗಾರಿಕೆ ಮಾಡುವಾಗ ಪ್ರಕೃತಿ ವಿಕೋಪದಿಂದ ದೋಣಿ ಅವಘಡದಿಂದ ಮೃತರಾದ ಮೀನುಗಾರರ ಕುಟುಂಬದವರಿಗೆ ರೂ 6.00 ಲಕ್ಷ ಪರಿಹಾರ ನೀಡಲಾಗುವುದು.

7. ಮತ್ಸ್ಯ ಆಶ್ರಯ ಯೋಜನೆ

ಮೀನುಗಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲು ಮತ್ಸ್ಯಾಶ್ರಯ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮತ್ಸ್ಯಾಶ್ರಯ ಯೋಜನೆಯಡಿ ಮನೆ ನಿರ್ಮಾಣಕ್ಕೆ ಸಾಮಾನ್ಯ ಮೀನುಗಾರರಿಗೆ ರೂ.1.20 ಲಕ್ಷ, ಪರಿಶಿಷ್ಟ ಜಾತಿ

/ ಪರಿಶಿಷ್ಟ ಪಂಗಡಗಳ ಫಲಾನುಭವಿಗಳಿಗೆ ಗ್ರಾಮೀಣ ಪ್ರದೇಶದಲ್ಲಿ ರೂ 1.75 ಲಕ್ಷ ಹಾಗೂ ನಗರ ಪ್ರದೇಶದಲ್ಲಿ ರೂ 2.00 ಲಕ್ಷ ಸಹಾಯಧನ ನೀಡಲಾಗುವುದು.

8. ಸಾಂಪ್ರದಾಯಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು:
ಸಾಂಪ್ರದಾಯಿಕ ದೋಣಿಗಳಿಗೆ ಪಡಿತರ ದರದಲ್ಲಿ 300 ಲೀಟರ್ ಸೀಮೆ ಎಣ್ಣೆಯನ್ನು ಸರಬರಾಜು ಮಾಡಲು ಅವಕಾಶ ಕಲ್ಪಿಸಲಾಗಿದೆ.

9. ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ : ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ಬಳಸುವ ಡೀಸೆಲ್ ಮೇಲಿನ ರಾಜ್ಯ ಮಾರಾಟ ಕರಕ್ಕೆ ಸಮನಾದ ಮೊತ್ತವನ್ನು ಸಹಾಯಧನವಾಗಿ ದೋಣಿಗಳ ಮಾಲೀಕರ ಬ್ಯಾಂಕ್ ಖಾತೆಗೆ ನೇರವಾಗಿ ಬಿಡುಗಡೆ ಮಾಡುವ ಮೂಲಕ ಮರುಪಾವತಿ ಮಾಡುವುದು ಈ ಯೋಜನೆಯ ಉದ್ದೇಶ. ವಾರ್ಷಿಕ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳಿಗೆ 1,50,000 ಕಿಲೋ ಲೀಟರ್ ಡೀಸಲ್ ಮೇಲಿನ ಮಾರಾಟ ಕರಕ್ಕೆ ಸಹಾಯಧನ ನೀಡಲಾತ್ತಿದೆ.

10. ಮೀನು ಮಾರುಕಟ್ಟೆಗಳ ನಿರ್ಮಾಣಕ್ಕಾಗಿ ಸಹಾಯ: ಮೀನುಗಾರರ ಸಹಕಾರ ಸಂಘಗಳಿಗೆ ತಮ್ಮ ಸ್ವಂತ ನಿವೇಶನದಲ್ಲಿ ನೀರು, ವಿದ್ಯುಚ್ಛಕ್ತಿ ಮತ್ತು ಇತರ ಸೌಲಭ್ಯಗಳೊಂದಿಗೆ ಕನಿಷ್ಠ 500 ಚದರಡಿಯ ಮೀನು ಸಂಗ್ರಹಣೆ ಹಾಗೂ ಮಾರುಕಟ್ಟೆ ಕಟ್ಟಡವನ್ನು ನಿರ್ಮಿಸಲು ಅಂದಾಜು 10 ಲಕ್ಷ ರೂ.ಗಳ ಘಟಕ ವೆಚ್ಚದಲ್ಲಿ ಶೇ.75 ರಷ್ಟು ಸಹಾಯಧನವನ್ನು ಒದಗಿಸುವ ಮೂಲಕ ನೆರವು ನೀಡಲಾಗುತ್ತಿದೆ.

11. ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ

a. ಕರಾವಳಿ ಮತ್ತು ಒಳನಾಡಿನಲ್ಲಿ ಸಾಂಪ್ರದಾಯಿಕ ಮೀನುಗಾರರಿಗೆ ಮೀನು ಹಿಡುವಳಿಗೆ ಬೇಕಾದ ಬಲೆ, ಮತ್ತು ಪೂರಕ ಸಾಮಗ್ರಿಗಳನ್ನು ಕಿಟ್ ರೂಪದಲ್ಲಿ ಖರೀದಿಸಲು ಅವಕಾಶ ಮಾಡಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

b. ಮೀನು ಮರಿಗಳನ್ನು ಹಿಡಿಯುವುದನ್ನು ತಪ್ಪಿಸಿ ಮತ್ಸ್ಯ ಸಂಪತ್ತನ್ನು ರಕ್ಷಿಸಲು ಮೀನುಗಾರರಿಗೆ ಕಾಡ್ ಎಂಡ್‌ನಲ್ಲಿ 35 ಎಂಎಂ ಸ್ಕ್ವೇರ್ ಮೆಶ್ ಬಲೆಗಳನ್ನು ಉಚಿತವಾಗಿ ನೀಡಲು ಉದ್ದೇಶಿಸಲಾಗಿದೆ. ಈ ಯೋಜನೆಯ ಘಟಕ ವೆಚ್ಚ ಗರಿಷ್ಠ ರೂ.10,000 ಗಳಾಗಿದ್ದು, ಶೇ.100 ರಷ್ಟು ಸಹಾಯಧನ ನೀಡಲು ಅವಕಾಶ ಮಾಡಲಾಗಿದೆ.

c. ರಾಜ್ಯದ ಎಲ್ಲಾ ಒಳನಾಡು ಜಿಲ್ಲೆಗಳ ಕೆರೆ, ಜಲಾಶಯ ಹಾಗೂ ನದಿಭಾಗಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಮೀನುಗಾರರಿಗೆ ಸದ್ರಿ ಯೋಜನೆಯಡಿ ಒಂದು ಫೈಬರ್‌ಗ್ಲಾಸ್ ಹರಿಗೋಲು ಹಾಗೂ ಎರಡು ಹುಟ್ಟುಗಳನ್ನು ಖರೀದಿಸಲು ಅವಕಾಶ ಮಾಡಲಾಗಿದೆ. ಇದರ ಘಟಕ ವೆಚ್ಚ ರೂ.10,000/- ಗಳಾಗಿದ್ದು ಶೇ.100 ರಷ್ಟು ಸಹಾಯಧನ ನೀಡಲಾತ್ತಿದೆ.

d. ಮೀನುಗಾರರ ಹಾಗೂ ಮೀನುಗಾರರ ದೋಣಿಗಳ ಸುರಕ್ಷತೆಯ ನಿಟ್ಟಿನಲ್ಲಿ ಮೀನುಗಾರಿಕೆ ದೋಣಿಗಳಿಗೆ ಇಸ್ರೋ ಅಧಿಕೃತಗೊಳಿಸಿರುವ ಡಿ.ಎ.ಟಿ. ಉಪಕರಣವನ್ನು ಶೇ.50 ರಷ್ಟು ಸಹಾಯಧನ ನೀಡಿ ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡಲಾಗುವುದು.

12. ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ

ಈ ಯೋಜನೆಯಡಿ ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುತ್ ಮೇಲೆ ಪ್ರತಿ ಯೂನಿಟ್‌ಗೆ ರೂ.1.75 ರಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಘಟಕಕ್ಕೆ ವಾರ್ಷಿಕ ಗರಿಷ್ಠ ರೂ.3.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.

11. ಮೀನುಗಾರರ ಕಲ್ಯಾಣ ಯೋಜನೆಗಳು (ಕೇಂದ್ರ ಪುರಸ್ಕೃತ ಯೋಜನೆ)

ಅ) ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ ಉಳಿತಾಯ ಹಾಗೂ ಪರಿಹಾರ ಯೋಜನೆಯಡಿ ಕರಾವಳಿ ಮೀನುಗಾರರಿಂದ ರೂ.1500/- ಗಳನ್ನು ಮೀನುಗಾರಿಕೆ ಅವಧಿಯಲ್ಲಿ ವಸೂಲಿ ಮಾಡಿ ಈ ಮೊತ್ತಕ್ಕೆ ಕೇಂದ್ರ ಸರ್ಕಾರ ರೂ.1500/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿಸಿ ಹೀಗೆ ಒಟ್ಟು ರೂ.4500/- ಗಳನ್ನು ಮೀನುಗಾರಿಕೆ ಇಲ್ಲದ 3 ತಿಂಗಳುಗಳಲ್ಲಿ ಪ್ರತಿ ತಿಂಗಳಿಗೆ ರೂ.1500 ರಂತೆ ಪ್ರತಿ ಮೀನುಗಾರರಿಗೆ ನೀಡಲಾಗುವುದು.

ಆ) ಸಾಮೂಹಿಕ ವಿಮಾ ಯೋಜನೆ: ರಾಜ್ಯದ 2.04 ಲಕ್ಷ ಮೀನುಗಾರರಿಗೆ ಗುಂಪು ವಿಮಾ ಸೌಲಭ್ಯ ಒದಗಿಸಲು ರಾಜ್ಯದ ವಿಮಾ ಕಂತನ್ನು ಪಾವತಿಸಲು ಅನುದಾನ ಒದಗಿಸಲಾಗಿದೆ. ಈ ಯೋಜನೆಯಡಿ ವಿಮಾ ಸೌಲಭ್ಯವನ್ನು ಮೀನುಗಾರಿಕೆಯಲ್ಲಿ ತೊಡಗಿರುವಾಗ ನೈಸರ್ಗಿಕ ವಿಕೋಪಗಳಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.2,00,000/- ಗಳ ಪರಿಹಾರ ಮತ್ತು ಭಾಗಶಃ ಅಂಗವಿಕಲರಾದವರಿಗೆ ರೂ.1,00,000 ಗಳ ಪರಿಹಾರ ನೀಡಲಾಗುವುದು. ವಿಮಾ ಕಂತಿನ ಹಣ ಪ್ರತಿ ವರ್ಷ ದೆಹಲಿಯಲ್ಲಿರುವ ಮೀನುಗಾರರ ಸಹಕಾರ ಸಂಘಗಳ ರಾಷ್ಟ್ರೀಯ ಮಂಡಳಿಗೆ ಬಿಡುಗಡೆ ಮಾಡಲಾಗುವುದು.

12. ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000 ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ 50,000 ರೂ.ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತಿದೆ.

13. ಮೀನುಗಾರಿಕೆ ಕೂಡು ರಸ್ತೆಗಳ ನಿರ್ವಹಣೆ ರಾಜ್ಯದ ಕರಾವಳಿಯ ಮೂರು ಜಿಲ್ಲೆಗಳಲ್ಲಿ ಒಟ್ಟು 355.13 ಕಿಮೀ ಉದ್ದದ 218 ಮೀನುಗಾರಿಕೆ ಕೊಂಡಿ ರಸ್ತೆಗಳಿರುತ್ತವೆ. ಮಳೆ ಹಾಗೂ ಮೀನು ಸಾಗಾಣಿಕೆಯಿಂದ ಈ ಮೀನುಗಾರಿಕೆ ಕೊಂಡಿ ರಸ್ತೆಗಳು ಹಾಳಾಗುತ್ತದೆ. ಇವುಗಳ ದುರಸ್ತಿ ಹಾಗೂ ನಿರ್ವಹಣೆಯನ್ನು ಕೈಗೊಳ್ಳಲಾಗುತ್ತಿದೆ..

14. ಗಿರಿ ಜನ ಉಪ ಯೋಜನೆ ಈ ಯೋಜನೆಯಡಿ ಪರಿಶಿಷ್ಟ ಪಂಗಡದ ಮೀನುಗಾರರಿಗೆ ಅನುಕೂಲವಾಗುವಂತೆ ಸಂಚಾರಿ/ ರೀಟೇಲ್ ಮೀನು ಖಾದ್ಯಗಳ ಕ್ಯಾಂಟೀನ್/ ತಾಜಾ ಮೀನು ಮಾರಾಟ ಮಳಿಗೆ ಸ್ಥಾಪಿಸಲು ಸಹಾಯ

(ಘಟಕ ವೆಚ್ಚ ರೂ.10.00 ಲಕ್ಷ ; ಸಹಾಯಧನ : ಶೇ.70 ರಷ್ಟು ಗರಿಷ್ಠ ರೂ.7.00 ಲಕ್ಷ) ನೆರವು ನೀಡಲಾಗುವುದು.

ಕಾಮಗಾರಿಗಳು

15. **ಮೀನುಗಾರಿಕೆ ಬಂದರುಗಳ ಹೂಳೆತ್ತುವಿಕೆ(ಕೇಂದ್ರ ಪುರಸ್ಕೃತ ಯೋಜನೆ)** ಮೀನುಗಾರಿಕೆ ಬಂದರುಗಳು ಮತ್ತು ಇಳಿದಾಣಗಳಲ್ಲಿ ಮೀನುಗಾರಿಕೆ ದೋಣಿಗಳ ಸುಗಮ ಸಂಚಾರಕ್ಕೆ ಅನುಕೂಲವಾಗಲು ಹೂಳೆತ್ತಲು ಅವಕಾಶ ಕಲ್ಪಿಸಲಾಗಿದೆ. ಕೇಂದ್ರ ಸರ್ಕಾರವು ಪ್ರತಿಶತ 50 ರಷ್ಟನ್ನು ಯೋಜನಾ ವೆಚ್ಚವನ್ನು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50 ರಷ್ಟನ್ನು ಯೋಜನಾ ವೆಚ್ಚವನ್ನು ಭರಿಸುತ್ತದೆ. ಕೇಂದ್ರ ಸರ್ಕಾರದಿಂದ ಮಂಜೂರಾದ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗುವುದು.

16. **ಮೀನುಗಾರಿಕೆ ಬಂದರುಗಳ ನಿರ್ಮಾಣ (ಕೇಂದ್ರ ಪುರಸ್ಕೃತ ಯೋಜನೆ)** ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಕೇಂದ್ರ ಸರ್ಕಾರವು ಪ್ರತಿಶತ 50 ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 50 ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು 75:25 ಅನುಪಾತದಲ್ಲಿಯೇ ಮುಂದುವರೆಯುತ್ತಿದೆ.

17. **ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ** ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಲೆಕ್ಕ ಶೀರ್ಷಿಕೆಯಡಿ ಪ್ರಗತಿಯಲ್ಲಿರುವ ಕೊಡೇರಿ ಮೀನುಗಾರಿಕೆ ಬಂದರಿನ ಹಾಗೂ ತೆಂಗಿನಗುಂಡಿ ಅಳ್ವೆಕೋಡಿ ಮೀನುಗಾರಿಕೆ ತಂಗುದಾಣದ ಕಾಮಗಾರಿಗಳನ್ನು ಮುಂದುವರಿಸಲು ಹಾಗೂ ಮರವಂತೆ, ಶಿರೂರು–ಅಳ್ವೆಗದ್ದೆ ಮತ್ತು ಕುಂದಾಪುರ ಕೋಡಿಯಲ್ಲಿ ಬಂದರು ಮತ್ತು ತಡೆಗೋಡೆಗಳ ಕಾಮಗಾರಿಗಳನ್ನು ಪ್ರಾರಂಭಿಸಲು ಹಾಗೂ ಭಟ್ಕಳ ಮತ್ತು ಕಾರವಾರ ಮೀನುಗಾರಿಕೆ ಬಂದರುಗಳಲ್ಲಿಯ ಧಕ್ಕೆಗಳನ್ನು ವಿಸ್ತರಿಸಲು ಅನುದಾನ ನೀಡಲಾಗಿದೆ. ಆಮದಳ್ಳಿ ಮೀನುಗಾರಿಕೆ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ಶೇ.75 ರಷ್ಟು ನೆರವಿನೊಂದಿಗೆ ಕೈಗೊಳ್ಳಲಾಗುವುದು.

18. **ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ** ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನುಮಾರುಕಟ್ಟೆಗಳ ನಿರ್ಮಾಣ, ಮೀನು ಮರಿ ಉತ್ಪಾದನಾ ಕೇಂದ್ರಗಳ ಆಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸಲು/ ಮುಂದುವರಿಸಲು ಅನುದಾನ ಒದಗಿಸಲಾಗಿದೆ.

ಜಿಲ್ಲಾ ಪಂಚಾಯತ್ ಯೋಜನೆಗಳು

1. **ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ:** ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗುತ್ತಿದೆ.

2. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ: ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಹಾಗೂ ಮೊದಲ ವರ್ಷದ ಆವರ್ತಕ ವೆಚ್ಚದ ಶೇಕಡ 25 ರಷ್ಟು ಅಂದರೆ ಗರಿಷ್ಠ ರೂ.30,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ರೂ.10,000.00 ಗಳ ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.5000 ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 250 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು.

ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50ರ ನೆರವಿನೊಂದಿಗೆ ಗರಿಷ್ಠ ರೂ.2000 ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.10,000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ "ಮತ್ಸ್ಯವಾಹಿನಿ" ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.30,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.35,000 ಗಳ ಸಹಾಯಧನವನ್ನು ಮೂರು ಅಥವಾ ನಾಲ್ಕು ಫಲಾನುಭವಿಗಳ ಒಂದು ಗುಂಪಿಗೆ ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50 ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

4. ಪ್ರದರ್ಶನ ಮತ್ತು ತರಬೇತಿ ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.

ಈ ಯೋಜನೆಗಳಲ್ಲದೆ ಮೀನುಗಾರಿಕೆ ಇಲಾಖೆಯಿಂದ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:**

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಮೀನು ಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣ, ಮೀನುಗಾರಿಕೆ ಸಲಕರಣೆ ಕಿಟ್ ವಿತರಣೆ, ಫೈಬರ್ ಗ್ಲಾಸ್ ಹರಿಗೋಲು ವಿತರಣೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

- **ಕೆರೆಗಳ ಅಭಿವೃದ್ಧಿ:**

ರಾಜ್ಯದಲ್ಲಿರುವ ಒಳನಾಡು ಜಲಸಂಪನ್ಮೂಲಗಳನ್ನು ಅಭಿವೃದ್ಧಿ ಪಡಿಸಲು ಹೊಸ ಗುತ್ತಿಗೆ ನಿಯಮಾವಳಿಗಳನ್ನು ರೂಪಿಸಿದ್ದು, ಈ ನಿಯಮಾವಳಿ ಪ್ರಕಾರ ಈ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕಿನ ಗುತ್ತಿಗೆಯನ್ನು ಪಡೆಯಲು ನೋಂದಾಯಿಸಲ್ಪಟ್ಟ ಮೀನುಗಾರರ ಸಹಕಾರ ಸಂಘಗಳಿಗೆ ಅವಕಾಶ ಕಲ್ಪಿಸಲಾಗಿದೆ. ಗುತ್ತಿಗೆಗೆ ಕೋರದ ಕೆರೆಗಳನ್ನು ಸಾರ್ವಜನಿಕವಾಗಿ ಟೆಂಡರ್ ಕಂ ಹರಾಜು ಮೂಲಕ ವಿಲೇವಾರಿ ಮಾಡಿ ಅಭಿವೃದ್ಧಿಪಡಿಸಲಾಗುವುದು. ಕೆರಗಳ ಶೇ.50ರ ಜಲ ವಿಸ್ತೀರ್ಣವನ್ನು ಗಣನೆಗೆ ತೆಗೆದುಕೊಂಡು ಪ್ರತಿ ಹೆಕ್ಟೇರ್ ಜಲ ವಿಸ್ತೀರ್ಣಕ್ಕೆ ರೂ.300/– ರಂತೆ ಹಾಗೂ ಹಿಂದಿನ 3 ವರ್ಷಗಳ ಸರಾಸರಿ ಗುತ್ತಿಗೆ ಮೊತ್ತ, ಇವುಗಳಲ್ಲಿ ಯಾವುದು ಹೆಚ್ಚೋ ಆ ಮೊತ್ತವನ್ನು ಗುತ್ತಿಗೆ ಮೊತ್ತವಾಗಿ ನಿಗದಿಪಡಿಸಿ ಗರಿಷ್ಠ 5 ವರ್ಷಗಳ ಅವಧಿಗೆ ಮೀನುಕೃಷಿಗೆ ನೀಡಲಾಗುವುದು.

ಮೀನುಗಾರಿಕೆ ನಿರ್ದೇಶಕರು

ಅನುಬಂಧ- 2

ಮೀನುಗಾರಿಕೆ ಇಲಾಖೆಯ 2016-17 ನೇ ಸಾಲಿನ ಯೋಜನೆಗಳ ಪ್ರಗತಿ ವರದಿ

ರೂ.ಲಕ್ಷ

ಕ್ರ ಸಂ.	ಯೋಜನೆಯ ಹೆಸರು	ಭೌತಿಕ		ಆರ್ಥಿಕ	
		ಗುರಿ	ಸಾಧನೆ	ಅನುದಾನ	ಸಾಧನೆ
1	ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ	ಮೀನು ಮರಿ ಉತ್ಪಾದನೆ: 49.70 ಕೋಟಿ	ಮೀನು ಮರಿ ಉತ್ಪಾದನೆ: 42.00 ಕೋಟಿ	322.00	315.81
2	ಮೀನು ಮರಿ ಖರೀದಿಸಲು ನೆರವು	600 ಫಲಾನುಭವಿಗಳು	485 ಫಲಾನುಭವಿಗಳು	30.00	28.06
3	ಜಲಾಶಯಗಳಲ್ಲಿ ಮೀನುಮರಿ ಬಿತ್ತನೆ	102 ಲಕ್ಷ ಮರಿ ಬಿತ್ತನೆ	153 ಲಕ್ಷ ಮರಿ ಬಿತ್ತನೆ; 19 ಜಲಾಶಯ	102.00	98.36
4	ಒಳನಾಡು ಮೀನುಗಾರರಿಗೆ ಫೈಬರ್ ಗ್ಲಾಸ್ ಹರಿಗೋಲು ವಿತರಣೆ	500 ಮೀನುಗಾರರು	637 ಮೀನುಗಾರರು	50.00	46.60
5	ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ	ಮೀನು ಕೃಷಿ-50 ಹೆಕ್ಟೇರ್, ಹ್ಯಾಚರಿ-2 ಘಟಕ, ಮರಿ ಪಾಲನೆ-7.5 ಹೆಕ್ಟೇರ್ ಸ್ಪಾನ್ ಪಾಲನೆ-25 ಫಲಾನುಭವಿಗಳು, ಸಲಕರಣೆ ವಿತರಣೆ-455 ಫಲಾನುಭವಿಗಳು, 200 ಮೀನುಗಾರರಿಗೆ ತರಬೇತಿ	ಮೀನು ಕೃಷಿ-50 ಹೆಕ್ಟೇರ್. ಹ್ಯಾಚರಿ- 2 ಘಟಕ, ಸಲಕರಣೆ ವಿತರಣೆ-570 ಫಲಾನುಭವಿಗಳು, 200 ಮೀನುಗಾರರಿಗೆ ತರಬೇತಿ	459.00	454.21
6	ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ	ಉತ್ತರ ಕರ್ನಾಟಕ ಜಿಲ್ಲೆಗಳ ಅಭಿವೃದ್ಧಿ	ಸಂಸ್ಥೆಯ ಸ್ಥಾಪನೆ	200.00	200.00
7	ಕ್ಲಸ್ಟರ್ ಮಾದರಿ ಯಲ್ಲಿ ಮೀನುಗಾರಿಕೆ ಅಭಿವೃದ್ಧಿ	15 ಹೆಕ್ಟೇರ್ ಪ್ರದೇಶದಲ್ಲಿ ಮೀನು ಕೃಷಿ	19.02 ಹೆಕ್ಟೇರ್ ಪ್ರದೇಶದಲ್ಲಿ ಮೀನು ಕೃಷಿ	50.00	48.16
8	ಸಂಕಷ್ಟ ಪರಿಹಾರ ನಿಧಿ		92 ಪ್ರಕರಣಗಳಲ್ಲಿ ರೂ. 156.00 ಲಕ್ಷ ಪರಿಹಾರ ನೀಡಲಾಗಿದೆ.	25.00	25.00
9	ಮತ್ಸ್ಯಾಶ್ರಯ ಯೋಜನೆ	3000 ಮನೆಗಳ ಹಂಚಿಕೆ	4715 ಮನೆಗಳ ಹಂಚಿಕೆ	3225.00	2628.49
10	ಮೀನು ಮಾರುಕಟ್ಟೆ ನಿರ್ಮಾಣಕ್ಕೆ ಸಹಾಯ	ಮಾರುಕಟ್ಟೆ ನಿರ್ಮಾಣ: 7	ಮಾರುಕಟ್ಟೆ ನಿರ್ಮಾಣ: 8	30.00	59.49
11	ಸಂಶೋಧನೆ, ವಿಸ್ತರಣೆ ಪ್ರದರ್ಶನ ಮತ್ತು ತರಬೇತಿ	ಮೀನುಗಾರರ ತರಬೇತಿ: 3000 ಅಧಿಕಾರಿ/ಸಿಬ್ಬಂದಿ ತರಬೇತಿ: 150 ಮೀನು ಕೃಷಿಕರ ದಿನಾಚರಣೆ:60 2 ಮತ್ಸ್ಯಮೇಳ ಪಿಲಿಕುಳದಲ್ಲಿ ಒಷನೇರಿಯಂ ಸ್ಥಾಪನೆ	ಮೀನುಗಾರರ ತರಬೇತಿ: 1500 ಅಧಿಕಾರಿ/ಸಿಬ್ಬಂದಿ ತರಬೇತಿ: 60 ಮೀನು ಕೃಷಿಕರ ದಿನಾಚರಣೆ/ ಕ್ಷೇತ್ರೋತ್ಸವ: 50 1 ಮತ್ಸ್ಯಮೇಳ	662.50	90.39
12	ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ	ಸಲಕರಣೆ ಕಿಟ್ಟುಗಳು-1030 ಮಹಿಳಾ ಫಲಾನುಭವಿಗಳಿಗೆ ಮೀನುಮಾರಟ ಕಿಟ್ಟು-10000	ಸಲಕರಣೆ ಕಿಟ್ಟುಗಳು-1028 ಮಹಿಳಾ ಫಲಾನುಭವಿಗಳಿಗೆ ಮೀನುಮಾರಟ ಕಿಟ್ಟು-12400	103.00	202.87

ಕ್ರ. ಸಂ	ಯೋಜನೆಯ ಹೆಸರು	ಭೌತಿಕ		ಆರ್ಥಿಕ	
		ಗುರಿ	ಸಾಧನೆ	ಅನುದಾನ	ಸಾಧನೆ
13	ಮನೆಗಳ ನಿರ್ಮಾಣಕ್ಕಾಗಿ ಸಾಲ ಮರುಪಾವತಿ	ಮನೆಗಳ ನಿರ್ಮಾಣಕ್ಕಾಗಿ ಪಡೆದ ಹುಡ್ಕೋ ಸಾಲ ಮರುಪಾವತಿ, 535 ಮನೆಗಳ ನಿರ್ಮಾಣ	ಮನೆಗಳ ನಿರ್ಮಾಣಕ್ಕಾಗಿ ಪಡೆದ ಹುಡ್ಕೋ ಸಾಲ ಮರುಪಾವತಿ	300.00	100.76
14	ಸಾಮೂಹಿಕ ಅಪಘಾತ ವಿಮಾಯೋಜನೆ	2,04,869 ಮೀನುಗಾರರಿಗೆ ವಿಮಾ ಸೌಲಭ್ಯ	2,04,869 ಮೀನುಗಾರರಿಗೆ ವಿಮಾ ಸೌಲಭ್ಯ	22.00	20.82
15	ವಿಶೇಷ ಘಟಕ ಉಪ ಯೋಜನೆ	658 ಫಲಾನುಭವಿಗಳು	685 ಫಲಾನುಭವಿಗಳು	300.00	298.61
16	ಗಿರಿಜನ ಉಪಯೋಜನೆ	9 ಫಲಾನುಭವಿಗಳು	9 ಫಲಾನುಭವಿಗಳು	40.00	39.32
17	ಮೀನು ಮರಿ ಉತ್ಪಾದನಾ ಕೇಂದ್ರಗಳ ನಿರ್ಮಾಣ ಮತ್ತು ಅಭಿವೃದ್ಧಿ	2 ಕಾಮಗಾರಿ	1 ಕಾಮಗಾರಿ	100.00	65.90
18	ನೀಲಿ ಕ್ರಾಂತಿ – ಮೀನುಗಾರಿಕೆಯ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ	ಯೋಜನೆಗಳ ವಿವರ ಲಗತ್ತಿಸಿದೆ.			403.65
	ಜಿಲ್ಲಾ ಪಂಚಾಯತ್ ಯೋಜನೆಗಳು				
1	ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ	ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಸೇರಿದ ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ ಕೈಗೊಳ್ಳಲಾಗುತ್ತಿದೆ.		369.65	367.56
2.	ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ	ಒಳನಾಡು ಮೀನು ಮರಿ ಉತ್ಪಾದನಾ ಕೇಂದ್ರಗಳ ನಿರ್ವಹಣೆ, ಪಾಲನೆ ಮತ್ತು ಮೀನು ಮರಿ ವಿತರಣೆ		386.45	375.99
3.	ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ	2000 ಫಲಾನುಭವಿಗಳು	1643 ಫಲಾನುಭವಿಗಳು	123.80	122.88
4	ಪ್ರದರ್ಶನಗಳು ಮತ್ತು ತರಬೇತಿ	650 ಮೀನುಗಾರರಿಗೆ ತರಬೇತಿ	121 ಪ್ರದರ್ಶನ, 920 ಮೀನುಗಾರರಿಗೆ ತರಬೇತಿ	65.10	64.05

2016–17ನೇ ಸಾಲಿನ ನೀಲಿಕ್ರಾಂತಿ ಯೋಜನೆಯಡಿ ಬಿಡುಗಡೆಯಾದ ಮತ್ತು ವೆಚ್ಚವಾದ ಅನುದಾನದ ವಿವರ

ರೂ ಲಕ್ಷಗಳಲ್ಲಿ

ಕ್ರ. ಸಂ	ಯೋಜನೆಯ ಹೆಸರು	ಬಿಡುಗಡೆಯಾದ ಅನುದಾನ	ವೆಚ್ಚ	
			ಭೌತಿಕ	ಆರ್ಥಿಕ
1	ಮೀನುಕೃಷಿ ಕೊಳಗಳ ನಿರ್ಮಾಣ	195.00	58	194.94
2	ಮೀನುಕೃಷಿ ಕೊಳಗಳಿಗೆ ಹೂಡಿಕೆ ವೆಚ್ಚ	37.50	53	37.48
3	ಸಮಗ್ರ ಜಲಾಶಯ ಅಭಿವೃದ್ಧಿ	40.00	1	40.00
4	ಜಲಾಶಯಗಳಲ್ಲಿ ಪಂಜರ ಮೀನು ಕೃಷಿ	99.00	66	99.00
5	ನದಿ ಮೀನುಗಾರಿಕೆ ಸಂರಕ್ಷಣೆ ಮಾಹಿತಿ ಕಾರ್ಯಾಗಾರ	2.00	1	2.00
6	ಮೀನು ಕೃಷಿಕರಿಗೆ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮ	10.00	225	10.00
7	ಕಪ್ಪೆ ಚಿಪ್ಪು ಮೀನು ಕೃಷಿ	3.75	25	3.75
8	ಕಡಲ ಮೀನುಗಾರಿಕೆ ನಿರ್ವಹಣೆ	5.00	11	5.50

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	1950
ಸದಸ್ಯರ ಹೆಸರು	:	ಶ್ರೀ ಅಮೃತ್ ಅಯ್ಯಪ್ಪ ದೇಸಾಯಿ (ಧಾರವಾಡ)
ಉತ್ತರಿಸುವ ದಿನಾಂಕ	:	23.03.2020.
ಉತ್ತರಿಸುವ ಸಚಿವರು	:	ಉಪಮುಖ್ಯಮಂತ್ರಿ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ

ಕ್ರ.ಸಂ.	ಪ್ರಶ್ನೆಗಳು		ಉತ್ತರಗಳು
ಅ)	ಮಂಗಸೂಳಿ ಲಕ್ಷ್ಮೇಶ್ವರ ರಾಜ್ಯ ಹೆದ್ದಾರಿ ಕಾಮಗಾರಿಯನ್ನು ಧಾರವಾಡ ನಗರ ವ್ಯಾಪ್ತಿಯ ಜುಬ್ಲಿ ವೃತ್ತದಿಂದ ನರೇಂದ್ರ ವೃತ್ತದವರೆಗೂ ಸಿ.ಆರ್.ಎಫ್. ಅನುದಾನದಡಿ ರಾಷ್ಟ್ರೀಯ ಹೆದ್ದಾರಿ ಉಪವಿಭಾಗದಿಂದ ಕೈಗೊಳ್ಳುತ್ತಿದ್ದು ಸದರಿ ಕಾಮಗಾರಿ ಮಂದಗತಿಯಲ್ಲಿ ಸಾಗಲು ಕಾರಣವೇನು; (ವಿವರ ನೀಡುವುದು)	:	ಧಾರವಾಡ ನಗರ ವ್ಯಾಪ್ತಿಯ ಜುಬ್ಲಿ ವೃತ್ತ ದಿಂದ ನರೇಂದ್ರ ವೃತ್ತದ ಕಿಮೀ 427.680 ರಿಂದ 433.300 ರವರೆಗಿನ 5.62 ಕಿಮೀ ಉದ್ದದ ರಸ್ತೆ ಅಭಿವೃದ್ಧಿ: ಅಗಲೀಕರಣ (ಜಾಬ್ ಸಂ:NH-4-KNT-2016-17-831) ಕಾಮಗಾರಿಗೆ ದಿನಾಂಕಃ 27-12-2016 ರಲ್ಲಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದಿಂದ ಮೂಲ ಕಾಮಗಾರಿ ಲೆಕ್ಕಶೀರ್ಷಿಕೆಯಡಿ ರೂ.7109.48 ಲಕ್ಷಗಳಿಗೆ ಅನುಮೋದನೆ ನೀಡಲಾಗಿರುತ್ತದೆ. ಸದರಿ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಮೆ:ಪಿಬಿಬಿ ಕನ್‌ಸ್ಟ್ರಕ್ಷನ್ಸ್ ಕಂಪನಿ, ಭಟ್ಕಳರವರಿಗೆ ವಹಿಸಿಕೊಡಲಾಗಿದೆ. ಗುತ್ತಿಗೆದಾರರು ಕರಾರಿನಂತೆ ದಿನಾಂಕಃ03-06-2017 ರಲ್ಲಿ ಕಾಮಗಾರಿ ಪ್ರಾರಂಭಿಸಿದ್ದು, ದಿನಾಂಕಃ02-05-2018 ರಂದು ಕಾಮಗಾರಿಯನ್ನು ಪೂರ್ಣಗೊಳಿಸಬೇಕಾಗಿತ್ತು. ಈ ಕಾಮಗಾರಿಯನ್ನು ನಗರ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಿದ್ದು ಕುಡಿಯುವ ನೀರು ಸರಬರಾಜು ಪೈಪ್‌ಲೈನ್, ವಿದ್ಯುತ್ ಕಂಬಗಳು ಹಾಗೂ ಮರಗಳನ್ನು ತೆರವುಗೊಳಿಸಲು ಸಂಬಂಧಪಟ್ಟ ಇಲಾಖೆಗಳಿಂದ ಅನುಮತಿ ಕೋರಲಾಗಿತ್ತು. ಸ್ಥಳಾಂತರಗೊಳಿಸುವ ಸಂಬಂಧ ವಿಳಂಬವಾಗಿರುತ್ತದೆ. ಸದರಿ ಕಾಮಗಾರಿಯಲ್ಲಿ 412 ಮರಗಳನ್ನು ಕಟಾವು ಮಾಡಬೇಕಾಗಿರುವುದರಿಂದ, ಪ್ರಸ್ತಾವನೆಯನ್ನು ದಿನಾಂಕ: 17.05.2016 ರಂದು ಅರಣ್ಯ ಇಲಾಖೆಯ ಅನುಮತಿಗಾಗಿ ಹಾಗೂ ಕಟಾವಣೆ ಮಾಡಲು ಕೋರಲಾಗಿತ್ತು. ಆದರೆ ಸಾರ್ವಜನಿಕರಿಂದ ಹಾಗೂ ಎನ್.ಜಿ.ಓ.ಗಳಿಂದ ಸದರಿ ಮರಗಳನ್ನು ಕಟಾವಣೆ ಮಾಡದಂತೆ ತಕರಾರು ಮಾಡಿದ್ದರಿಂದ ಮರಗಳ ಕಟಾವಣೆ ಆದೇಶವನ್ನು ತಡವಾಗಿ ದಿನಾಂಕ: 20.02.2018 ರಂದು ನೀಡಿದ್ದರಿಂದ ಹಾಗೂ ನೀರು ಸರಬರಾಜು ಪೈಪ್‌ಲೈನ್, ವಿದ್ಯುತ್ ಕಂಬಗಳು ತೆರವುಗೊಳಿಸುವ ಕಾಮಗಾರಿಯ ಕಾರ್ಯಾದೇಶ ನೀಡುವ ಪ್ರಸ್ತಾವನೆಯನ್ನು ದಿನಾಂಕ:09.08.2018 ರಂದು ಸಲ್ಲಿಸಲಾಗಿದ್ದು, ಕಾರ್ಯಾದೇಶವನ್ನು ದಿನಾಂಕ:04.12.2019 ರಂದು ನೀಡಲಾಗಿರುತ್ತದೆ. ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಮರ ಕಟಾವಣೆ, ನೀರು ಸರಬರಾಜು ಪೈಪ್‌ಲೈನ್ ಮತ್ತು ವಿದ್ಯುತ್ ಕಂಬಗಳನ್ನು ತೆರವುಗೊಳಿಸುವಲ್ಲಿ ವಿಳಂಬವಾಗಿರುತ್ತದೆ. ರಸ್ತೆಯ ಕೆಲವೊಂದು ಭಾಗಗಳಲ್ಲಿ ರಸ್ತೆಯ ಎರಡು ಬದಿಯ ಸರ್ಕಾರಿ ಕಟ್ಟಡಗಳ ಕಾಂಪೌಂಡ್ ತೆರವುಗೊಳಿಸಿ, ಆ ಜಾಗದಲ್ಲಿ ತೆರೆದ ಚರಂಡಿ ನಿರ್ಮಿಸುವ ಹಾಗೂ ನೀರು ಸರಬರಾಜು ಕೊಳವೆ ಮಾರ್ಗ ಸ್ಥಳಾಂತರ

			ಮಾಡಬೇಕಾಗಿರುವುದರಿಂದ, ಚರಂಡಿಯನ್ನು ನಿರ್ಮಿಸುವುದು ಸಾಧ್ಯವಾಗಿರುವುದಿಲ್ಲ. ಅದಕ್ಕಾಗಿ ತೆರೆದ ಚರಂಡಿ ಕಾಮಗಾರಿ ಬಾಕಿ ಇದೆ, ಹಾಗೂ ಕಾಂಪೌಂಡ್ ಗೋಡೆಗಳನ್ನು ಪುನಃ ನಿರ್ಮಾಣ ಮಾಡಲು ಅಂದಾಜು ಪತ್ರಿಕೆ ಸಲ್ಲಿಸಿದ್ದು, ಕಾಮಗಾರಿ ನಿರ್ವಹಿಸುವುದು ಅವಶ್ಯಕವಿರುವುದರಿಂದ ಕಾಮಗಾರಿ ವಿಳಂಬವಾಗಿದೆ. 5.62 ಕಿಮೀ. ಕಾಂಕ್ರಿಟ್ ರಸ್ತೆ ನಿರ್ಮಿಸುವ ಕಾಮಗಾರಿಯಲ್ಲಿ 4.70 ಕಿ.ಮೀ. ಎಡಭಾಗದ 5.34 ಕಿ.ಮೀ ಬಲಭಾಗದಲ್ಲಿ ಪೂರ್ಣಗೊಂಡಿರುತ್ತದೆ. ಬಾಕಿ ಇರುವ ರಸ್ತೆ ಕಾಮಗಾರಿಯನ್ನು ಜುಲೈ 2020 ರಲ್ಲಿ ಪೂರ್ಣಗೊಳಿಸಲಾಗುವುದು.
ಆ)	ಸದರಿ ಕಾಮಗಾರಿಗೆ ನಿಗದಿ ಮಾಡಿದ್ದ ಕಾಲಮಿತಿ ಯಾವುದು ಹಾಗೂ ಯಾವಾಗ ಪೂರ್ಣಗೊಳಿಸಲಾಗುತ್ತದೆ? (ಮಾಹಿತಿ ನೀಡುವುದು)	:	ಕಾಮಗಾರಿ ಕಾಲಮಿತಿಯು 03.06.2017 ರಿಂದ 02.05.2018 ರವರೆಗೆ 11 ತಿಂಗಳುಗಳು. ಕಾಮಗಾರಿಯ ಕಾಲಾವಧಿಯನ್ನು ವಿಸ್ತರಿಸಲು ಕೇಂದ್ರ ಸರ್ಕಾರವನ್ನು ಕೋರಲಾಗಿದೆ. ಸದರಿ ಕಾಮಗಾರಿಯು ಪೂರ್ಣಗೊಳ್ಳುವ ಹಂತದಲ್ಲಿದ್ದು 90 ಪ್ರತಿಶತ ಭೌತಿಕ ಮತ್ತು 76 ಪ್ರತಿಶತ ಆರ್ಥಿಕ ಪ್ರಗತಿ ಸಾಧಿಸಲಾಗಿರುತ್ತದೆ, ಜುಲೈ 2020 ರಲ್ಲಿ ಕಾಮಗಾರಿ ಮುಕ್ತಾಯಗೊಳಿಸಲಾಗುವುದು.

ಕಡತ ಸಂಖ್ಯೆ: ಲೋಇ 23 ಸಿಆರ್ಎಫ್ 2020 (ಇ)

(ಗೋವಿಂದ.ಎಂ.ಕಾರಜೋಳ)
ಉಪ ಮುಖ್ಯಮಂತ್ರಿ
ಲೋಕೋಪಯೋಗಿ ಮತ್ತು
ಸಮಾಜ ಕಲ್ಯಾಣ ಇಲಾಖೆ.

Stand
23/3/2020

ಕರ್ನಾಟಕ ಸರ್ಕಾರ

ಸಂಖ್ಯೆ.ಲೋಇ E-64 ಇಎಪಿ 2020

(12)

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ, 3ನೇ ಮಹಡಿ
ಡಾ:ಅಂಬೇಡ್ಕರ್ ವೀಧಿ, ಬೆಂಗಳೂರು
ಫೋನ್ ನಂ. 2203 4862/5113/4857
ದಿನಾಂಕ : 21-03-2020

Tue ~~10-30~~
11 - Am

ಇಂದ,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಲೋಕೋಪಯೋಗಿ, ಬಂದರು ಹಾಗೂ
ಒಳನಾಡು ಜಲಸಾರಿಗೆ ಇಲಾಖೆ,
ಬೆಂಗಳೂರು.

ಇವರಿಗೆ,
ಸರ್ಕಾರದ ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ:-ವಿಧಾನ ಸಭೆಯ ಸದಸ್ಯರಾದ ಶ್ರೀ ನಿಂಬಣ್ಣನವರ್ ಸಿ.ಎಂ. (ಕಲಘಟಗಿ) ರವರು ಮಂಡಿಸಿರುವ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 2589 ಗೆ ಉತ್ತರ ಸಲ್ಲಿಸುವ ಕುರಿತು.

15ನೇ ವಿಧಾನಸಭೆ 6ನೇ ಅಧಿವೇಶನದಲ್ಲಿ ಸೂಚಿಸಿರುವ, ಚುಕ್ಕೆ ಗುರುತಿ~~ಲ್ಲದ~~ನ ಪ್ರಶ್ನೆ ಸಂಖ್ಯೆ. 2589 ಕ್ಕೆ ಉತ್ತರಗಳನ್ನು 350 ಪ್ರತಿಗಳಲ್ಲಿ ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

Bindu-S
21/03/2020
ವಿಶೇಷಾಧಿಕಾರಿ (ಇಎಪಿ) (ಪ್ರ),
ಬಾಹ್ಯ ಅನುದಾನಿತ ಯೋಜನೆಗಳು
ಲೋಕೋಪಯೋಗಿ, ಬಂ ಹಾಗೂ ಒಜಸಾಇ.

ಕರ್ನಾಟಕ ವಿಧಾನಸಭೆ
15ನೇ ವಿಧಾನಸಭೆ
6ನೇ ಅಧಿವೇಶನ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	2589
ಮಾನ್ಯ ಸದಸ್ಯರ ಹೆಸರು	:	ಶ್ರೀ ನಿಂಬಣ್ಣನವರ್ ಸಿ.ಎಂ. (ಕಲಘಟಗಿ)
ಉತ್ತರಿಸುವ ದಿನಾಂಕ	:	23-03-2020
ಉತ್ತರಿಸುವ ಸಚಿವರು	:	ಮಾನ್ಯ ಉಪ ಮುಖ್ಯಮಂತ್ರಿಗಳು, (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ)

ಕ್ರಸಂ	ಪ್ರಶ್ನೆ	ಉತ್ತರ
ಅ)	ಧಾರವಾಡ-ರಾಮನಗರ ರಸ್ತೆ ರಾಜ್ಯ ಹೆದ್ದಾರಿ-34 ರಲ್ಲಿ ಪಿ.ಪಿ.ಪಿ, ಬಿ.ಓ.ಟಿ, ವಿ.ಜಿ.ಎಫ್ ಯೋಜನೆಯಡಿ ಆರ್.ಓ.ಬಿ ಕೆಲಗೇರಿ, ಕುಂಬಾರಗೊಪ್ಪ ಮತ್ತು ತಾವರಗಟ್ಟಿವರೆಗೆ ನಿರ್ಮಿಸಲಾಗುತ್ತಿರುವ ಬ್ರಿಡ್ಜ್ ಪೂರ್ಣವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಧಾರವಾಡ-ಅಳ್ನಾವರ-ರಾಮನಗರ ರಸ್ತೆಯನ್ನು PPP-BOT-VGF (ಶುಲ್ಕ) ಆಧಾರದಲ್ಲಿ ಅಭಿವೃದ್ಧಿಪಡಿಸುವ ಯೋಜನೆಯಡಿಯಲ್ಲಿ 3 ROB ಗಳನ್ನು ನಿರ್ಮಿಸಲು ಯೋಜಿಸಲಾಗಿದ್ದು, ಅವುಗಳ ಪ್ರಸ್ತುತ ಹಂತ ಈ ಕೆಳಗಿನಂತಿದೆ. 1) <u>ROB No: 1. LC ನಂ. 305 – ಕೆಲಗೇರಿ ಗ್ರಾಮದ ಹತ್ತಿರ</u> • ಸಬ್ ಸ್ಟ್ರಕ್ಚರ್ ಕಾಮಗಾರಿ ಪೂರ್ಣಗೊಂಡಿದೆ. ಗರ್ಡರ್ ನಿರ್ಮಾಣ ಪೂರ್ಣಗೊಂಡಿದೆ. ಶೇ.75 Reinforced Earth (RE) ಪ್ಯಾನಲ್ ಹಾಗೂ ಕೂಡು ರಸ್ತೆ ಕಾಮಗಾರಿ ಪೂರ್ಣಗೊಂಡಿದೆ. ಗರ್ಡರ್ ಲಾಂಚಿಂಗ್ ಹಾಗೂ ಡೆಕ್‌ಸ್ಲ್ಯಾಬ್ ಕಾಮಗಾರಿ ಬಾಕಿ ಇದೆ. 2) <u>ROB No: 2. LC ನಂ. 316 – ಕುಂಬಾರಕೊಪ್ಪ ಗ್ರಾಮದ ಹತ್ತಿರ</u> • ಸಬ್ ಸ್ಟ್ರಕ್ಚರ್ ಕಾಮಗಾರಿ ಪೂರ್ಣಗೊಂಡಿದೆ. ಗರ್ಡರ್ ನಿರ್ಮಾಣ ಪೂರ್ಣಗೊಂಡಿದೆ. RE ಪ್ಯಾನಲ್ ನಿರ್ಮಾಣ ಪೂರ್ಣಗೊಂಡಿದೆ. RE ಪ್ಯಾನಲ್ ನೊಂದಿಗೆ ಕೂಡು ರಸ್ತೆ ನಿರ್ಮಾಣ ಹಾಗೂ ಡೆಕ್‌ಸ್ಲ್ಯಾಬ್ ಕಾಮಗಾರಿ ಬಾಕಿ ಇದೆ. 3) <u>ROB No: 3. LC ನಂ. 331 – ತಾವರಗಟ್ಟಿ ಗ್ರಾಮದ ಹತ್ತಿರ</u> • ಸದರಿ ಕಾಮಗಾರಿಯು ಕಾಯ್ದಿರಿಸಿದ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಬರುವುದು ಹಾಗೂ ಆರ್.ಓ.ಬಿ ಕಾಮಗಾರಿ ಪ್ರಾರಂಭಿಸಿರುವುದಿಲ್ಲ.
ಆ)	ಬಂದಿದ್ದಲ್ಲಿ, ಸದರಿ ಕಾಮಗಾರಿಗೆ ಭಾರಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಈ ಮೇಲಿನ ROB ಕಾಮಗಾರಿಗಳಲ್ಲಿನ ವಿಳಂಬವನ್ನು ಗಮನಿಸಿ, ಸದರಿ ಸೇತುವೆಗಳ ಬಾಕಿ ಕಾಮಗಾರಿಯನ್ನು 50:50 (Cost Sharing Basis) ಅನುದಾನ ಹಂಚಿಕೆಯಲ್ಲಿ ರೈಲ್ವೇ ಇಲಾಖೆಯ ಮುಖಾಂತರ ಕೈಗೊಳ್ಳಲು ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಇವರ ಅಧ್ಯಕ್ಷತೆಯಲ್ಲಿ ದಿನಾಂಕ:31.08.2018 ರಂದು ಜರುಗಿದ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಅದರಂತೆ, ಸದರಿ ಬಾಕಿ ಕಾಮಗಾರಿಗಳನ್ನು ಕೈಗೊಳ್ಳಲು ದಿನಾಂಕ:21.01.2019 ರಂದು ರೈಲ್ವೇ ಇಲಾಖೆಗೆ ಹಸ್ತಾಂತರಿಸಲಾಗಿರುತ್ತದೆ. ಅದರಂತೆ, LC ನಂ.305 ಹಾಗೂ LC ನಂ.316 ರಲ್ಲಿನ ಬಾಕಿ ಕಾಮಗಾರಿಗೆ ರೈಲ್ವೇ ಇಲಾಖೆಯಿಂದ ಟೆಂಡರ್ ಆಹ್ವಾನಿಸಲಾಗಿದ್ದು, ಆಡಳಿತಾತ್ಮಕ ಅನುಮೋದನೆ ಕೋರಿ ಮೂಲ ಸೌಲಭ್ಯ ಅಭಿವೃದ್ಧಿ ಇಲಾಖೆ (IDD) ಗೆ ರೈಲ್ವೇ ಇಲಾಖೆಯಿಂದ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. LC ನಂ.331 ರಲ್ಲಿನ ಆರ್.ಓ.ಬಿ ಕಾಮಗಾರಿಯನ್ನು 2020-21 ರ ಸಾಲಿನಲ್ಲಿ ಕೈಗೊಳ್ಳಲು ರೈಲ್ವೇ ಇಲಾಖೆಯಿಂದ ನಿರ್ಧರಿಸಲಾಗಿರುತ್ತದೆ.

ಇ)	ಬಂದಿದ್ದಲ್ಲಿ ರಾಜ್ಯ ಸರ್ಕಾರವು ತಮ್ಮ ಪಾಲಿನ ಒಟ್ಟು 36 ಕೋಟಿ ರೂ.ಗಳ ವಿ.ಜಿ.ಎಫ್ ಅನುದಾನನ್ನು ನೀಡಿದ್ದರೂ ಕಾಮಗಾರಿ ಪೂರ್ಣಗೊಳಿಸದಿರಲು ಕಾರಣಗಳೇನು (ವಿವರ ನೀಡುವುದು)?	ಸದರಿ ಯೋಜನೆ ಸಂಬಂಧ ರಾಜ್ಯ ಸರ್ಕಾರವು ಇಲ್ಲಿಯವರೆಗೆ ತನ್ನ ಪಾಲಿನ Viability Gap Funding (VGF) ಮೊತ್ತದ ರೂ.36.87 ಕೋಟಿಗಳಲ್ಲಿ, ಈವರೆಗೆ ರೂ.11.288 ಕೋಟಿ ಗಳನ್ನು ಮಾತ್ರ ಬಿಡುಗಡೆಗೊಳಿಸಲಾಗಿರುತ್ತದೆ. ಸದರಿ ಯೋಜನೆಯಲ್ಲಿ ROB ಕಾಮಗಾರಿಯ ಮೂಲ ವಿನ್ಯಾಸದಲ್ಲಿ 30 ಮೀ ಉದ್ದದ ಒಂದು ಅಂಕಣದ ಸೇತುವೆಯನ್ನು ನಿರ್ಮಿಸಲು ಯೋಜಿಸಲಾಗಿತ್ತು, ಆದರೆ, ಸದರಿ ಕಾಮಗಾರಿಯ ವಿನ್ಯಾಸಗಳ ಅನುಮೋದನೆಯ ಸಮಯದಲ್ಲಿ ರೈಲ್ವೇ ಇಲಾಖೆಯಿಂದ ಸಾಕಷ್ಟು ಮಾರ್ಪಾಡುಗಳನ್ನು ಮಾಡಿರುವ ಕಾರಣ, ಕಾಮಗಾರಿಯ ಪರಿಮಾಣ ಹಾಗೂ ವಿಶಿಷ್ಠತೆಯಲ್ಲಿ ಭಾರಿ ವ್ಯತ್ಯಾಸವಾಗಿ ಕಾಮಗಾರಿಯ ಅಂದಾಜು ಮೊತ್ತದಲ್ಲಿ ಭಾರಿ ಹೆಚ್ಚಳವಾಗಿರುತ್ತದೆ. ಅಲ್ಲದೇ, ರಿಯಾಯಿತಿದಾರರ ಮುಖ್ಯ ಪಾಲುದಾರ ಕಂಪನಿಯ ಆರ್ಥಿಕ ಮುಗ್ಗಟ್ಟಿನಿಂದ 2013 ರಿಂದ ಸ್ಥಗಿತಗೊಂಡಿರುವ ಕಾರಣ ಹಾಗೂ ರಿಯಾಯಿತಿದಾರರಿಗೆ ನಿರೀಕ್ಷಿತ ಟೋಲ್ ಸಂಗ್ರಹದ ಮೊತ್ತದಲ್ಲಿ ಗಣನೀಯ ಕುಸಿತವಾಗಿರುತ್ತದೆ. ಅಲ್ಲದೇ, ಗುತ್ತಿಗೆದಾರರಿಂದ ಹಿಂಪಡೆದ ಕಾಮಗಾರಿ ಮೊತ್ತದ ಮೌಲ್ಯಕ್ಕೆ ಅನುಗುಣವಾಗಿ, ಟೋಲ್ ದರಗಳನ್ನು ಪರಿಷ್ಕರಿಸಲು ಈ ಸಂಬಂಧ ಇಲಾಖೆಯಡಿ ರಚನೆಯಾಗಿರುವ ಸಮಿತಿ ಮುಂದೆ ಮಂಡಿಸಿ ಕ್ರಮವಹಿಸಲಾಗುವುದು. ಈ ಎಲ್ಲಾ ವಿಷಯಗಳನ್ನು ಮನಗಂಡು ಬಾಕಿ ಕಾಮಗಾರಿಗಳನ್ನು ರೈಲ್ವೇ ಇಲಾಖೆಯ ವತಿಯಿಂದ 50:50 (Cost Sharing Basis) ಅಡಿಯಲ್ಲಿ ಕೈಗೊಂಡು ಪೂರ್ಣಗೊಳಿಸಲು ಸೂಕ್ತ ಕ್ರಮಕೈಗೊಳ್ಳಲಾಗಿದೆ.

ಸಂಖ್ಯೆ. ಲೋಇ E- 64 ಇಎಪಿ 2020

(ಗೋವಿಂದ ಎಂ. ಕಾರಜೋಳ)
ಮಾನ್ಯ ಉಪ ಮುಖ್ಯಮಂತ್ರಿಗಳು,
(ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಇಲಾಖೆ)

ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 11 ವಿಕೋವಿ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:21.03.2020

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು-560001.

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ,
ವಿಧಾನಸೌಧ.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಕುಮಾರಸ್ವಾಮಿ ಎಂ.ಪಿ (ಮೂಡಿಗೆರೆ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 2595ಕ್ಕೆ ಉತ್ತರ ನೀಡುವ ಕುರಿತು.

******

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಕುಮಾರಸ್ವಾಮಿ ಎಂ.ಪಿ (ಮೂಡಿಗೆರೆ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:2595ಕ್ಕೆ ಸಂಬಂಧಿಸಿದಂತೆ ಉತ್ತರದ 350 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ, ಅಗತ್ಯ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ

21/03/20

(ಕೆ. ಆರ್. ರವಿಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ವಿಶೇಷ ಕೋಶ)
ದೂರವಾಣಿ: 080-22032691
ಇ-ಮೇಲ್: usspIcell-rev@karnataka.gov.in

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	2595
ಸದಸ್ಯರ ಹೆಸರು	ಶ್ರೀ ಕುಮಾರಸ್ವಾಮಿ.ಎಂ.ಪಿ (ಮೂಡಿಗೆರೆ)
ಉತ್ತರಿಸುವ ಸಚಿವರು	ಕಂದಾಯ ಸಚಿವರು
ಉತ್ತರಿಸುವ ದಿನಾಂಕ	23.03.2020

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಉಪ ವಿಭಾಗಾಧಿಕಾರಿಗಳ ತಾಲ್ಲೂಕು ಹಾಗೂ ಉಪ ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ದಲ್ಲಾಳಿಗಳ (ಏಜೆಂಟ್) ಹಾವಳಿ ಹೆಚ್ಚಾಗಿರುವುಲ್ಲದೆ ಸದರಿ ಕಛೇರಿಗಳ ಅಧಿಕಾರಿ/ನೌಕರರು ದಲ್ಲಾಳಿಗಳ ಮುಖಾಂತರ ಕಾರ್ಯನಿರ್ವಹಿಸುತ್ತಿರುವುದು ಹಾಗೂ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಉಪ ನೋಂದಣಾಧಿಕಾರಿಗಳ ಕಛೇರಿಯನ್ನು ಹೊರತುಪಡಿಸಿ ರಾಜ್ಯದ ಕಂದಾಯ ಇಲಾಖೆಯ ವ್ಯಾಪ್ತಿಗೆ ಒಳಪಡುವ ಜಿಲ್ಲಾಧಿಕಾರಿಗಳ ಉಪವಿಭಾಗಾಧಿಕಾರಿಗಳ ಹಾಗೂ ತಾಲ್ಲೂಕು ಕಛೇರಿಗಳಲ್ಲಿ ಯಾವುದೇ ದಲ್ಲಾಳಿಗಳ (ಏಜೆಂಟ್) ಹಾವಳಿ ಇರುವುದಿಲ್ಲ ಮತ್ತು ಅಧಿಕಾರಿ/ನೌಕರರು ದಲ್ಲಾಳಿಗಳ ಮುಖಾಂತರ ಕಾರ್ಯನಿರ್ವಹಿಸುವುದಾಗಲಿ ಮತ್ತು ಹಣ ವಸೂಲಿ ಮಾಡುವ ಯಾವುದೇ ಪ್ರಕರಣಗಳು ಇರುವುದಿಲ್ಲ.
ಆ)	ಬಂದಿದ್ದಲ್ಲಿ, ದಲ್ಲಾಳಿಗಳ ಹಾವಳಿಯಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು; (ವಿವರ ನೀಡುವುದು)	ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಕಾವೇರಿ ಆನ್‌ಲೈನ್ ಸೇವೆಗಳನ್ನು ಜಾರಿಗೊಳಿಸಿದ್ದು, ಅವುಗಳು ಈ ಕೆಳಕಂಡಂತಿವೆ:- 1. ಸ್ಥಿರಾಸ್ತಿಗಳ ಋಣಭಾರ ಪ್ರಮಾಣ ಪತ್ರ/ ನೋಂದಾಯಿತ ದಸ್ತಾವೇಜುಗಳ ದೃಢೀಕೃತ ನಕಲು ಪ್ರತಿ ಪೂರೈಸಿವಿಕೆ 2. ಸ್ಥಿರಾಸ್ತಿಗಳ ಮೌಲ್ಯ ಮತ್ತು ಮುದ್ರಾಂಕ ಶುಲ್ಕಗಳ ಲೆಕ್ಕ ಹಾಕುವಿಕೆ 3. ಸಾರ್ವಜನಿಕರಿಂದ ನೋಂದಣಿ ಪೂರ್ವ ಡೇಟಾ ಎಂಟ್ರಿ 4. ದಸ್ತಾವೇಜಿನ ನೋಂದಣಿಗೆ ಮುಂಗಡ ಸಮಯ ನಿಗದಿಪಡಿಸುವಿಕೆ (Appointment Booking) 5. ಉಪನೋಂದಣಿ ಕಛೇರಿಯ ಗುರುತಿಸುವಿಕೆ 6. ವಿವಾಹ ನೋಂದಣಿ ಕಛೇರಿಯ ಗುರುತಿಸುವಿಕೆ.

		7. ಮೌಲ್ಯ ಮೊಬೈಲ್ ಆಪ್ ಅಭಿವೃದ್ಧಿಪಡಿಸಿದ್ದು, ಇದರಿಂದ ಸಾರ್ವಜನಿಕರು ಸ್ಥಿರಾಸ್ತಿಗಳ ಮಾರ್ಗಸೂಚಿ ಮೌಲ್ಯಗಳನ್ನು ತಿಳಿಯಬಹುದಾಗಿದೆ. 8. ಕೆಪಿಸಿಒಎಂಪಿ ಕಾಯ್ದೆ ಅಡಿಯಲ್ಲಿ ಕೃಷಿ ಸಾಲಗಳಿಗೆ ಸಂಬಂದಿಸಿದ ಡಿಕ್ಲರೇಷನ್ ಮತ್ತು ಸಾಲ ತೀರುವಳಿ ಪತ್ರಗಳ ಫೈಲಿಂಗ್ ಮಾಡುವಿಕೆ. ಸಾರ್ವಜನಿಕರು ಸದರಿ ಸೇವೆಗಳನ್ನು ಆನ್‌ಲೈನ್ ಮೂಲಕ ಪಡೆಯಬಹುದಾಗಿದೆ.
ಇ)	ರೈತರು ಹಾಗೂ ಸಾರ್ವಜನಿಕರು ದಲ್ಲಾಳಿಗಳ ಮುಖಾಂತರ ಅರ್ಜಿ ಸಲ್ಲಿಸದಿದ್ದರೆ ಕಛೇರಿಗಳ ಅಧಿಕಾರಿ/ನೌಕರರು ಅರ್ಜಿ ಸ್ವೀಕರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕಂದಾಯ ಇಲಾಖೆಗೆ ಒಳಪಡುವ ವಿವಿಧ ಯೋಜನೆಗಳನ್ನು ರೈತರಿಗೆ ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸಕಾಲ ಯೋಜನೆ ಮತ್ತು ಆನ್‌ಲೈನ್ ಮೂಲಕ ವಿವಿಧ ಸೇವೆಗಳನ್ನು ಪಡೆಯಲು ಅವಕಾಶ ಕಲ್ಪಿಸಿ ಕೊಟ್ಟಿರುವುದರಿಂದ ನಿಗಧಿತ ಕಾಲಾವಧಿಯೊಳಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಕಛೇರಿಗಳಲ್ಲಿ ರೈತರು ಹಾಗೂ ಸಾರ್ವಜನಿಕರಿಂದ ನೇರವಾಗಿ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ.
ಈ)	ಹಾಗಿದ್ದಲ್ಲಿ, ರಾಜ್ಯದಲ್ಲಿ ಸಾರ್ವಜನಿಕ ಸಂಪರ್ಕವಿರುವ ಪ್ರತಿ ಕಛೇರಿಗಳಲ್ಲಿ ಸಾರ್ವಜನಿಕ ಸಂಪರ್ಕಾಧಿಕಾರಿರವರನ್ನು ನೇಮಿಸಿ ರೈತರಿಗೆ ಹಾಗೂ ಸಾರ್ವಜನಿಕರಿಗೆ ದಲ್ಲಾಳಿಗಳ ಹಾವಳಿಯನ್ನು ತಪ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;	ಅನ್ವಯಿಸುವುದಿಲ್ಲ.
ಉ)	ಹಾಗಿದ್ದಲ್ಲಿ, ಯಾವಾಗ ಸಂಪರ್ಕಾಧಿಕಾರಿಯವರನ್ನು ನೇಮಿಸಲಾಗುವುದು; (ವಿವರ ನೀಡುವುದು)	ಅನ್ವಯಿಸುವುದಿಲ್ಲ.

ಊ)	ದಲ್ಲಾಳಿಗಳ ಹಾವಳಿಯನ್ನು ತಡೆಗಟ್ಟಲು ಹಾಗೂ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)	ಹೌದು ಸರ್ಕಾರದ ಗಮನಕ್ಕೆ ಬಂದಲ್ಲಿ ಪರಿಶೀಲಿಸಿ ನಿಯಮಾನುಸಾರ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು.

ಸಂಖ್ಯೆ: ಕಂಇ 11 ವಿಕೋವಿ 2020

(ಆರ್. ಅಶೋಕ)
ಕಂದಾಯ ಸಚಿವರು.

File No.RD/33/LGM/2020-DO-REVENUE DEPATMENT SEC

Stand 23/3/2020

ಸಂಖ್ಯೆ:ಕಂಇ 33 ಎಲ್‌ಜಿಎಂ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:21.03.2020.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಮಹೇಶ್ ಸಾ.ರಾ. (ಕೃಷ್ಣರಾಜನಗರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:2459ಕ್ಕೆ ಉತ್ತರ ಒದಗಿಸುವ ಬಗ್ಗೆ.

* * *

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಮಹೇಶ್ ಸಾ.ರಾ. (ಕೃಷ್ಣರಾಜನಗರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:2459ರ ಉತ್ತರದ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ವಿಶ್ವಾಸಿ,
Vimalamma C 21/3/2020
(ವಿಮಲಮ್ಮ ಸಿ.)
ಪೀಠಾಧಿಕಾರಿ
ಕಂದಾಯ ಇಲಾಖೆ (ಭೂ ಮಂಜೂರಾತಿ-2).

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2459

ಸದಸ್ಯರ ಹೆಸರು : ಶ್ರೀ ಮಹೇಶ್ ಸಾ.ರಾ.

(ಕೃಷ್ಣರಾಜಸಾಗರ)

ಉತ್ತರಿಸುವ ದಿನಾಂಕ : 23-03-2020

ಉತ್ತರಿಸುವ ಸಚಿವರು : ಕಂದಾಯ ಸಚಿವರು

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಕೆ.ಆರ್.ನಗರ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ 3 ವರ್ಷಗಳಿಂದ ನಮೂನೆ 94ಸಿ ಮತ್ತು 94ಸಿಸಿ ಅಡಿಯಲ್ಲಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಇತ್ಯರ್ಥವಾದ ಹಾಗೂ ಇತ್ಯರ್ಥವಾಗದಿರುವ ಪ್ರಕರಣಗಳ ಸಂಖ್ಯೆ ಎಷ್ಟು;</td><td>ಕೆ.ಆರ್.ನಗರ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ 3 ವರ್ಷಗಳಿಂದ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 94ಸಿ ಮತ್ತು 94ಸಿಸಿ ಅಡಿಯಲ್ಲಿ ಸ್ವೀಕೃತವಾದ, ಇತ್ಯರ್ಥವಾದ ಹಾಗೂ ಇತ್ಯರ್ಥವಾಗದಿರುವ ಪ್ರಕರಣಗಳ ವಿವರ ಈ ಕೆಳಗಿನಂತಿದೆ:-
<table>
<tr><th rowspan="2">ವರ್ಷ</th><th colspan="2">ಸ್ವೀಕೃತ ಅರ್ಜಿಗಳ ಸಂಖ್ಯೆ</th><th colspan="2">ಇತ್ಯರ್ಥವಾದ ಅರ್ಜಿಗಳ ಸಂಖ್ಯೆ</th><th colspan="2">ಇತ್ಯರ್ಥವಾಗದ ಅರ್ಜಿಗಳ ಸಂಖ್ಯೆ</th></tr>
<tr><th>94ಸಿ</th><th>94ಸಿಸಿ</th><th>94ಸಿ</th><th>94ಸಿಸಿ</th><th>94ಸಿ</th><th>94ಸಿಸಿ</th></tr>
<tr><td>2017-18</td><td>225</td><td>16</td><td>-</td><td>-</td><td>225</td><td>16</td></tr>
<tr><td>2018-19</td><td>93</td><td>-</td><td>-</td><td>-</td><td>93</td><td>-</td></tr>
<tr><td>2019-20</td><td>3</td><td>-</td><td>-</td><td>-</td><td>3</td><td>-</td></tr>
<tr><td>ಒಟ್ಟು</td><td>321</td><td>16</td><td>-</td><td>-</td><td>321</td><td>16</td></tr>
</table></td></tr>
<tr><td>(ಆ)</td><td>ಸದರಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?</td><td>ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.</td></tr>
</table>

(ಕಂಇ 33 ಎಲ್‌ಜಿಎಂ 2020)

(ಆರ್.ಅಶೋಕ)

ಕಂದಾಯ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 137 ಟಿಎನ್ಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 23/03/2020

16
Stand
23/03/2020

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)

ಇವರಿಗೆ:

ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭೆ
ವಿಧಾನ ಸೌಧ,
ಬೆಂಗಳೂರು

ಮಾನ್ಯರೇ;

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ/~~ಶ್ರೀಮತಿ~~ ಬಸನಗೌಡ ದದ್ದಲ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 998 ಕ್ಕೆ ಉತ್ತರಿಸುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ/~~ಶ್ರೀಮತಿ~~ ಬಸನಗೌಡ ದದ್ದಲ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 998 ಕ್ಕೆ ಉತ್ತರದ 102 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ

(ಅರುಣ್.ಎಸ್)
ಶಾಖಾಧಿಕಾರಿ
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : **998**
ಸದಸ್ಯರ ಹೆಸರು : ಶ್ರೀ ಬಸವನಗೌಡ ದದ್ದಲ (ರಾಯಚೂರು ಗ್ರಾಮಾಂತರ)
ಉತ್ತರಿಸಬೇಕಾದ ದಿನಾಂಕ : 16.03.2020
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

	ಪ್ರಶ್ನೆ	ಉತ್ತರ
(ಅ)	ರಾಯಚೂರು ಜಿಲ್ಲೆಯಲ್ಲಿ 2009-10ನೇ ಸಾಲಿನಲ್ಲಿ ಪ್ರವಾಹದಿಂದ ಸಂತ್ರಸ್ತರಾದವರಿಗೆ ಮನೆಗಳನ್ನು ನಿರ್ಮಾಣ ಮಾಡಲಾಗಿದ್ದು, ಮೂಲಭೂತ ಸೌಕರ್ಯಗಳಿಲ್ಲದಿರುವುದರಿಂದ ಸಂತ್ರಸ್ತರು ಸದರಿ ಮನೆಗಳಲ್ಲಿ ವಾಸ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಯಚೂರು ಜಿಲ್ಲೆಯಲ್ಲಿ 2009-10ನೇ ಸಾಲಿನ ಪ್ರವಾಹದಿಂದ 52 ಗ್ರಾಮಗಳನ್ನು ಸ್ಥಳಾಂತರಿಸಲು ನಿರ್ಧರಿಸಲಾಗಿತ್ತು. ಅದರಂತೆ, ಅರ್ಹ ಸಂತ್ರಸ್ಥರಿಗೆ ಒಟ್ಟು 12711 ಮನೆಗಳನ್ನು ನಿರ್ಮಿಸಬೇಕಿದ್ದು, ಒಟ್ಟು 11417 ಮನೆಗಳನ್ನು ನಿರ್ಮಿಸಿದ್ದು, 7565 ಮನೆಗಳನ್ನು ಅರ್ಹ ಫಲಾನುಭವಿಗಳಿಗೆ ಹಸ್ತಾಂತರಿಸಿ, ಹಕ್ಕುಪತ್ರಗಳನ್ನು ನೀಡಲಾಗಿದೆ.
(ಆ)	ಬಂದಿದ್ದಲ್ಲಿ, ಸಂತ್ರಸ್ತರಿಗೆ ಯಾವಾಗ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಫಲಾನುಭವಿಗಳಿಗೆ ಹಕ್ಕು ಪತ್ರಗಳನ್ನು ನೀಡಿ ವಾಸಿಸಲು ಅನುಕೂಲ ಮಾಡಿಕೊಡಲಾಗುವುದು. (ವಿವರ ನೀಡುವುದು)	ಹಸ್ತಾಂತರಗೊಂಡಿರುವ ಮನೆಗಳ ಪೈಕಿ 6090 ಮನೆಗಳಲ್ಲಿ ಫಲಾನುಭವಿಗಳು ವಾಸವಿರುತ್ತಾರೆ. ಮೂಲಭೂತ ಸೌಕರ್ಯದ ಕೊರತೆ ಮತ್ತು ಹಳೆ ಮನೆಗಳಲ್ಲಿ ವಾಸಿಸುತ್ತಿರುವ ಜನರು ಸ್ಥಳಾಂತರಗೊಂಡಿರುವ ಹೊಸ ಗ್ರಾಮಗಳಿಗೆ ಹೋಗಲು ಆಸಕ್ತಿ ತೋರದೆ ಸ್ಥಳಾಂತರಗೊಂಡಿರುವುದಿಲ್ಲ. ಆಸರೆ ಗ್ರಾಮಗಳ ವಿವರ ಹಾಗೂ ಮೂಲಭೂತ ಸೌಕರ್ಯ ಕಲ್ಪಿಸಿರುವ ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ.

ಕಂಇ 137 ಟಿಎನ್‌ಆರ್ 2020

(ಆರ್. ಅಶೋಕ)
ಕಂದಾಯ ಸಚಿವರು

7

2009ನೇ ಸಾಲಿನ ಆಸರೆಯೋಜನೆಯಡಿ ನಿರ್ಮಿಸಿರುವ ಮನೆಗಳ ವಿವರ

[illegible]	[illegible]	[illegible]	[illegible]	[illegible]	[illegible]	[illegible]	[illegible]			
							[illegible]	[illegible]	[illegible]	[illegible]
1	2	3	4	5	6	7	8	9	10	11
1	[illegible]	[illegible]	350	350	323	323	ಇದೆ	ಇದೆ	ಇದೆ	ಇದೆ
		[illegible]	325	325	319	48	ಇಲ್ಲ	ಇದೆ	ಇದೆ	ಇದೆ
		[illegible]	132	132	137	131	ಇದೆ	ಇದೆ	ಇಲ್ಲ	ಇದೆ
		[illegible]	883	908	706	130	ಇದೆ	ಇದೆ	ಇದೆ	ಇದೆ
		[illegible]	325	325	317	310	ಇದೆ	ಇದೆ	ಇದೆ	ಇದೆ
		[illegible]	1425	1250	1280	30	ಇಲ್ಲ	ಇದೆ	ಇದೆ	ಇದೆ
		[illegible]	150	150	150	150	ಇದೆ	ಇದೆ	ಇದೆ	ಇದೆ
		[illegible]	201	242	243	242	ಇದೆ	ಇದೆ	ಇದೆ	ಇದೆ
		[illegible]	171	160	160	160	ಇದೆ	ಇದೆ	ಇದೆ	ಇದೆ
		[illegible]	229	232	223	225	ಇದೆ	ಇದೆ	ಇಲ್ಲ	[illegible]
		[illegible]	365	355	365	365	ಇದೆ	ಇದೆ	ಇದೆ	
		[illegible]	303	203	203	203	ಇದೆ	ಇದೆ	ಇದೆ	ಇದೆ
		[illegible]	348	318	273	160	ಇದೆ	ಇದೆ	ಇದೆ	ಇಲ್ಲ
		[illegible]	170	142	142	142	ಇಲ್ಲ	ಇಲ್ಲ	ಇಲ್ಲ	ಇಲ್ಲ
		[illegible]	330	98	0	0	ಇಲ್ಲ	ಇಲ್ಲ	ಇಲ್ಲ	[illegible]
		[illegible]	250	234	234	250	ಇದೆ	ಇಲ್ಲ	ಇಲ್ಲ	[illegible]
		[illegible]	200	179	152	100	ಇಲ್ಲ	ಇಲ್ಲ	ಇದೆ	ಇದೆ
		[illegible]	371	150	150	150	ಇದೆ	ಇಲ್ಲ	ಇಲ್ಲ	ಇದೆ
		[illegible]	475	475	475	100	ಇದೆ	ಇದೆ	ಇದೆ	ಇದೆ
		[illegible]	333	350	250	250	ಇದೆ	ಇದೆ	ಇದೆ	ಇದೆ
		[illegible]	451	80	0	0	ಇಲ್ಲ	ಇಲ್ಲ	ಇಲ್ಲ	
			7619	6627	6100	5695				
2	[illegible]	[illegible]	554	554	0	0	[illegible]	ಇದೆ	ಇದೆ	ಇದೆ
		[illegible]	204	204	0	0	[illegible]	ಇದೆ	ಇದೆ	ಇದೆ
		[illegible]	250	250	0	0	[illegible]	ಇದೆ	ಇದೆ	ಇದೆ
		[illegible]	195	195	199	195	ಇದೆ	ಇದೆ	ಇದೆ	ಇದೆ
		[illegible]	215	215	215	114	ಇದೆ	ಇದೆ	ಇದೆ	ಇದೆ
		[illegible]	177	177	0	177	ಇದೆ	ಇದೆ	ಇದೆ	ಇದೆ
		[illegible]	355	355	0	0	ಇಲ್ಲ	ಇಲ್ಲ	ಇಲ್ಲ	ಇದೆ
		[illegible]	243	243	243	70	243	ಇದೆ	ಇದೆ	ಇದೆ
		[illegible]	136	138	136	0	[illegible]	ಇದೆ	ಇದೆ	[illegible]
		[illegible]	373	180	323	0	0	ಇಲ್ಲ	ಇಲ್ಲ	ಇಲ್ಲ
			2638	2515	123	972				
3	[illegible]	[illegible]	103	103	85	85	ಇದೆ	ಇದೆ	ಇದೆ	ಇದೆ
		[illegible] ([illegible])	69	59	26	56	ಇದೆ	ಇದೆ	ಇದೆ	ಇದೆ
		[illegible]	110	60	0	0	ಇದೆ	ಇದೆ	ಇದೆ	ಇದೆ
		[illegible]	159	113	0	0	ಇದೆ	ಇದೆ	ಇದೆ	ಇದೆ
		[illegible]	146	145	134	134	ಇದೆ	ಇದೆ	ಇದೆ	ಇದೆ

C:\Users\sten-secy-tour\Downloads\Format-1 Final_2.docx

[illegible]	[illegible]	[illegible]	[illegible]	[illegible]	[illegible]	[illegible]	[illegible] (ಶೇ / ಕ್ಕೆ)			
							[illegible]	[illegible]	[illegible]	[illegible]
1	2	3	4	5	6	7	8	9	10	11
		[illegible]	117	110	0	0	[illegible]	[illegible]	[illegible]	[illegible]
			101	78	0	0	[illegible]	[illegible]	[illegible]	[illegible]
		[illegible]	100	100	93	93	[illegible]	[illegible]	[illegible]	[illegible]
		[illegible]	50	40	40	40	[illegible]	[illegible]	[illegible]	[illegible]
		[illegible]	95	25	72	72	[illegible]	[illegible]	[illegible]	[illegible]
		[illegible]	5	32	52	52				
			1093	**956**	**512**	**512**				
	[illegible]	[illegible]	200	200	172	172	[illegible]	50,000 [illegible]	[illegible]	[illegible]
		[illegible]	150	150	0	0	[illegible]	50,000 [illegible]	[illegible]	[illegible]
		[illegible]	38	38	38	38	[illegible]	[illegible]	[illegible]	[illegible]
			388	388	210	210				
	[illegible]	[illegible]	130	125		125	[illegible]	[illegible]	[illegible]	[illegible]
		[illegible]	143	143	125	125	[illegible]	[illegible]	[illegible]	[illegible]
		[illegible]	87	87	72	72	[illegible]	[illegible]	[illegible]	[illegible]
		[illegible]	[illegible]	191	191	191	[illegible]	[illegible]	[illegible]	[illegible]
		[illegible]	347	343	143	280	[illegible]	[illegible]	[illegible]	[illegible]
		[illegible]	12	11	11	11	[illegible]	[illegible]	[illegible]	
			973	931	772	833				
			12741	**11417**	**7565**	**6090**				

ಕರ್ನಾಟಕ ಸರ್ಕಾರ

ಸಂಖ್ಯೆ:ಕಂಇ 72 ಮುಸಪ್ರ 2020 (ಇ)

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 21.03.2020

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
(ವಿ.ನಿ., ಭೂಮಿ & ಯು.ಪಿ.ಓ.ಆರ್.)
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ
ವಿಧಾನಸೌಧ
ಬೆಂಗಳೂರು

ಮಾನ್ಯರೆ,

ವಿಷಯ:- ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ವೆಂಕಟರಾವ್ ನಾಡಗೌಡ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2588ಕ್ಕೆ ಉತ್ತರ ನೀಡುವ ಕುರಿತು.

* * *

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ವೆಂಕಟರಾವ್ ನಾಡಗೌಡ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2588ಕ್ಕೆ ಸಂಬಂಧಿಸಿದಂತೆ ಉತ್ತರದ 100 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಕೆ.ಪಿ. ಹೇಮಂತರಾಜು)
ಶಾಖಾಧಿಕಾರಿ
ಕಂದಾಯ ಇಲಾಖೆ (ಮುಜರಾಯಿ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	2588
ಸದಸ್ಯರ ಹೆಸರು	ಶ್ರೀ ವೆಂಕಟ್‌ರಾವ್ ನಾಡಗೌಡ
ಉತ್ತರಿಸುವ ದಿನಾಂಕ:	23-03-2020
ಉತ್ತರಿಸುವವರು	ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿರುವ 'ಎ', 'ಬಿ' ಮತ್ತು 'ಸಿ' ಕೆಟಗರಿಯ ಮುಜರಾಯಿ ದೇವಾಲಯಗಳೆಷ್ಟು; 'ಸಿ' ಕೆಟಗರಿಯ ದೇವಾಲಯಗಳ ಅರ್ಚಕರಿಗೆ ನೀಡುತ್ತಿರುವ ಮಾಸಿಕ ಭತ್ಯೆ ಎಷ್ಟು (ವಿವರ ನೀಡುವುದು);	ರಾಜ್ಯದಲ್ಲಿ ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ ಈ ಕೆಳಕಂಡಂತೆ 'ಎ', 'ಬಿ' ಮತ್ತು 'ಸಿ' ಪ್ರವರ್ಗದ ದೇವಾಲಯಗಳು ಇರುತ್ತವೆ. ಪ್ರವರ್ಗ / ಸಂಸ್ಥೆಗಳ ಸಂಖ್ಯೆ ಎ / 205 ಬಿ / 139 ಸಿ / 34218 ಒಟ್ಟು / 34562 ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ತಿದ್ದುಪಡಿ) ನಿಯಮಗಳು 2019 ನಿಯಮ 8(3)ರನ್ವಯ 'ಸಿ' ವರ್ಗದ ಸಂಸ್ಥೆಯನ್ನು ಅರ್ಚಕರ ವೇತನ ಮತ್ತು ಉಪಲಬ್ಧಗಳನ್ನು ದೇವಸ್ಥಾನದ ವರಮಾನವನ್ನು ಅವಲಂಭಿಸಿ ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕನಿಷ್ಠ ವೇತನವನ್ನು ಗಮನದಲ್ಲಿ ಇರಿಸಿಕೊಂಡು ಸಂಬಂಧಪಟ್ಟ ಸಹಾಯಕ ಆಯುಕ್ತರು ನಿಗದಿಪಡಿಸಲು ಅವಕಾಶವಿರುತ್ತದೆ. 'ಸಿ' ವರ್ಗದ ದೇವಾಲಯಗಳಲ್ಲಿ ವಾರ್ಷಿಕ ತಸ್ತೀಕ್ ಮೊತ್ತ ರೂ.48,000/-ಗಳನ್ನು ಹೊರತುಪಡಿಸಿ ಇತರೆ ಆದಾಯಗಳು ಇರುವುದಿಲ್ಲ.
ಆ	ಈ ದೇವಾಲಯಗಳಿಗೆ ಮುಜರಾಯಿ ಇಲಾಖೆಯ ಅಧಿಕಾರಿಗಳು ಹಾಗೂ ಕಂದಾಯ ಅಧಿಕಾರಿಗಳು ಭೇಟಿ ನೀಡಿ ಪರಿಸ್ಥಿತಿಯ ಅವಲೋಕನ ಮಾಡುತ್ತಿದ್ದಾರೆಯೇ;	ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ನಿಯಮಗಳು 2002ರ ನಿಯಮ 3 (2) ರಂತೆ ಮುಜರಾಯಿ ದೇವಾಲಯಗಳಿಗೆ ಈ ಕೆಳಕಂಡಂತೆ ನಿಯಮಿಸಲಾದ ಪ್ರಾಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಸದರಿ ಅಧಿಕಾರಿಗಳು ಆಯಾಯ ದೇವಾಲಯಗಳ ಅವಲೋಕನ ಮೇಲ್ವಿಚಾರಣೆ ವಹಿಸುತ್ತಾರೆ. ಪ್ರವರ್ಗ / ನಿಯಮಿಸಲಾದ ಪ್ರಾಧಿಕಾರಿಗಳು ಎ / ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಬಿ / ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಸಿ / ಸಂಬಂಧಪಟ್ಟ ಉಪವಿಭಾಗಾಧಿಕಾರಿಗಳು
ಇ	'ಎ' ಕೆಟಗರಿಯ ದೇವಾಲಯಗಳಲ್ಲಿ ಸರ್ಕಾರದ ವತಿಯಿಂದ ಸಾಮೂಹಿಕ ವಿವಾಹ ಮಾಡುವ ಸಪ್ತಪದಿ ಯೋಜನೆಯನ್ನು ಜಾರಿಗೆ ತರಲಾಗಿದೆಯೇ;	ಸಾಮೂಹಿಕ ವಿವಾಹ ಮಾಡುವ ಸಪ್ತಪದಿ ಯೋಜನೆಗೆ ಈಗಾಗಲೇ ಆಯುಕ್ತಾಲಯದಿಂದ ಸುತ್ತೋಲೆಯನ್ನು ಹೊರಡಿಸಲಾಗಿದ್ದು, ಸದರಿ ಸುತ್ತೋಲೆಯಲ್ಲಿ ಸಾಮೂಹಿಕ ವಿವಾಹದ ದಿನಾಂಕವನ್ನು ಸಹ ನಿಗಧಿಪಡಿಸಲಾಗಿದೆ. (ಆಯುಕ್ತಾಲಯದ ಸುತ್ತೋಲೆ ಸಂಖ್ಯೆ ಎಡಿಎಂ 11/ಸಿಆರ್/138/19-20 ದಿನಾಂಕ 22.11.2019)

ಈ	ಹಾಗಿದ್ದಲ್ಲಿ, ಯೋಜನೆಯ ವೆಚ್ಚಗಳನ್ನು ಸರ್ಕಾರ ಭರಿಸುವುದೇ ಅಥವಾ ದೇವಾಲಯಗಳ ಹಣವನ್ನು ಬಳಸಲಾಗುವುದೇ; ಈ ದೇವಾಲಯಗಳ ಹಣವನ್ನು ಬಳಸುವುದಾದಲ್ಲಿ, ದೇವಾಲಯಗಳ ನಿರ್ವಹಣೆಗೆ ಹಣದ ಕೊರತೆ ಆಗುವುದಿಲ್ಲವೆ (ವಿವರ ನೀಡುವುದು)?	ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿನ ಉತ್ತಮ ಆದಾಯವಿರುವ ದೇವಾಲಯಗಳಲ್ಲಿ ಸಾಮೂಹಿಕ ವಿವಾಹಗಳನ್ನು ನಡೆಸಲು ಉದ್ದೇಶಿಸಿರುವುದರಿಂದ ದೇವಾಲಯದ ನಿರ್ವಹಣೆಗೆ ಹಣದ ಕೊರತೆ ಉಂಟಾಗುವುದಿಲ್ಲ.

(ಸಂಖ್ಯೆ:ಕಂಇ 72 ಮುಸಪ್ರ 2020)

(ಕೋಟಾ ಶ್ರೀನಿವಾಸ ಪೂಜಾರಿ)
ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು
ಮತ್ತು ಒಳನಾಡು ಜಲ ಸಾರಿಗೆ ಸಚಿವರು.

File No.RD/22/LGY/2020-DO-REVENUE DEPATMENT SEC

ಸಂಖ್ಯೆ:ಕಂಇ 22 ಎಲ್‌ಜಿವೈ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:21.03.2020.

130
u/s
23/03/2020

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ರವೀಂದ್ರ ಶ್ರೀಕಂಠಯ್ಯ (ಶ್ರೀರಂಗಪಟ್ಟಣ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2594ಕ್ಕೆ ಉತ್ತರ ಒದಗಿಸುವ ಬಗ್ಗೆ.

* * *

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ರವೀಂದ್ರ ಶ್ರೀಕಂಠಯ್ಯ (ಶ್ರೀರಂಗಪಟ್ಟಣ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2594ರ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ವಿಶ್ವಾಸಿ,
Vimalamma S, 21/3/2020
(ವಿಮಲಮ್ಮ ಸಿ.)
ಪೀಠಾಧಿಕಾರಿ
ಕಂದಾಯ ಇಲಾಖೆ (ಭೂ ಮಂಜೂರಾತಿ-2).

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2594
ಸದಸ್ಯರ ಹೆಸರು	:	ಶ್ರೀ ರವೀಂದ್ರ ಶ್ರೀಕಂಠಯ್ಯ (ಶ್ರೀರಂಗಪಟ್ಟಣ)
ಉತ್ತರಿಸುವ ದಿನಾಂಕ	:	23-03-2020
ಉತ್ತರಿಸುವ ಸಚಿವರು	:	ಕಂದಾಯ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
(ಅ)	ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಉಪವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ಇರುವ ಪಿ.ಟಿ.ಸಿ.ಎಲ್ ಮತ್ತು ಇತರೆ ದಾವೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಹಾಗೂ ಪ್ರಕರಣಗಳವಾರು ಸಂಪೂರ್ಣ ಮಾಹಿತಿ ನೀಡುವುದು)	ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಉಪವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ಇರುವ ಪಿ.ಟಿ.ಸಿ.ಎಲ್ ಮತ್ತು ಇತರೆ ದಾವೆಗಳ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.
(ಆ)	ದಾವೆಗಳು ಎಷ್ಟು ವರ್ಷಗಳಿಂದ ಬಾಕಿ ಉಳಿದಿವೆ; ಬಾಕಿ ಉಳಿಯಲು ಕಾರಣಗಳೇನು; (ತಾಲ್ಲೂಕು ವಾರು ಹಾಗೂ ಪ್ರಕರಣಗಳವಾರು ಸಂಪೂರ್ಣ ಮಾಹಿತಿ ನೀಡುವುದು)	1. 2009-10ನೇ ಸಾಲಿನಿಂದ ಪ್ರಕರಣಗಳು ಬಾಕಿ ಇರುತ್ತದೆ. 2.ಪಿ.ಟಿ.ಸಿ.ಎಲ್. ಪ್ರಕರಣಗಳಿಗೆ ಸಂಬಂಧಿಸಿದಂತೆ ಅರ್ಜಿದಾರರು ಪ್ರತಿವಾದಿಗಳ ಹೇಳಿಕೆ ಸಾಕ್ಷಿಗಳ ವಿಚಾರಣೆ ಪಾಟೀ ಸವಾಲು ದಾಖಲಾತಿಗಳ ಗುರುತುಮಾಡುವಿಕೆ ಹೆಚ್ಚುವರಿ ಸಾಕ್ಷಿಗಳ ವಿಚಾರಣೆ ಅವರು ಗಳ ಪಾಟೀ ಸವಾಲು ಈ ಎಲ್ಲಾ ಪ್ರಕ್ರಿಯೆಗಳು ಔಪಚಾರಿಕ ವಿಚಾರಣೆ (Formal enquiry) ಕ್ರಮವಹಿಸಬೇಕಾಗಿರುವುದರಿಂದ ಇವುಗಳಿಗೆ ಸಾಕಷ್ಟು ಕಾಲಾವಕಾಶಗಳನ್ನು ನೀಡಬೇಕಾಗಿರುತ್ತದೆ. ಹಾಗಾಗಿ ಈ ಪ್ರಕರಣಗಳು ವಿಚಾರಣೆಯಲ್ಲಿ ಬಾಕಿ ಉಳಿಯಲು ಕಾರಣವಾಗಿರುತ್ತದೆ.
(ಇ)	ಪ್ರಕರಣಗಳು ಬಾಕಿ ಉಳಿದಿರುವುದರಿಂದ ರೈತರಿಗೆ ಹಾಗೂ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ನಿಯಮಿತವಾಗಿ ನ್ಯಾಯಾಲಯದ ಪ್ರಕರಣಗಳನ್ನು ನಡೆಸಲಾಗುತ್ತಿರುವುದರಿಂದ ರೈತರಿಗೆ ಹಾಗೂ ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ.
(ಈ)	ಬಂದಿದ್ದಲ್ಲಿ, ಈ ಪ್ರಕರಣಗಳನ್ನು ಕಾಲಮಿತಿಯೊಳಗೆ ಇತ್ಯರ್ಥಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)	ಕಂದಾಯ ನ್ಯಾಯಾಲಯ ಪ್ರಕರಣಗಳನ್ನು ಮೇಲ್ವಿಚಾರಣೆ ಮಾಡಲು ಸರ್ಕಾರವು ಆರ್.ಸಿ.ಸಿ.ಎಂ.ಎಸ್. ತಂತ್ರಾಂಶವನ್ನು ರೂಪಿಸಿದ್ದು ಅದರಂತೆ ಎಲ್ಲಾ ಪ್ರಕರಣಗಳನ್ನು ಆರ್.ಸಿ.ಸಿ.ಎಂ.ಎಸ್. ತಂತ್ರಾಂಶದಲ್ಲಿ ನಮೂದಿಸಲಾಗುತ್ತಿದೆ. ಪ್ರಕರಣಗಳ ಹಂತವಾರು ಮಾಹಿತಿಯನ್ನು ವಾದಿ ಪ್ರತಿವಾದಿಗಳಿಗೆ ಎಸ್.ಎಂ.ಎಸ್. ಮೂಲಕ ಹಾಗೂ ಆರ್.ಸಿ.ಸಿ.ಎಂ.ಎಸ್. ತಂತ್ರಾಂಶದ(Web site) ಮೂಲಕ ತಿಳಿದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಉಪವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರತಿ ಸೋಮವಾರ ಮತ್ತು ಮಂಗಳವಾರ ಹಾಗೂ ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರತಿ ಮಂಗಳವಾರ, ಶುಕ್ರವಾರ ಮತ್ತು ಶನಿವಾರಗಳಂದು ವಿಚಾರಣೆ ನಡೆಸಲಾಗುತ್ತಿದೆ. ಸರ್ಕಾರವು ಕಂದಾಯ ನ್ಯಾಯಾಲಯಗಳ ಪ್ರಕರಣಕ್ಕೆ ಸಂಬಂಧಿಸಿದಂತೆ ಉಪವಿಭಾಗಾಧಿಕಾರಿಗಳಿಗೆ ಪ್ರತಿ ಮಾಹೆ

		100 ಪ್ರಕರಣದಂತೆ ಹಾಗೂ ಜಿಲ್ಲಾಧಿಕಾರಿಗಳಿಗೆ ಪ್ರತಿ ಮಾಹೆ 50 ಪ್ರಕರಣಗಳನ್ನು ಇತ್ಯರ್ಥಪಡಿಸುವಂತೆ ನಿರ್ದೇಶನ ನೀಡಲಾಗಿರುತ್ತದೆ. ಅದರಂತೆ ಈ ಜಿಲ್ಲೆಯಲ್ಲಿ ನಿಗಧಿತ ಗುರಿ ಸಾದಿಸಲು ಕ್ರಮವಹಿಸಲಾಗುತ್ತಿದೆ. ಫೆಬ್ರುವರಿ ಮಾಹೆಯ ಪ್ರಗತಿಯಲ್ಲಿ ಜಿಲ್ಲೆಯು ರಾಜ್ಯ ಮಟ್ಟದಲ್ಲಿ 4ನೇ ಸ್ಥಾನವನ್ನು ಪಡೆದುಕೊಂಡಿರುತ್ತದೆ.
(ಉ)	ಪ್ರಕರಣಗಳನ್ನು ಕಾಲಮಿತಿಯೊಳಗೆ ಇತ್ಯರ್ಥಪಡಿಸುವಂತೆ ಉಚ್ಚ ನ್ಯಾಯಾಲಯ ನಿರ್ದೇಶನ ನೀಡಿದೆಯೇ; ನೀಡಿದ್ದಲ್ಲಿ, ಪ್ರಕರಣಗಳನ್ನು ಕಾಲಮಿತಿಯೊಳಗಾಗಿ ಇತ್ಯರ್ಥಪಡಿಸದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)	ಉಚ್ಚ ನ್ಯಾಯಾಲಯದಿಂದ ಪುನರ್ ವಿಚಾರಣೆಗೆ ಹಿಂದಿರುಗಿಸಿದ ನಿರ್ದಿಷ್ಟ ಪ್ರಕರಣಗಳಿಗೆ ಮಾತ್ರ ಕಾಲಮಿತಿ ನಿಗಧಿಪಡಿಸಿದ್ದು, ಉಚ್ಚ ನ್ಯಾಯಾಲಯದ ಈ ನಿರ್ದೇಶದಂತೆ ಕಾಲಮಿತಿಯೊಳಗೆ ನಿರ್ದಿಷ್ಟ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕ್ರಮ ವಹಿಸಲಾಗುತ್ತಿದೆ. ಮುಂದುವರೆದು ಕಾಲಮಿತಿಯೊಳಗಾಗಿ ಇತ್ಯರ್ಥ ಪಡಿಸದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳ ವಿಚಾರದಲ್ಲಿ ಅಂತಹ ಪ್ರಕರಣಗಳು ಈ ಜಿಲ್ಲೆಯಲ್ಲಿ ಯಾವುದೂ ಕಂಡು ಬಂದಿರುವುದಿಲ್ಲ.
(ಊ)	ಪ್ರಕರಣಗಳನ್ನು ಇತ್ಯರ್ಥಪಡಿಸಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ; ಹಾಗಿದ್ದಲ್ಲಿ, ಈ ಪ್ರಕರಣಗಳನ್ನು ಯಾವ ಕಾಲಮಿತಿಯೊಳಗಾಗಿ ಇತ್ಯರ್ಥ ಪಡಿಸಲಾಗುವುದು? (ವಿವರ ನೀಡುವುದು)	ಕಂದಾಯ ನ್ಯಾಯಾಲಯ ಪ್ರಕರಣಗಳಿಗೆ ಸಾದ್ಯವಾದಷ್ಟು ಮಟ್ಟಿಗೆ ನ್ಯಾಯಾಲಯ ಕಲಾಪಗಳನ್ನು ತಪ್ಪಿಸದೆ (ನಿರ್ದಿಷ್ಟ ಸನ್ನಿವೇಶಗಳನ್ನು ಹೊರತುಪಡಿಸಿ) ವಿಚಾರಣೆ ನಡೆಸಿ ಜರೂರು ತೀರ್ಮಾನಿಸುವಂತೆ ವಿಡಿಯೋ ಸಂವಾದದಲ್ಲಿ ನಿರ್ದೇಶನ ನೀಡಲಾಗಿರುತ್ತದೆ. ಅದರಂತೆ ಆದ್ಯತೆ ಮೇರೆಗೆ ವಿಚಾರಣೆಗೆ ನಿಗಧಿಪಡಿಸಿದ ದಿನಾಂಕಗಳಂದು ವಿಚಾರಣೆ ನಡೆಸಿ ತೀರ್ಮಾನಿಸ-ಲಾಗುತ್ತಿದೆ ಹಾಗೂ ಪ್ರತಿ ವಾರ ವಿಡಿಯೋ ಸಂವಾದದ ಮೂಲಕವು ಸಹ ಪ್ರಗತಿ ಪರಿಶೀಲನೆ ನಡೆಸಿ ನಿರ್ದೇಶನ ಸಹ ನೀಡಲಾಗುತ್ತಿದೆ.

(ಕಂಇ 22 ಎಲ್‌ಜಿವ್ಹೆ 2020)

(ಆರ್.ಅಶೋಕ)
ಕಂದಾಯ ಸಚಿವರು.

ಕರ್ನಾಟಕ ವಿಧಾನಸಭೆಯ ಮಾನ್ಯ ಸದಸ್ಯರಾದ ಶ್ರೀ ರವೀಂದ್ರ ಶ್ರೀಕಂಠಯ್ಯ (ಶ್ರೀರಂಗಪಟ್ಟಣ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2594ಕ್ಕೆ ಅನುಬಂಧ

ಜಿಲ್ಲಾಧಿಕಾರಿಗಳ ನ್ಯಾಯಾಲಯ					
ಕ್ರ.ಸಂ.	ತಾಲ್ಲೂಕು	ಪಿಟಿಸಿಎಲ್	ಆರ್.ಪಿ.	ಆರ್.ಎ.	ಆರ್.ಎ.ಮಿಸ್
1.	ಮಂಡ್ಯ	16	110	15	05
2.	ಮದ್ದೂರು	10	102	10	02
3.	ಮಳವಳ್ಳಿ	04	89	06	01
4.	ಪಾಂಡವಪುರ	02	84	05	00
5.	ಶ್ರೀರಂಗಪಟ್ಟಣ	05	71	05	00
6.	ನಾಗಮಂಗಲ	02	60	08	02
7.	ಕೆ.ಆರ್.ಪೇಟೆ	03	79	08	00
	ಒಟ್ಟು	**42**	**595**	**57**	**10**

ಮಂಡ್ಯ ಉಪವಿಭಾಗಾಧಿಕಾರಿಗಳ ನ್ಯಾಯಾಲಯ				
ಕ್ರ.ಸಂ.	ತಾಲ್ಲೂಕು	ಪಿಟಿಸಿಎಲ್	ಆರ್.ಪಿ.	ಆರ್.ಮಿಸ್.
1.	ಮಂಡ್ಯ	40	29	736
2.	ಮದ್ದೂರು	28	15	524
3.	ಮಳವಳ್ಳಿ	20	04	536
	ಒಟ್ಟು	**88**	**48**	**1792**

ಪಾಂಡವಪುರ ಉಪವಿಭಾಗಾಧಿಕಾರಿಗಳ ನ್ಯಾಯಾಲಯ					
ಕ್ರ.ಸಂ.	ತಾಲ್ಲೂಕು	ಪಿಟಿಸಿಎಲ್	ಆರ್.ಪಿ.	ಆರ್.ಮಿಸ್.	ಪಿ.ಪಿ.ಎ.
1.	ಪಾಂಡವಪುರ	07	30	280	-
2.	ಶ್ರೀರಂಗಪಟ್ಟಣ	07	33	388	-
3.	ನಾಗಮಂಗಲ	04	38	321	02
4.	ಕೆ.ಆರ್.ಪೇಟೆ	08	277	532	-
	ಒಟ್ಟು	**26**	**378**	**1521**	**02**

File No.RD/42/LGA/2020-DO-REVENUE DEPATMENT SEC

ಸಂಖ್ಯೆ:ಕಂಇ 42 ಎಲ್‌ಜಿಎ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:21.03.2020.

172
U/S
23/03/2020

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಸುಕುಮಾರ್ ಶೆಟ್ಟಿ.ಬಿ.ಎಂ. (ಬೈಂದೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2442ಕ್ಕೆ ಉತ್ತರ ಒದಗಿಸುವ ಬಗ್ಗೆ.

* * *

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಸುಕುಮಾರ್ ಶೆಟ್ಟಿ.ಬಿ.ಎಂ. (ಬೈಂದೂರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2442ರ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ವಿಶ್ವಾಸಿ
Vimalamma 21/3/2020
(ವಿಮಲಮ್ಮ.ಸಿ)
ಪೀಠಾಧಿಕಾರಿ
ಕಂದಾಯ ಇಲಾಖೆ (ಭೂ ಮಂಜೂರಾತಿ-2).

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2442
ಸದಸ್ಯರ ಹೆಸರು : ಶ್ರೀ ಸುಕುಮಾರ್ ಶೆಟ್ಟಿ.ಬಿ.ಎಂ. (ಬೈಂದೂರು)
ಉತ್ತರಿಸುವ ದಿನಾಂಕ : 23.03.2020
ಉತ್ತರಿಸುವ ಸಚಿವರು : ಕಂದಾಯ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಉಡುಪಿ ಜಿಲ್ಲೆಯಲ್ಲಿ ಸರ್ಕಾರಿ ಜಮೀನುಗಳಲ್ಲಿ ಅನಧಿಕೃತ ಸಾಗುವಳಿಯನ್ನು ಸಕ್ರಮಗೊಳಿಸಲು ನಮೂನೆ-57 ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)	ಉಡುಪಿ ಜಿಲ್ಲೆಯಲ್ಲಿ ನಮೂನೆ-57 ರಲ್ಲಿ ತಾಲ್ಲೂಕುವಾರು ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಈ ಕೆಳಕಂಡಂತಿವೆ: (see table below)
ಆ)	ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಅವಧಿಗಿಂತ ಮೊದಲೇ ಕಾಲಾವಕಾಶವನ್ನು ಮೊಟಕುಗೊಳಿಸಿರುವುದರಿಂದ ಅನಧಿಕೃತ ಸಾಗುವಳಿ ಮಾಡುತ್ತಿರುವ ಅರ್ಹ ಅರ್ಜಿದಾರರು ಅರ್ಜಿ ಸಲ್ಲಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಇ)	ಹಾಗಿದ್ದಲ್ಲಿ, ನಮೂನೆ-57 ರಡಿ ಅರ್ಜಿ ಸಲ್ಲಿಸಲು ಅರ್ಹ ಸಾಗುವಳಿದಾರರು ಅವಕಾಶ ವಂಚಿತರಾಗುವುದು ನಿಜವಲ್ಲವೇ;	ಹೌದು
ಈ)	ಹಾಗಿದ್ದಲ್ಲಿ, ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ; (ವಿವರ ನೀಡುವುದು)	ಈ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳಿಂದ ವಾಸ್ತವಾಂಶದ ವರದಿಯನ್ನು ಪಡೆದು, ನಿಯಮಾನುಸಾರ ಪರಿಶೀಲಿಸಿ, ಸೂಕ್ತ ಕ್ರಮವಹಿಸಲಾಗುವುದು.

ಕ್ರಮ ಸಂಖ್ಯೆ	ತಾಲ್ಲೂಕುಗಳು	ಅರ್ಜಿಗಳ ಸಂಖ್ಯೆ
1	ಉಡುಪಿ	794
2	ಬ್ರಹ್ಮಾವರ	5475
3	ಕಾಪು	212
4	ಕುಂದಾಪುರ	18651
5	ಬೈಂದೂರು	6448
6	ಕಾರ್ಕಳ	3823
7	ಹೆಬ್ರಿ	2627
	ಒಟ್ಟು	**38,030**

(ಕಡತ ಸಂಖ್ಯೆ:ಕಂಇ 42 ಎಲ್‌ಜಿಎ 2020)

(ಆರ್.ಅಶೋಕ)
ಕಂದಾಯ ಸಚಿವರು.

File No.RD/30/LGM/2020-DO-REVENUE DEPATMENT SEC

ಸಂಖ್ಯೆ:ಕಂಇ 30 ಎಲ್‌ಜಿಎಂ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:21.03.2020.

115
QS
23/03/2020

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ,
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಪುಟ್ಟರಂಗಶೆಟ್ಟಿ ಸಿ. (ಚಾಮರಾಜನಗರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2834ಕ್ಕೆ ಉತ್ತರ ಒದಗಿಸುವ ಬಗ್ಗೆ.

* * *

ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಪುಟ್ಟರಂಗಶೆಟ್ಟಿ ಸಿ. (ಚಾಮರಾಜನಗರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2834ರ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ವಿಶ್ವಾಸಿ,
Vimalamma C. 21/3/2020
(ವಿಮಲಮ್ಮ ಸಿ.)
ಪೀಠಾಧಿಕಾರಿ
ಕಂದಾಯ ಇಲಾಖೆ (ಭೂ ಮಂಜೂರಾತಿ-2).

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2834
ಸದಸ್ಯರ ಹೆಸರು : ಶ್ರೀ ಪುಟ್ಟರಂಗಶೆಟ್ಟಿ ಸಿ. (ಚಾಮರಾಜನಗರ)
ಉತ್ತರಿಸುವ ದಿನಾಂಕ : 23-03-2020
ಉತ್ತರಿಸುವ ಸಚಿವರು : ಕಂದಾಯ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
(ಅ)	ಚಾಮರಾಜನಗರ ಜಿಲ್ಲೆಯಲ್ಲಿರುವ ಒಟ್ಟು ಗ್ರಾಮಗಳ ಸಂಖ್ಯೆ ಎಷ್ಟು;	ಚಾಮರಾಜನಗರ ಜಿಲ್ಲೆಯಲ್ಲಿ ಒಟ್ಟು 483 ಕಂದಾಯ ಗ್ರಾಮಗಳಿರುತ್ತವೆ.
(ಆ)	ಜಿಲ್ಲೆಯಲ್ಲಿ ಎಷ್ಟು ಗ್ರಾಮಗಳಲ್ಲಿ ಸ್ಮಶಾನಕ್ಕಾಗಿ ಜಾಗ ಗುರುತಿಸಲಾಗಿದೆ; (ವಿವರ ನೀಡುವುದು)	ಒಟ್ಟು 483 ಕಂದಾಯ ಗ್ರಾಮಗಳ ಪೈಕಿ 76 ಗ್ರಾಮಗಳು ಜನವಸತಿ ಇಲ್ಲದ ಗ್ರಾಮಗಳಾಗಿರುತ್ತವೆ. ಜನವಸತಿ ಇರುವ 407 ಗ್ರಾಮಗಳ ಪೈಕಿ 309 ಗ್ರಾಮಗಳಲ್ಲಿ ಸ್ಮಶಾನ ಲಭ್ಯವಿರುತ್ತದೆ. ಇನ್ನುಳಿದ 98 ಗ್ರಾಮಗಳಲ್ಲಿ ಸ್ಮಶಾನ ಲಭ್ಯವಿರುವುದಿಲ್ಲ.
(ಇ)	ಸ್ಮಶಾನ ಇಲ್ಲದೇ ಇರುವ ಗ್ರಾಮಗಳಲ್ಲಿ ಸ್ಮಶಾನಗಳನ್ನು ನಿರ್ಮಿಸಲು ಕೈಗೊಂಡಿರುವ ಕ್ರಮಗಳೇನು;	ಸ್ಮಶಾನ ಇಲ್ಲದೆ ಇರುವ 98 ಗ್ರಾಮಗಳ ಪೈಕಿ 57 ಗ್ರಾಮಗಳಲ್ಲಿ ಸ್ಮಶಾನಕ್ಕಾಗಿ ಸರ್ಕಾರಿ ಜಮೀನನ್ನು ಗುರುತಿಸಲಾಗಿದೆ. 41 ಗ್ರಾಮಗಳಲ್ಲಿ ಖಾಸಗಿ ಜಮೀನನ್ನು ಖರೀದಿಸಲು ಕ್ರಮವಹಿಸಲಾಗುತ್ತಿದೆ.

(ಕಂಇ 30 ಎಲ್‌ಜಿಎಂ 2020)

(ಆರ್.ಅಶೋಕ)
ಕಂದಾಯ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 71 ಮುಸಪ್ರ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:20-03-2020

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
(ವಿಪತ್ತು ನಿರ್ವಹಣೆ, ಭೂಮಿ ಮತ್ತು ಯುಪಿಓಆರ್)
ಕಂದಾಯ ಇಲಾಖೆ,
ಬೆಂಗಳೂರು.

94
23/3/20

ಇವರಿಗೆ,

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ,
ವಿಧಾನಸೌಧ.

ಮಾನ್ಯರೆ,

ವಿಷಯ:- ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಮುನಿಯಪ್ಪ.ವಿ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2093ಕ್ಕೆ ಉತ್ತರ ನೀಡುವ ಕುರಿತು.

* * *

ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಮುನಿಯಪ್ಪ.ವಿ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:2093ಕ್ಕೆ ಸಂಬಂಧಿಸಿದಂತೆ ಉತ್ತರದ 100 ಪ್ರತಿಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

M.L. Varalakshmi 20/3/2020
(ಎಂ.ಎಲ್.ವರಲಕ್ಷ್ಮೀ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಮುಜರಾಯಿ)

<u>**ಕರ್ನಾಟಕ ವಿಧಾನ ಸಭೆ**</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	2093
ಸದಸ್ಯರ ಹೆಸರು	ಶ್ರೀ ಮುನಿಯಪ್ಪ.ವಿ.
ಉತ್ತರಿಸುವ ದಿನಾಂಕ:	23-03-2020
ಉತ್ತರಿಸುವವರು	ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

<table>
<tr><th></th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಮುಜರಾಯಿ ಇಲಾಖೆಗೆ ಒಳಪಟ್ಟಿರುವ ದೇವಸ್ಥಾನಗಳ ಸಂಖ್ಯೆ ಎಷ್ಟು;</td><td>ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ವಿಧಾನ ಸಭಾ ಕ್ಷೇತ್ರದಲ್ಲಿ ಒಟ್ಟು 212 ಮುಜರಾಯಿ ದೇವಾಲಯಗಳಿರುತ್ತವೆ.</td></tr>
<tr><td>ಆ</td><td>ಕಳೆದ ಎರಡು ವರ್ಷಗಳಿಂದ ದೇವಾಲಯಗಳ ಜೀರ್ಣೋದ್ಧಾರ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು? (ದೇವಾಲಯಗಳ ಹೆಸರು ಹಾಗೂ ಬಿಡುಗಡೆಯಾದ ಅನುದಾನದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)</td><td>ಶಿಡ್ಲಘಟ್ಟ ವಿಧಾನ ಸಭಾ ಕ್ಷೇತ್ರದ ದೇವಾಲಯಗಳ ಜೀರ್ಣೋದ್ಧಾರ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಕಳೆದ ಎರಡು ವರ್ಷಗಳಿಂದ ಒಟ್ಟು ರೂ.62.78ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ.
ಯೋಜನೆವಾರು ವಿವರ ಕೆಳಗಿನಂತಿದೆ.
<table>
<tr><td colspan="3">ಮೊತ್ತ ರೂ.ಲಕ್ಷಗಳಲ್ಲಿ</td></tr>
<tr><th>ಯೋಜನೆ ವಿವರ</th><th>2017-18</th><th>2018-19</th></tr>
<tr><td>ದುರಸ್ಥಿ ಜೀರ್ಣೋದ್ಧಾರ/ಅಭಿವೃದ್ಧಿ (ಸಾಮಾನ್ಯ ಅನುದಾನ)</td><td>8.00</td><td>35.00</td></tr>
<tr><td>ಆರಾಧನಾ ಯೋಜನೆ</td><td>0.89</td><td>4.24</td></tr>
<tr><td>ಪರಿಶಿಷ್ಠಜಾತಿ ಉಪ ಯೋಜನೆ</td><td>8.92</td><td>3.38</td></tr>
<tr><td>ಗಿರಿಜನ ಉಪಯೋಜನೆ</td><td>1.33</td><td>1.02</td></tr>
<tr><td>ಒಟ್ಟು</td><td>19.14</td><td>43.64</td></tr>
</table>
<u>ದುರಸ್ಥಿ/ಜೀರ್ಣೋದ್ಧಾರ ಅಭಿವೃದ್ಧಿ ಯೋಜನೆ:-</u>
ಈ ಯೋಜನೆಯಡಿ ಅನುದಾನ ಮಂಜೂರಾದ ದೇವಾಲಯವಾರು ವಿವರವನ್ನು ಅನುಬಂಧ-1ರಲ್ಲಿ ಒದಗಿಸಿದೆ.

<u>ಆರಾಧನಾ/ ಪರಿಶಿಷ್ಠ ಜಾತಿ ಉಪಯೋಜನೆ/ಗಿರಿಜನ ಉಪಯೋಜನೆ</u>
ಈ ಯೋಜನೆಗಳಡಿ ಮಂಜೂರಾದ ಅನುದಾನವನ್ನು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ಸರ್ಕಾರದಿಂದ ಸದರಿ ಯೋಜನೆಗಳಡಿ ರಚಿಸಿರುವ ಮಾರ್ಗಸೂಚಿಗಳ ರೀತ್ಯಾ ಆಯಾಯ ಜಿಲ್ಲಾ/ಆರಾಧನಾ ಸಮಿತಿಯು ಆಯ್ಕೆ ಮಾಡಿದ ಧಾರ್ಮಿಕ ಸಂಸ್ಥೆಗೆ ಅನುದಾನ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತದೆ.</td></tr>
</table>

(ಸಂಖ್ಯೆ:ಕಂಇ 71 ಮುಸಪ್ರ 2020)

(ಕೋಟಾ ಶ್ರೀನಿವಾಸ ಪೂಜಾರಿ)
ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು
ಮತ್ತು ಒಳನಾಡು ಜಲ ಸಾರಿಗೆ ಸಚಿವರು.

ಅನುಬಂಧ

ಕ್ರ.ಸಂ	ಸರ್ಕಾರದ ಆದೇಶ ಸಂಖ್ಯೆ ಮತ್ತು ದಿನಾಂಕ	ದೇವಾಲಯದ ಹೆಸರು	ಮಂಜೂರಾದ ಮೊತ್ತ ರೂ.ಲಕ್ಷಗಳಲ್ಲಿ
		2017-18	
1.	ಕಂಇ 53 ಮುಅಬಿ 2019 ದಿನಾಂಕ:07.03.2018	ಶ್ರೀ ಬಸವೇಶ್ವರ ಸ್ವಾಮಿ ದೇವಾಲಯ, ಮಳ್ಳೂರು ಗ್ರಾಮ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	4.00
2.		ಶ್ರೀ ಮಲ್ಲೇಶ್ವರ ಸ್ವಾಮಿ ದೇವಾಲಯದ, ಮಳ್ಳೂರು ಗ್ರಾಮ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	4.00
		ಒಟ್ಟು	8.00
		2018-19	
1	ಕಂಇ 53 ಮುಅಬಿ 2018 (3) ದಿನಾಂಕ:13.11.2018	ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನ, ಮಾರಪ್ಪನಹಳ್ಳಿ ಗ್ರಾಮ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	5.00
2		ಶ್ರೀ ಭೂದೇವಮ್ಮ ದೇವಸ್ಥಾನ, ತಲದುಮ್ಮನಹಳ್ಳಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	5.00
3		ಶ್ರೀ ಮಾರಮ್ಮ ಚೌಡೇಶ್ವರಿ ದೇವಸ್ಥಾನ, ದೊಡ್ಡದಾಸೇನಹಳ್ಳಿ ಗ್ರಾಮ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	3.00
4	ಕಂಇ 110 ಮುಅಬಿ 2018 (1) ದಿನಾಂಕ:13.11.2018	ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನ, ವಾರನುಣಸೇನಹಳ್ಳಿ ಗ್ರಾಮ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	3.00
5		ಶ್ರೀ ಗಂಗಾದೇವಿ ದೇವಾಲಯ, ಮೇಲೂರು ಗ್ರಾಮ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	4.00
6		ಶ್ರೀ ಚೌಡೇಶ್ವರಿ ದೇವಾಲಯ, ತಲದುಮ್ಮನಹಳ್ಳಿ ಗ್ರಾಮ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	4.00
7		ಶ್ರೀ ಭಕ್ತಿ ಆಂಜನೇಯ ಸ್ವಾಮಿ ದೇವಾಲಯ, ಬೊಮ್ಮನಹಳ್ಳಿ ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	4.00
8		ಶ್ರೀ ಚೌಡೇಶ್ವರಿ ದೇವಾಲಯ, ದೊಡ್ಡದಾಸೇನಹಳ್ಳಿ ಗ್ರಾಮ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ	4.00
9	ಕಂಇ 110 ಮುಅಬಿ 2018 (2) ದಿನಾಂಕ:13.11.2018	ಶ್ರೀ ವೇಣುಗೋಪಾಲಸ್ವಾಮಿ ದೇವಾಲಯ, ವೈ.ಹುಣಸೇಹಳ್ಳಿ ಗ್ರಾಮ, ಶಿಡ್ಲಘಟ್ಟ ತಾಲ್ಲೂಕು	3.00
		ಒಟ್ಟು	35.00

ಶಾಖಾಧಿಕಾರಿ
ಕಂದಾಯ ಇಲಾಖೆ (ಮುಜರಾಯಿ)

ಕರ್ನಾಟಕ ಸರಕಾರ

ಸಂಖ್ಯೆ: ಕಂಇ 41 ಡಬ್ಲ್ಯೂ ಬಿಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:21.03.2020.

90
23/3/20

ಇವರಿಂದ,

ಸರ್ಕಾರದ ಕಾರ್ಯದರ್ಶಿ
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ,
ಕರ್ನಾಟಕ ವಿಧಾನಸೌಧ ,
ವಿಧಾನಸೌಧ.

ಮಾನ್ಯರೆ,

ವಿಷಯ: **ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಮಸಾಲ ಜಯರಾಂ (ತುರುವೇಕೆರೆ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 2770ಕ್ಕೆಉತ್ತರ ಒದಗಿಸುವ ಬಗ್ಗೆ.**

* * * * *

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಮಸಾಲ ಜಯರಾಂ (ತುರುವೇಕೆರೆ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 2770ಕ್ಕೆ ಉತ್ತರದ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಜಗದೀಶ ಕೆ)
ಶಾಖಾಧಿಕಾರಿ
ಕಂದಾಯ ಇಲಾಖೆ (ಭೂ ಸುಧಾರಣಾ ಕೋಶ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ : 2770

ಸದಸ್ಯರ ಹೆಸರು : ಶ್ರೀ ಮಸಾಲ ಜಯರಾಂ (ತುರುವೇಕೆರೆ)

ಉತ್ತರಿಸುವ ಸಚಿವರು : ಕಂದಾಯ ಸಚಿವರು

ಉತ್ತರಿಸುವ ದಿನಾಂಕ : 23.03.2020

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕು ಕಛೇರಿ ಕಟ್ಟಡ ತುಂಬಾ ಹಳೆಯದಾಗಿ ಶಿಥಿಲಾವಸ್ಥೆಯಲ್ಲಿದ್ದು, ಮೂಲ ಸೌಲಭ್ಯಗಳಿಲ್ಲದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು,
ಆ)	ಬಂದಿದ್ದಲ್ಲಿ, ಹೊಸದಾಗಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣ ಮಾಡಿ ಮೂಲ ಸೌಲಭ್ಯಗಳನ್ನು ಒದಗಿಸುವ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ;	ಹೊಸ ಮಿನಿ ವಿಧಾನಸೌಧ ನಿರ್ಮಾಣಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆ ಸಲ್ಲಿಸುವಂತೆ ಜಿಲ್ಲಾಧಿಕಾರಿಯವರಿಗೆ ತಿಳಿಸಲಾಗಿದೆ.
ಇ)	ಯಾವಾಗ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು? (ಮಾಹಿತಿ ನೀಡುವುದು)	ಜಿಲ್ಲಾಧಿಕಾರಿಯವರಿಂದ ವಿವರವಾದ ಅಂದಾಜುಪಟ್ಟಿ ಹಾಗೂ ನಕ್ಷೆಯೊಂದಿಗೆ ಪ್ರಸ್ತಾವನೆ ಸ್ವೀಕೃತವಾದ ನಂತರ ಮಿನಿ ವಿಧಾನಸೌಧ ನಿರ್ಮಿಸುವ ಬಗ್ಗೆ ಆಡಳಿತಾತ್ಮಕ ಆದೇಶ ನೀಡಲು ಕ್ರಮವಹಿಸಲಾಗುವುದು.

ಕಂಇ 41 ಡಬ್ಲ್ಯೂಬಿಆರ್ 2020

(ಆರ್. ಅಶೋಕ)
ಕಂದಾಯ ಸಚಿವರು

ಕರ್ನಾಟಕ ಸರಕಾರ

ಸಂಖ್ಯೆ: ಕಂಇ 42 ಡಬ್ಲ್ಯೂಬಿಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:21.03.2020.

64
4/5
23/3/20

ಇವರಿಂದ,

ಸರ್ಕಾರದ ಕಾರ್ಯದರ್ಶಿ
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ,
ಕರ್ನಾಟಕ ವಿಧಾನಸೌಧ ,
ವಿಧಾನಸೌಧ.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಕುಮಾರ್ ಬಂಗಾರಪ್ಪ ಎಸ್. (ಸೊರಬ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆಸಂ: 783 ಕ್ಕೆ ಉತ್ತರ ಒದಗಿಸುವ ಬಗ್ಗೆ

* * * * *

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆ ಸದಸ್ಯರಾದ ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಕುಮಾರ್ ಬಂಗಾರಪ್ಪ ಎಸ್. (ಸೊರಬ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆಸಂ: 783 ಕ್ಕೆ ಉತ್ತರದ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಜಗದೀಶ ಕೆ)
ಶಾಖಾಧಿಕಾರಿ
ಕಂದಾಯ ಇಲಾಖೆ (ಭೂ ಸುಧಾರಣಾ ಕೋಶ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ : 783

ಸದಸ್ಯರ ಹೆಸರು : ಶ್ರೀ ಕುಮಾರ್ ಬಂಗಾರಪ್ಪ ಎಸ್. (ಸೊರಬ)

ಉತ್ತರಿಸುವ ಸಚಿವರು : ಕಂದಾಯ ಸಚಿವರು

ಉತ್ತರಿಸುವ ದಿನಾಂಕ : 23.03.2020

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಸೊರಬ ತಾಲ್ಲೂಕಿಗೆ ಮಿನಿ ವಿಧಾನಸೌಧವನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇದೆ. ಸೊರಬ ತಾಲ್ಲೂಕಿಗೆ ಮಿನಿ ವಿಧಾನಸೌಧ ಮಂಜೂರಾತಿಗಾಗಿ ಸವಿವರ ಅಂದಾಜುಪಟ್ಟಿ ಮತ್ತು ನಕ್ಷೆಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿ, ಶಿವಮೊಗ್ಗ ಇವರಿಗೆ ತಿಳಿಸಲಾಗಿದೆ.
ಆ)	ಹಾಗಿದ್ದಲ್ಲಿ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ಕಛೇರಿಗೆ ಆಡಳಿತ ಸುವ್ಯವಸ್ಥೆಯ ದೃಷ್ಟಿಯಿಂದ ಎಲ್ಲಾ ಮೂಲಭೂತ ಸೌಕರ್ಯ ವ್ಯವಸ್ಥೆ ಒದಗಿಸುವ ಉದ್ದೇಶ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)	ಸರ್ಕಾರದ ಆದೇಶ ಸಂಖ್ಯೆ:ಕಂಇ 11 ಡಬ್ಲ್ಯೂಬಿಆರ್ 2019, ದಿನಾಂಕ:23.10.2019 ರಲ್ಲಿ ಸೊರಬ ತಾಲ್ಲೂಕು ಕಛೇರಿಯ ಮೇಲ್ಛಾವಣಿ ದುರಸ್ತಿ ಕಾಮಗಾರಿಗೆ ರೂ.50.00 ಲಕ್ಷಗಳ ಅಂದಾಜು ಪಟ್ಟಿ ಮತ್ತು ನಕ್ಷೆಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಕಂಇ 42 ಡಬ್ಲ್ಯೂಬಿಆರ್ 2020

(ಆರ್. ಅಶೋಕ)
ಕಂದಾಯ ಸಚಿವರು

ಕರ್ನಾಟಕ ಸರ್ಕಾರ

ಸಂ:ಕಂಇ 82 ಎಸ್‌ಎಸ್‌ಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:21.03.2020

122
915
23/3/20

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬೆಂಗಳೂರು.

ಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ರಘುಪತಿ ಭಟ್ ಕೆ. (ಉಡುಪಿ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2786 ಕ್ಕೆ ಉತ್ತರಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ರಘುಪತಿ ಭಟ್ ಕೆ. (ಉಡುಪಿ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2786 ಕ್ಕೆ ಸಂಬಂಧಿಸಿದಂತೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

(ನಾಗರಾಜು ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕಂದಾಯ ಇಲಾಖೆ (ಭೂಮಾಪನ)

ಕರ್ನಾಟಕ ವಿಧಾನಸಭೆ

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2786
2	ಸದಸ್ಯರ ಹೆಸರು	ಶ್ರೀ ರಘುಪತಿ ಭಟ್ ಕೆ. (ಉಡುಪಿ)
3	ಉತ್ತರಿಸಬೇಕಾದ ದಿನಾಂಕ	23.03.2020
4	ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಪ್ರಸ್ತುತ ಉಡುಪಿ ಜಿಲ್ಲೆಗೆ ಕೇವಲ ಒಂದು ಉಪ ವಿಭಾಗಾಧಿಕಾರಿ (ಎ.ಸಿ) ಕಛೇರಿ ಕುಂದಾಪುರದಲ್ಲಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ)	ಹಾಗಿದ್ದಲ್ಲಿ, ಉಡುಪಿ ಜಿಲ್ಲೆಗೆ ಮತ್ತೊಂದು ಉಪ ವಿಭಾಗಾಧಿಕಾರಿ ಕಛೇರಿಯನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ;	ಉಡುಪಿ ಜಿಲ್ಲೆಯಲ್ಲಿ ಒಟ್ಟು 7 ತಾಲ್ಲೂಕುಗಳಿದ್ದು, ಕುಂದಾಪುರ ಉಪ ವಿಭಾಗ ಮಾತ್ರ ಇರುತ್ತದೆ. ಹೀಗಾಗಿ, ಜಿಲ್ಲಾಧಿಕಾರಿಗಳಿಂದ ಸ್ವೀಕೃತವಾಗಿರುವ ವರದಿಯನ್ನಾಧರಿಸಿ, ಉಡುಪಿ, ಕಾರ್ಕಳ, ಹೆಬ್ರಿ ಹಾಗೂ ಕಾಪು ತಾಲ್ಲೂಕುಗಳನ್ನು ಒಳಗೊಂಡಂತೆ ಉಡುಪಿ ಉಪ ವಿಭಾಗ ರಚಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.
ಇ)	ಕೈಗೊಂಡಲ್ಲಿ ಯಾವ ಕಾಲಮಿತಿಯೊಳಗೆ ತೆರೆಯಲಾಗುವುದು (ವಿವರ ನೀಡುವುದು)	ನೂತನ ಉಪ ವಿಭಾಗ ರಚಿಸುವ ವಿಷಯವು ಸರ್ಕಾರದ ನೀತಿಗೆ ಸಂಬಂಧಿಸಿದೆ. ಯಾವುದೇ ಒಂದು ತಾಲ್ಲೂಕನ್ನು ಉಪ ವಿಭಾಗವನ್ನಾಗಿ ರಚಿಸಬೇಕಾದರೆ ಭೌಗೋಳಿಕ ಮತ್ತು ಆಡಳಿತಾತ್ಮಕ ಅಗತ್ಯಗಳ ಜೊತೆಗೆ ರಾಜ್ಯದ ಹಣಕಾಸಿನ ಪರಿಸ್ಥಿತಿಯನ್ನು ಅವಲಂಬಿಸಿರುತ್ತದೆ. ಅದರಂತೆ ಹೊಸ ಉಪ ವಿಭಾಗಗಳನ್ನು ರಚಿಸುವ ಪ್ರಸ್ತಾವನೆಗಳು ಹಣಕಾಸಿನ ಸಂಪನ್ಮೂಲಗಳ ಕ್ರೋಢೀಕರಣ ಹಾಗೂ ಹಣಕಾಸಿನ ಇತಿಮಿತಿಗಳನ್ನು ಒಳಗೊಂಡಿರುತ್ತವೆ. ಈ ಅಂಶಗಳನ್ನು ಆಧರಿಸಿ ಇಂತಹ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗುವುದು.

ಸಂಖ್ಯೆ: ಕಂಇ 82 ಎಸ್ಎಸ್‌ಸಿ 2020

(ಆರ್. ಅಶೋಕ)
ಕಂದಾಯ ಸಚಿವರು

ಕರ್ನಾಟಕ ಸರಕಾರ

ಸಂಖ್ಯೆ: ಕಂಇ 43 ಡಬ್ಲ್ಯೂ ಬಿಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:21.03.2020.

16
415
23/3/20

ಇವರಿಂದ,

ಸರ್ಕಾರದ ಕಾರ್ಯದರ್ಶಿ
ಕಂದಾಯ ಇಲಾಖೆ,
ಬೆಂಗಳೂರು.

ಇವರಿಗೆ,

ಕಾರ್ಯದರ್ಶಿ,
ಕರ್ನಾಟಕ ವಿಧಾನಸೌಧ ,
ವಿಧಾನಸೌಧ.

ಮಾನ್ಯರೆ,

ವಿಷಯ: **ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೊಳಿ (ಅರಬಾವಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 794 ಕ್ಕೆ ಉತ್ತರ ಒದಗಿಸುವ ಬಗ್ಗೆ.**

* * * * *

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೊಳಿ (ಅರಬಾವಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 794 ಕ್ಕೆ ಉತ್ತರದ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಜಗದೀಶ ಕೆ)
ಶಾಖಾಧಿಕಾರಿ
ಕಂದಾಯ ಇಲಾಖೆ (ಭೂ ಸುಧಾರಣಾ ಕೋಶ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ	:	794
ಸದಸ್ಯರ ಹೆಸರು	:	ಶ್ರೀ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೊಳಿ (ಅರಬಾವಿ)
ಉತ್ತರಿಸುವ ಸಚಿವರು	:	ಕಂದಾಯ ಸಚಿವರು
ಉತ್ತರಿಸುವ ದಿನಾಂಕ	:	23.03.2020

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲ್ಲೂಕು ಕಛೇರಿಯು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ)	ಹಾಗಿದ್ದಲ್ಲಿ, ಈ ತಾಲ್ಲೂಕು ಕೇಂದ್ರದಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣಕ್ಕಾಗಿ ಕೈಗೊಂಡ ಕ್ರಮಗಳೇನು;	ಮೂಡಲಗಿ ತಾಲ್ಲೂಕು ಕೇಂದ್ರದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಗುರುತಿಸಿರುವ ಮೂಡಲಗಿ ಪುರಸಭೆಗೆ ಸೇರಿದ ರಿ.ಸ.ನಂ.511/16/16 ರಲ್ಲಿ 03 ಎಕರೆ 16 ಗುಂಟೆ. ಜಮೀನು ಸಾರ್ವಜನಿಕರ ತಕರಾರಿಗೆ ಒಳಗಾಗಿರುವುದರಿಂದ ಬೇರೊಂದು ಸೂಕ್ತ ಜಮೀನು ಗುರುತಿಸುವ ಪ್ರಕ್ರಿಯೆ ಜಾರಿಯಲ್ಲಿದೆ.
ಇ)	ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣಕ್ಕೆ ಎಷ್ಟು ಮೊತ್ತದ ಅನುದಾನ ಮೀಸಲಿಡಲಾಗಿದೆ; ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)	ಹೊಸದಾಗಿ ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿಯನ್ನು ರೂ.10.00 ಕೋಟಿಗಳಲ್ಲಿ ನಿರ್ಮಿಸಲು ಅವಕಾಶ ಕಲ್ಪಿಸಿಕೊಳ್ಳಲಾಗಿದೆ. ಮಿನಿ ವಿಧಾನ ನಿರ್ಮಾಣಕ್ಕಾಗಿ ಜಮೀನು ಗುರುತಿಸಿ, ಜಿಲ್ಲಾಧಿಕಾರಿಗಳಿಂದ ಸವಿವರ ಅಂದಾಜುಪಟ್ಟಿ ಸ್ವೀಕೃತವಾದ ನಂತರ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಪರಿಶೀಲಿಸಲಾಗುವುದು.

ಕಂಇ 43 ಡಬ್ಲ್ಯೂಬಿಎಆರ್ 2020

(ಆರ್. ಅಶೋಕ)
ಕಂದಾಯ ಸಚಿವರು

ಕರ್ನಾಟಕ ಸರಕಾರ

ಸಂಖ್ಯೆ: ಕಂಇ 44 ಡಬ್ಲ್ಯೂಬಿಆರ್ 2020

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:21.03.2020.

ಇವರಿಂದ,

ಸರ್ಕಾರದ ಕಾರ್ಯದರ್ಶಿ
ಕಂದಾಯ ಇಲಾಖೆ,
ಬೆಂಗಳೂರು.

31
LAS
23/3/20

ಇವರಿಗೆ,

ಕಾರ್ಯದರ್ಶಿ,
ಕರ್ನಾಟಕ ವಿಧಾನಸೌಧ ,
ವಿಧಾನಸೌಧ.

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಭೀಮಾನಾಯ್ಕ ಎಲ್.ಬಿ.ಪಿ. (ಹಗರಿಬೊಮ್ಮನಹಳ್ಳಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 2266ಕ್ಕೆ ಉತ್ತರ ಒದಗಿಸುವ ಬಗ್ಗೆ.

* * * * *

ಪ್ರಸ್ತಾವಿತ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಭೀಮಾನಾಯ್ಕ ಎಲ್.ಬಿ.ಪಿ. (ಹಗರಿಬೊಮ್ಮನಹಳ್ಳಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 2266ಕ್ಕೆ ಉತ್ತರದ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಜಗದೀಶ ಕೆ)
ಶಾಖಾಧಿಕಾರಿ
ಕಂದಾಯ ಇಲಾಖೆ (ಭೂ ಸುಧಾರಣಾ ಕೋಶ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ : 2266

ಸದಸ್ಯರ ಹೆಸರು : ಶ್ರೀ ಭೀಮಾನಾಯ್ಕ ಎಲ್.ಬಿ.ಪಿ (ಹಗರಿಬೊಮ್ಮನಹಳ್ಳಿ)

ಉತ್ತರಿಸುವ ಸಚಿವರು : ಕಂದಾಯ ಸಚಿವರು

ಉತ್ತರಿಸುವ ದಿನಾಂಕ : 23.03.2020

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಹಗರಿಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಹೊಸ ಕೊಟ್ಟೂರು ತಾಲ್ಲೂಕು ಕೇಂದ್ರಕ್ಕೆ ಮಿನಿ ವಿಧಾನಸೌಧ ನಿರ್ಮಿಸಲು ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ)	ಬಂದಿದ್ದಲ್ಲಿ, ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಡಿ.ಪಿ.ಆರ್. ನೀಲನಕ್ಷೆ ಹಾಗೂ ಅಂದಾಜುಪಟ್ಟಿ ತಯಾರಿಸಲಾಗಿದೆಯೇ;	ಕೊಟ್ಟೂರು ತಾಲ್ಲೂಕಿನಲ್ಲಿ ಹೊಸ ಮಿನಿ ವಿಧಾನಸೌಧ ಕಟ್ಟಡವನ್ನು ಕೊಟ್ಟೂರು ಗ್ರಾಮದ ಸ.ನಂ.732/ಎ ವಿ 1.86 ಎಕರೆ ಮತ್ತು ಸ.ನಂ.733/ಎ ವಿ.0.75 ಎಕರೆ ಒಟ್ಟು ವಿ 2.61 ಎಕರೆ ಜಮೀನಿನಲ್ಲಿ ರೂ.10.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು Tentative line estimate ಸರ್ಕಾರದಲ್ಲಿ ಸ್ವೀಕೃತವಾಗಿದ್ದು, ಸದರಿ ಕಾಮಗಾರಿಯ ರೂ.10.00 ಕೋಟಿಗಳ ಸವಿವರ ಅಂದಾಜುಪಟ್ಟಿ ಮತ್ತು ನಕ್ಷೆಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿ, ಬಳ್ಳಾರಿ ಇವರಿಗೆ ತಿಳಿಸಲಾಗಿದೆ.
ಇ)	ಮಿನಿ ವಿಧಾನಸೌಧಕ್ಕೆ ನಿಗದಿಪಡಿಸಲಾದ ಅನುದಾನ ಎಷ್ಟು (ವಿವರ ನೀಡುವುದು)?	ಹೊಸದಾಗಿ ಮಿನಿ ವಿಧಾನಸೌಧ ಕಟ್ಟಡವನ್ನು ರೂ.10.00 ಕೋಟಿಗಳ ಮಿತಿಯೊಳಗೆ ನಿರ್ಮಿಸಲು ಅವಕಾಶ ಕಲ್ಪಿಸಲಾಗಿದೆ.

ಕಂಇ 44 ಡಬ್ಲ್ಯೂಬಿಆರ್ 2020

(ಆರ್. ಅಶೋಕ)
ಕಂದಾಯ ಸಚಿವರು

<u>ಕರ್ನಾಟಕ ಸರ್ಕಾರ</u>

ಸಂ:ಕಂಇ 81 ಎಸ್‌ಎಸ್‌ಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:21.03.2020

55

23/3

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬೆಂಗಳೂರು.

ಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಹೂಲಗೇರಿ ಡಿ.ಎಸ್.(ಲಿಂಗಸುಗೂರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2781 ಕ್ಕೆ ಉತ್ತರಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಹೂಲಗೇರಿ ಡಿ.ಎಸ್.(ಲಿಂಗಸುಗೂರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2781 ಕ್ಕೆ ಸಂಬಂಧಿಸಿದಂತೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

(ನಾಗರಾಜು ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕಂದಾಯ ಇಲಾಖೆ (ಭೂಮಾಪನ)

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2781
ಸದಸ್ಯರ ಹೆಸರು	ಶ್ರೀ ಹೂಲಗೇರಿ ಡಿ.ಎಸ್. (ಲಿಂಗಸುಗೂರು)
ಉತ್ತರಿಸಬೇಕಾದ ದಿನಾಂಕ	23.03.2020
ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನಲ್ಲಿ ಬರುವ ಹಟ್ಟಿ ಹಾಗೂ ನಾಗರಾಳ ಪಟ್ಟಣವನ್ನು ಹೊಸ ಹೋಬಳಿ ಕೇಂದ್ರವನ್ನಾಗಿ ರಚನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)	ಹಟ್ಟಿ ಮತ್ತು ನಾಗರಾಳ ಪಟ್ಟಣಗಳನ್ನು ಹೊಸ ಹೋಬಳಿ ಕೇಂದ್ರಗಳನ್ನಾಗಿ ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.
ಆ)	ಹೊಸದಾಗಿ ರಚನೆಯಾಗುವ ಸದರಿ ಹೋಬಳಿ ಕೇಂದ್ರಗಳಿಗೆ ಎಷ್ಟು ಗ್ರಾಮಗಳು ಸೇರ್ಪಡೆಗೊಳ್ಳಲಿವೆ; ಅವು ಯಾವುವು?	ಉದ್ಭವಿಸುವುದಿಲ್ಲ.

ಸಂಖ್ಯೆ: ಕಂಇ 81 ಎಸ್‌ಎಸ್‌ಸಿ 2020

(ಆರ್. ಅಶೋಕ)
ಕಂದಾಯ ಸಚಿವರು

ಕರ್ನಾಟಕ ಸರಕಾರ

ಸಂಖ್ಯೆ: DSSP / LAQ / 20 / 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿ: 21.03.2020

42
23/3/20

ಇವರಿಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ,
ಬೆಂಗಳೂರು.

ಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ,
ವಿಧಾನ ಸೌಧ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ(ಕುಂದಾಪುರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1953ಕ್ಕೆ ಉತ್ತರಿಸುವ ಕುರಿತು

ಉಲ್ಲೇಖ: ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ, ವಿಧಾನ ಸೌಧ, ಬೆಂಗಳೂರು ರವರ ಪತ್ರದ ಸಂಖ್ಯೆ:ಪ್ರಶಾವಿಸ/15ನೇವಿಸ/6ಅ/ಪ್ರ.ಸಂ:1953/2020, ದಿನಾಂಕ:09.03.2020.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ವಿಧಾನಸಭೆಯ ಸದಸ್ಯರಾದ ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ(ಕುಂದಾಪುರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1953ಕ್ಕೆ ಕೋರಿರುವ ಪ್ರಶ್ನೆಗೆ ಉತ್ತರವನ್ನು ಸಿದ್ಧಪಡಿಸಿ 100 ಪ್ರತಿಗಳಲ್ಲಿ ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

Geetha.S

ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂ ಸುಧಾರಣಾ ಕೋಶ)
ಸಾ.ಭ &ಪಿಂ.ಯೋಜನೆ

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1953
ಸದಸ್ಯರ ಹೆಸರು	ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ)
ವಿಷಯ	ಪಿಂಚಣಿ ಪಾವತಿ ವಿಳಂಬ
ಉತ್ತರಿಸಬೇಕಾದ ದಿನಾಂಕ	23.03.2020
ಉತ್ತರಿಸುವ ಸಚಿವರು	ಕಂದಾಯ ಸಚಿವರು

ಪ್ರಶ್ನೆ	ಉತ್ತರ
ಅ) ವಿಧವಾ ವೇತನ, ಸಂಧ್ಯಾ ಸುರಕ್ಷಾ, ಅಂಗವಿಕಲ, ವೃದ್ಧಾಪ್ಯ ವೇತನ, ಮನಸ್ವಿನಿ ಮತ್ತು ಮೈತ್ರಿ ವೇತನಗಳು ಕಂಪ್ಯೂಟರ್ ತಂತ್ರಾಂಶ ಖಜಾನೆ 1 (K1)ರಿಂದ ಖಜಾನೆ 2 (K2) ಗೆ ವರ್ಗಾವಣೆ ಮಾಡುವಾಗ ಅನೇಕ ಫಲಾನುಭವಿಗಳಿಗೆ 2017 ರ ಜುಲೈ ತಿಂಗಳಿನಿಂದ ಹಣ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸಾಮಾಜಿಕ ಭದ್ರತಾ ಯೋಜನೆಯಡಿ ಪಿಂಚಣಿಯನ್ನು ಪಾರದರ್ಶಕವಾಗಿ ವಿತರಿಸುವ ನಿಟ್ಟಿನಲ್ಲಿ ಖಜಾನೆ-2 ಯೋಜನೆ ಜಾರಿಗೆ ತಂದಿದ್ದು, ಈ ಯೋಜನೆಯಡಿ ಪಿಂಚಣಿ ಮಂಜೂರಾತಿಯಿಂದ ಪಿಂಚಣಿ ಪಾವತಿಯಾಗುವವರೆಗೆ ಮಾಹಿತಿಯು ವಿದ್ಯುನ್ಮಾನ ತಂತ್ರಾಂಶದ ಮೂಲಕ ಲಭ್ಯವಿರುತ್ತದೆ. ಈಗಾಗಲೇ ಖಜಾನೆ-2 ರಲ್ಲಿ ಪಿಂಚಣಿ ಪಡೆಯುತ್ತಿದ್ದ ಫಲಾನುಭವಿಗಳ ದಾಖಲೆಗಳನ್ನು ಕಡ್ಡಾಯ ಮಾಹಿತಿ ಸಂಗ್ರಹಣೆಯೊಂದಿಗೆ ಖಜಾನೆ-2 ಗೆ ಹಂತ ಹಂತವಾಗಿ ವರ್ಗಾಯಿಸಲಾಗಿರುತ್ತದೆ. ಪ್ರತಿ ಹಂತದಲ್ಲೂ ಖಜಾನೆ-2 ರಲ್ಲಿ ಯಶಸ್ವಿಯಾಗಿ ಸ್ವೀಕೃತವಾದ ದಾಖಲೆಗಳನ್ನು ಮರುಹೊಂದಾಣಿಕೆ ಮಾಡಿಕೊಂಡ ನಂತರ ಖಜಾನೆ-1 ರಲ್ಲಿ ರದ್ದುಗೊಳಿಸಲಾಗಿರುತ್ತದೆ. ಖಜಾನೆ-2 ಗೆ ವರ್ಗಾವಣೆಯಾಗುವವರೆಗೆ ಫಲಾನುಭವಿಗಳಿಗೆ ಖಜಾನೆ-1 ರಲ್ಲಿಯೇ ಪಿಂಚಣಿ ಪಾವತಿಸಲಾಗಿರುತ್ತದೆ.
ಆ) ಪಿಂಚಣಿ ಪಾವತಿಯಾಗದಿರುವವರಿಗೆ ಪುನಃ ಪಾವತಿ ಮಾಡುವ ಬಗ್ಗೆ ಸರ್ಕಾರದ ಕೈಗೊಂಡ ಕ್ರಮವೇನು;	ಸಾಮಾಜಿಕ ಭದ್ರತಾ ಯೋಜನೆಗಳಡಿ ಮಂಜೂರಾದ ಅರ್ಹ ಫಲಾನುಭವಿಗಳಿಗೆ ಪ್ರತಿ ಮಾಹೆ ಖಜಾನೆಯಲ್ಲಿ ಬಿಲ್ ತಯಾರಿಸಿ ಪಿಂಚಣಿ ಪಾವತಿ ಮಾಡಲಾಗುತ್ತಿದೆ. ಉಡುಪಿ ಜಿಲ್ಲೆಯಲ್ಲಿ ಜನವರಿ 2020 ರಲ್ಲಿ 125731 ಫಲಾನುಭವಿಗಳಿಗೆ ಪಿಂಚಣಿ ಪಾವತಿಸಲಾಗಿದೆ. ಮುಂದುವರೆದು, ಅಸಮರ್ಪಕ ಬ್ಯಾಂಕ್ ಖಾತೆ ವಿವರ/ ಐಎಫ್‌ಎಸ್‌ಸಿ ಕೋಡ್/ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇಲ್ಲದ ಬ್ಯಾಂಕ್‌ಗಳ ವಿವರ ನೀಡಿರುವುದರಿಂದ NO SUCH ACCOUNT/ INVALID BANK DETAILS ಎಂಬ ಕಾರಣಕ್ಕೆ 1826 ಫಲಾನುಭವಿಗಳ ಪಿಂಚಣಿ ಖಜಾನೆ-2 ರಲ್ಲಿ ಸ್ಥಗಿತಗೊಂಡಿರುತ್ತದೆ. ತಾತ್ಕಾಲಿಕವಾಗಿ ಸ್ಥಗಿತಗೊಂಡಿರುವ ಸದರಿ ಪ್ರಕರಣಗಳ ಮಾಹಿತಿಯನ್ನು ಸಂಬಂಧಪಟ್ಟ ಜಿಲ್ಲೆ/ತಾಲ್ಲೂಕುಗಳಲ್ಲಿ ತಂತ್ರಾಂಶದಲ್ಲಿ ಅಳವಡಿಸಲಾಗಿದ್ದು, ಫಲಾನುಭವಿಗಳ ಭೌತಿಕ ಪರಿಶೀಲನೆ ನಡೆಸಿ, ಬ್ಯಾಂಕ್ ಖಾತೆ ವಿವರ (ಪಾಸ್ ಪುಸ್ತಕದ ಪ್ರತಿಯೊಂದಿಗೆ), ವಿಳಾಸ, ಆಧಾರ್ ಹಾಗೂ ಇನ್ನಿತರೆ ಅಗತ್ಯ ಮಾಹಿತಿಯನ್ನು ಗ್ರಾಮಲೆಕ್ಕಾಧಿಕಾರಿಗಳು ಫಲಾನುಭವಿಗಳಿಂದ ಸಂಗ್ರಹಿಸಿ, ತಂತ್ರಾಂಶದಲ್ಲಿ ಅಳವಡಿಸಿ ತಹಸೀಲ್ದಾರರು ಡಿ.ಎಸ್.ಇ.ಯೊಂದಿಗೆ ಅನುಮೋದನೆ ನೀಡುತ್ತಿದ್ದು ನಂತರ ಖಜಾನೆ-2ಗೆ ಅನುಕಲನೆ ಮೂಲಕ ವರ್ಗಾಯಿಸಿ ತ್ವರಿತವಾಗಿ ಪಿಂಚಣಿ ಪಾವತಿಗೆ ಕ್ರಮವಹಿಸಲಾಗುತ್ತಿದೆ. ತಾಲ್ಲೂಕುವಾರು ಫಲಾನುಭವಿಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ. ಅಲ್ಲದೇ, ಖಜಾನೆ-1ರಡಿ ಇದ್ದ ಅಪೂರ್ಣ ಮಾಹಿತಿಯನ್ನೊಳಗೊಂಡ 992 ಫಲಾನುಭವಿಗಳ ದಾಖಲೆಗಳನ್ನು ಖಜಾನೆ-2 ಗೆ ವರ್ಗಾವಣೆ ಮಾಡಲು ಕ್ಷೇತ್ರ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದ್ದು, ಸಮರ್ಪಕ ಮಾಹಿತಿಯನ್ನು ಪಡೆದು ತಂತ್ರಾಂಶದ ಮೂಲಕ ನ್ಯೂನತೆ ಸರಿಪಡಿಸಿ ಮಾಸಿಕ ಪಿಂಚಣಿ ಪಾವತಿಸುವ ಕಾರ್ಯ ಪ್ರಗತಿಯಲ್ಲಿದೆ. ತಾಲ್ಲೂಕುವಾರು ಫಲಾನುಭವಿಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.
ಇ) ಉಡುಪಿ ಜಿಲ್ಲೆಯಲ್ಲಿ ಎಷ್ಟು ಜನ ಫಲಾನುಭವಿಗಳಿಗೆ K2 ಸಮಸ್ಯೆಯಿಂದ ಪಾವತಿಯಾಗದೇ ಇರುವ ಹಣವೆಷ್ಟು? (ವಿಧಾನಸಭಾವಾರು ವಿವರ ನೀಡುವುದು)	

ಡಿಎಸ್‌ಎಸ್‌ಪಿ-ಎಲ್‌ಎ-ಕ್ಯೂಸಿ/20/2020

(ಆರ್. ಅಶೋಕ)
ಕಂದಾಯ ಸಚಿವರು

ಮಾನ್ಯ ವಿಧಾನ ಸಭೆ ಸದಸ್ಯರಾದ ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) ಇವರ ಚುಕ್ಕೆ ಗುರುತಿಲ್ಲದ
ಪ್ರಶ್ನೆ ಸಂಖ್ಯೆ: 1953 ರ ಅನುಬಂಧ

#	ಜಿಲ್ಲೆ	ತಾಲ್ಲೂಕು	ತಾತ್ಕಾಲಿಕವಾಗಿ ಸ್ಥಗಿತಗೊಂಡಿರುವ ಫಲಾನುಭವಿಗಳ ಸಂಖ್ಯೆ	ಖಜಾನೆ-1ರಡಿ ಇದ್ದ ಅಪೂರ್ಣ ಮಾಹಿತಿಯನ್ನೊಳಗೊಂಡ ಫಲಾನುಭವಿಗಳ ಸಂಖ್ಯೆ
1	ಜೀದರ	ಬ್ರಹ್ಮಾವರ	297	194
2		ಬೈಂದೂರು	82	96
3		ಕಾರ್ಕಳ	310	74
4		ಕಾಪು	9	247
5		ಕುಂದಾಪುರ	390	133
6		ಉಡುಪಿ	738	248
ಒಟ್ಟು			**1826**	**992**

<u>ಕರ್ನಾಟಕ ಸರ್ಕಾರ</u>

ಸಂ:ಕಂಇ 73 ಎಸ್ಎಸ್ಸಿ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:21.03.2020

125

23/3/2020

<u>ಇಂದ:</u>
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬೆಂಗಳೂರು.

<u>ಗೆ:</u>
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ,
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ರಾಮದಾಸ್ ಎಸ್.ಎ. (ಕೃಷ್ಣರಾಜ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1954 ಕ್ಕೆ ಉತ್ತರಿಸುವ ಕುರಿತು.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ರಾಮದಾಸ್ ಎಸ್.ಎ. (ಕೃಷ್ಣರಾಜ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1954 ಕ್ಕೆ ಸಂಬಂಧಿಸಿದಂತೆ ಉತ್ತರದ 100 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ನಾಗರಾಜು ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕಂದಾಯ ಇಲಾಖೆ (ಭೂಮಾಪನ)

ಕರ್ನಾಟಕ ವಿಧಾನಸಭೆ

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1954
2	ಸದಸ್ಯರ ಹೆಸರು	ಶ್ರೀ ರಾಮದಾಸ್ ಎಸ್.ಎ. (ಕೃಷ್ಣರಾಜ)
3	ಉತ್ತರಿಸಬೇಕಾದ ದಿನಾಂಕ	23.03.2020
4	ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಇದುವರೆವಿಗೆ ಎಷ್ಟು ಗ್ರಾಮಗಳು ಪೋಡಿ ಮುಕ್ತ ವಾಗಿದೆ; ಕಳೆದ ಒಂದು ವರ್ಷದಲ್ಲಿ ಆಗಿರುವ ಕಾರ್ಯ ಪ್ರಗತಿ ಏನು;	ರಾಜ್ಯದಲ್ಲಿ ಪೋಡಿ ಮುಕ್ತ ಗ್ರಾಮ ಅಭಿಯಾನ ಯೋಜನೆಯಡಿಯಲ್ಲಿ ಈವರೆಗೆ ಒಟ್ಟು 15,547 ಗ್ರಾಮಗಳನ್ನು ಅಳತೆಗೆ ಆಯ್ಕೆ ಮಾಡಿಕೊಂಡು, 15,226 ಗ್ರಾಮಗಳ ಅಳತೆ ಪೂರ್ಣಗೊಳಿಸಲಾಗಿದೆ. ಈ ಪೈಕಿ 14,153 ಗ್ರಾಮಗಳ ದುರಸ್ತಿ ಮತ್ತು 13,314 ಗ್ರಾಮಗಳ ಇಂಡೀಕರಣ ಕಾರ್ಯ ಪೂರ್ಣಗೊಳಿಸಿ, 19,22,616 ಏಕಮಾಲೀಕತ್ವದ ಪಹಣಿಗಳನ್ನು ಸೃಜಿಸಲಾಗಿದೆ. ರಾಜ್ಯದಲ್ಲಿ ಪ್ರಸಕ್ತ ಸಾಲಿನ ಮಾಹೆ ಏಪ್ರಿಲ್-2019 ರಿಂದ ಮಾಹೆ ಫೆಬ್ರವರಿ-2020 ರ ಅವಧಿಯಲ್ಲಿ ಪೋಡಿ ಮುಕ್ತ ಗ್ರಾಮ ಅಭಿಯಾನ ಯೋಜನೆಯ ಪ್ರಗತಿ ವಿವರ ಈ ಕೆಳಕಂಡಂತಿದೆ:- ಒಟ್ಟು ವಿಧಾನ ಸಭಾ ಕ್ಷೇತ್ರಗಳು: 315 | ಅಳತೆಗೆ ಆಯ್ಕೆ ಮಾಡಿಕೊಂಡ ಗ್ರಾಮಗಳು: 3,363 | ಅಳತೆಗೆ ಪೂರ್ಣಗೊಂಡ ಗ್ರಾಮಗಳು: 2,872 | ದುರಸ್ತಿ ಪೂರ್ಣಗೊಂಡ ಗ್ರಾಮಗಳು: 2,700 | ಇಂಡೀಕರಣ ಪೂರ್ಣಗೊಂಡ ಗ್ರಾಮಗಳು: 3,153 ಅಳತೆ ಮಾಡಿರುವ ಬ್ಲಾಕಗಳ ಸಂ: 1,90,366 | ದುರಸ್ತಿ ಮಾಡಿರುವ ಬ್ಲಾಕಗಳ ಸಂ: 1,76,826 | ಇಂಡೀಕರಣವಾದ ಬ್ಲಾಕಗಳ ಸಂ: 2,49,108
